08 May 2026 Friday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜಗತ್ತು ಎಷ್ಟೇ ಮುಂದುವರೆದರೂ, ಜನರು ಎಷ್ಟೇ ಐಷಾರಾಮಿ ಜೀವನ ಪಡೆದರೂ ನೆಮ್ಮದಿಯನ್ನು ಮಾತ್ರ ದುಡ್ಡಿನಿಂದ ಖರೀದಿಸಲಾಗದು!

▸▸ ಸ್ನೇಹಾ ಆನಂದ್

info.varthaman@gmail.com
9742504916


ಶಿಕ್ಷಣದ ಭಾಗವಾಗಿರುವ ಕ್ರೀಡೆಗೂ ವಿದ್ಯಾರ್ಥಿಗಳು ಪ್ರಾಮುಖ್ಯತೆ ನೀಡಬೇಕು: ಸಿ.ಎಂ.ಲಿಂಗಪ್ಪ — ಪುಟ ಸಂ. 2

ಐತಿಹಾಸಿಕ ಶ್ರೀಮಾರಮ್ಮದೇವಿ, ಶ್ರೀಮಾಸ್ತಮ್ಮದೇವಿ ದೇವತೆಗಳ ಅಗ್ನಿಕೊಂಡ ಮಹೋತ್ಸವ — ಪುಟ ಸಂ. 3

ಹಿರಿಯ ಪತ್ರಕರ್ತರು ಚಿ.ನಾ.ಸೋಮೇಶ್‌ಗೆ ಸನ್ಮಾನ — ಪುಟ ಸಂ. 4

ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 165 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಚುನಾವಣಾ ರಾಜಕೀಯಕ್ಕೆ ವಿದಾಯ

## ಮುಂದಿನ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿಸಲ್ಲ: ಎಚ್.ವಿಶ್ವನಾಥ್

**ಮೈಸೂರು:** ಚುನಾವಣೆ ರಾಜಕೀಯದಿಂದ ನಾನು ನಿವೃತ್ತಿ ಆಗುತ್ತಿದ್ದೇನೆ. ಮುಂಬರುವ ಯಾವುದೇ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ಘೋಷಿಸಿದರು.

ನಗರದಲ್ಲಿ ಗುರುವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನನ್ನ ಮಕ್ಕಳು ಕೂಡ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ. ಅವರ ಶಕ್ತ್ಯಾನುಸಾರ ರಾಜಕೀಯದಲ್ಲಿ ಮುಂದುವರಿಯುತ್ತಾರೆ. ನಾನು ಸಹ ರಾಜಕೀಯದಲ್ಲಿ ಮುಂದುವರಿಯುತ್ತೇನೆ. ಆದರೆ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಹೇಳಿದರು.

ನಾನು ಹಲವು ಬಾರಿ ಚುನಾವಣೆ ಎದುರಿಸಿದಾಗ ಜನರೇ ಹಣ ನೀಡಿ ಆಶೀರ್ವಾದ ಮಾಡಿದ್ದರು. ಆದರೆ ಈಗ ನಾವೇ ಹಣ ನೀಡಿ ಚುನಾವಣೆ ಎದುರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಸದ್ಯದ ಪರಿಸ್ಥಿತಿಯಲ್ಲಿ ವಿಧಾನಸಭೆ ಚುನಾವಣೆ ಎದುರಿಸಲು 50 ಕೋಟಿ ಹಣ ಬೇಕು. ರಿಯಲ್ ಎಸ್ಟೇಟ್ ನಡೆಸುವವರು ನಿವೇಶನಗಳನ್ನಾದರೂ ಮಾರಾಟ ಮಾಡಿ ಚುನಾವಣೆ ಎದುರಿಸುತ್ತಾರೆ. ನನಗೆ ಒಂದು ಮನೆ, ಒಂದು ನಿವೇಶನ ಮಾತ್ರ ಇವೆ. 50 ಕೋಟಿ ಖರ್ಚು ಮಾಡಿ ಚುನಾವಣೆ ಎದುರಿಸುವಷ್ಟು ಶಕ್ತಿ ಈಗ ನನ್ನಲ್ಲಿ ಇಲ್ಲ ಎಂದರು.

ಜನಸೇವೆಯಲ್ಲಿ 50 ವರ್ಷ ಪೂರೈಸಿದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವವು ಮೇ 9ರಂದು ಚಿತ್ರದುರ್ಗದಲ್ಲಿ ಪುಟ 2ಕ್ಕೆ

### ಬಿಎಸ್‌ವೈ, ಸಿದ್ದರಾಮಯ್ಯ ವಿರುದ್ಧವೂ ವಿಶ್ವನಾಥ್ ಕಿಡಿ



ಚಿತ್ರದುರ್ಗದಲ್ಲಿ ಮೇ 9ರಂದು ಆಯೋಜಿಸಿರುವ ಬಿ.ಎಸ್.ವೈ ಅಭಿಮಾನೋತ್ಸವಕ್ಕೆ ಎಚ್.ವಿಶ್ವನಾಥ್ ಕಿಡಿಕಾರಿದರು. ಪೋಕ್ಸೋ ಕೇಸ್ ಪ್ರಕರಣದ ಆರೋಪಕ್ಕೆ ಯಡಿಯೂರಪ್ಪ ಗುರಿಯಾಗಿದ್ದಾರೆ. ಇದು ಗಂಭೀರ ಪ್ರಕರಣವಾಗಿದೆ. ಆದರೂ ಯಡಿಯೂರಪ್ಪ ಅಭಿಮಾನೋತ್ಸವಕ್ಕೆ ಮುಂದಾಗಿರುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಹಿರಿಯ ಪೊಲೀಸ್ ಅಧಿಕಾರಿ ರಾಮಚಂದ್ರ ರಾವ್ ಅವರ ಮೇಲಿನ ಅಮಾನತು ಆದೇಶ ರದ್ದುಗೊಳಿಸಿರುವ ರಾಜ್ಯ ಸರ್ಕಾರದ ಕ್ರಮಕ್ಕೆ ವಿಶ್ವನಾಥ್ ಆಕ್ಷೇಪ ವ್ಯಕ್ತಪಡಿಸಿದರು. ಈ ಹಿಂದೆ ಕೇರಳ ಬಸ್ ನಲ್ಲಿ ಸಿಕ್ಕಿದ್ದ 2 ಕೋಟಿ ಹಣವನ್ನು ಕೊಂಡೊಯ್ದು ಇನ್ಸ್‌ಪೆಕ್ಟರ್ ವಿರುದ್ಧ ಪ್ರಕರಣ ದಾಖಲಿಸಿದ್ದಂತಹ ನಟೋರಿಯಸ್ ರಾಮಚಂದ್ರ ರಾವ್. ಅವರ ಬಲಮಗಳು ರನ್ಯಾ ರಾವ್ ಚಿನ್ನಸಾಗಣೆ ಪ್ರಕರಣದಲ್ಲಿ ಸಿಕ್ಕಿಬಿದ್ದ ಪರಿಣಾಮ ರಾಮಚಂದ್ರ ರಾವ್ ಅವರನ್ನು ಅಮಾನತು ಮಾಡಲಾಗಿತ್ತು. ಅಲ್ಲದೇ ಅವರ ವಿರುದ್ಧ ಲೈಂಗಿಕ ದೌರ್ಜನ್ಯದ ಆರೋಪ ಸಹ ಕೇಳಿಬಂದಿತ್ತು. ನ್ಯಾಯ ಕೇಳಲು ಬಂದಿದ್ದ ಮಹಿಳೆಯ ಮೇಲೆ ರಾಮಚಂದ್ರ ರಾವ್ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ. ಈ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾದ ವೀಡಿಯೋ ನನ್ನದಲ್ಲ ಎಂದು ವಾದಿಸಿದ್ದರು. ಆನಂತರ ವಿಧಿವಿಜ್ಞಾನ ಪ್ರಯೋಗಾಲಯದ ನೀಡಿದ ವರದಿಯಲ್ಲಿ ಆ ವೀಡಿಯೋ ರಾಮಚಂದ್ರರಾವ್ ಅವರದ್ದೇ ಎಂಬುದು ಸಾಬೀತಾದ ಕಾರಣ ಅವರನ್ನು ಸರ್ಕಾರ ಅಮಾನತು ಮಾಡಿತ್ತು. ಇದೀಗ ಏಕಾಏಕಿ ಅವರ ಮೇಲಿನ ಅಮಾನತು ಆದೇಶ ಹಿಂಪಡೆದು ಮತ್ತೆ ಕರ್ತವ್ಯಕ್ಕೆ ನಿಯೋಜಿಸಿರುವುದು ಸರಿಯಲ್ಲ. ಈ ಸರ್ಕಾರದಲ್ಲಿ ನ್ಯಾಯಕ್ಕೆ ಬೆಲೆ ಇಲ್ಲದಂತಾಗಿದೆ ಎಂದು ವಿಶ್ವನಾಥ್ ಬೇಸರ ವ್ಯಕ್ತಪಡಿಸಿದರು.

ಈ ಎರಡು ಪ್ರಕರಣಗಳು ರಾಜ್ಯಕ್ಕೆ ಕಪ್ಪುಚುಕ್ಕೆಯಾಗಿ ಪರಿಣಮಿಸಿವೆ. ವಕೀಲರಾಗಿದ್ದ ಸಿದ್ದರಾಮಯ್ಯಗೆ ಇದೆಲ್ಲ ಗೊತ್ತಿಲ್ಲವೆ ಎಂದು ವಿಶ್ವನಾಥ್ ಪ್ರಶ್ನಿಸಿದರು.

# ವಿಜಯ್ ಮತ್ತೆ ಗವರ್ನರ್ ಭೇಟಿ

## ಸರ್ಕಾರ ರಚನೆಗೆ ಅವಕಾಶ ಕೊಡದ ರಾಜ್ಯಪಾಲರು



**ಚೆನ್ನೈ:** ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ ದಳಪತಿ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ (ಟಿವಿಕೆ) 108 ಸ್ಥಾನಗಳನ್ನು ಪಡೆದು ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಆದರೆ, ಅವರಿಗೆ ಸರ್ಕಾರ ರಚನೆಗೆ ರಾಜ್ಯಪಾಲರ ಗ್ರೀನ್ ಸಿಗ್ನಲ್ ಇನ್ನೂ ಸಿಕ್ಕಿಲ್ಲ.

ತಮಿಳುನಾಡು ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅವರನ್ನು ಬುಧವಾರ ಭೇಟಿ ಮಾಡಿ, ಕಾಂಗ್ರೆಸ್ ಬೆಂಬಲದೊಂದಿಗೆ ನೂತನ ಸರ್ಕಾರ ರಚನೆಗೆ ಹಕ್ಕು ಮಂಡಿಸಿದ್ದರು. ಆದರೆ ಅವಕಾಶ ನೀಡಿರಲಿಲ್ಲ. ಸರ್ಕಾರ ರಚನೆಗೆ ಇನ್ನೂ ಐದು ಸ್ಥಾನಗಳ ಕೊರತೆ ಎದುರಿಸುತ್ತಿರುವ ವಿಜಯ್ ಅವರು ಗುರುವಾರ ಮತ್ತೊಮ್ಮೆ ರಾಜ್ಯಪಾಲರನ್ನು ಭೇಟಿ ಮಾಡಿದ್ದಾರೆ.

ಗುರುವಾರ ಬೆಳಗ್ಗೆ ಚೆನ್ನೈನ ಲೋಕಭವನಕ್ಕೆ ಆಗಮಿಸಿ, ಎರಡನೇ ಬಾರಿಗೆ ತಮಿಳುನಾಡು ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ಭೇಟಿ ಮಾಡಿ ಸರ್ಕಾರ ರಚನೆಗೆ ಮತ್ತೊಮ್ಮೆ ಹಕ್ಕು ಮಂಡಿಸಿದರು. ಈ ವೇಳೆ ಟಿವಿಕೆ ಹಿರಿಯ ನಾಯಕರು ವಿಜಯ್ ಅವರೊಂದಿಗೆ ಇದ್ದರು.

ರಾಜ್ಯಪಾಲರೊಂದಿಗೆ ಎರಡನೇ ಸುತ್ತಿನ ಮಾತುಕತೆ ನಡೆಸಿದ ವಿಜಯ್ ಅವರು ಟಿವಿಕೆ ವಿಧಾನಸಭೆಯಲ್ಲಿ ಬಹುಮತವನ್ನು ಸಾಬೀತುಪಡಿಸಲು ಸಿದ್ಧವಾಗಿದೆ ಎಂದು ತಿಳಿಸಿದ್ದಾರೆ. ಆದರೆ ರಾಜ್ಯಪಾಲರು ಸರ್ಕಾರ ರಚಿಸಲು ಬೇಕಾದ ಸಂಖ್ಯಾಬಲ ನಿಮ್ಮ ಬಳಿ ಇದೆಯೇ ಎಂದು ಪ್ರಶ್ನಿಸಿದ್ದಾರೆ ಎನ್ನಲಾಗಿದೆ.

ಮೂಲಗಳ ಪ್ರಕಾರ, ಸರ್ಕಾರ ರಚಿಸಲು 118 ಶಾಸಕರ ಬೆಂಬಲ ಇರುವ ಪತ್ರವನ್ನು ಸಲ್ಲಿಸಬೇಕೆಂದು ಸೂಚಿಸಿದ್ದಾರೆ. 234 ಸದಸ್ಯ ಬಲದ ತಮಿಳುನಾಡು ವಿಧಾನಸಭೆಯಲ್ಲಿ ಬಹುಮತಕ್ಕೆ ಅಗತ್ಯವಿರುವ 118 ಶಾಸಕರ ಸಂಖ್ಯೆಗಿಂತ ಕಡಿಮೆಯಾಗಿದೆ ಎಂದು ರಾಜ್ಯಪಾಲರು ವಿಜಯ್ ಅವರಿಗೆ ತಿಳಿಸಿದ್ದಾರೆ. ಒಂದು ವೇಳೆ ರಾಜ್ಯಪಾಲರು ಸರ್ಕಾರ ರಚಿಸಲು ಆಹ್ವಾನಿಸದಿದ್ದರೆ ಟಿವಿಕೆ ಕಾನೂನು ಹೋರಾಟಕ್ಕೆ ಸಿದ್ಧವಾಗಿದೆ.

# ರಾಮಚಂದ್ರರಾವ್ ಅಮಾನತು ವಾಪಸ್ ಸಿಎಂ ನಿರ್ಧಾರ: ಪರಂ

**ಬೆಂಗಳೂರು:** ಡಿಜಿಪಿ ರಾಮಚಂದ್ರರಾವ್ ಅಮಾನತು ವಾಪಸ್ ಪಡೆದಿರುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಧಾರ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಾಮಚಂದ್ರರಾವ್ ಅಮಾನತನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ವಾಪಸ್ ಪಡೆದಿದೆ. ರಾಮಚಂದ್ರರಾವ್ ಈ ತಿಂಗಳ ಕೊನೆಗೆ ನಿವೃತ್ತಿ ಆಗುತ್ತಿರುವ ಹಿನ್ನೆಲೆಯಲ್ಲಿ ಸಿಎಂ ಅವರ ಅನುಮತಿ ಪಡೆದು ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಅಮಾನತು ವಾಪಸ್ ಪಡೆದಿದ್ದು ಸರಿ, ತಪ್ಪು ಎಂದು ನಾನು ಹೇಳಲು ಬರುವುದಿಲ್ಲ. ಅದು ಡಿಪಿಆರ್ ಮತ್ತು ಮುಖ್ಯಮಂತ್ರಿ ವ್ಯಾಪ್ತಿಗೆ ಬರುತ್ತದೆ. ಅವರು ತೀರ್ಮಾನ ಮಾಡಿದ್ದಾರೆ ಎಂದರು.

ಸಿಎಂ ಬಳಿ ರಾಮಚಂದ್ರರಾವ್ ವಿವರಣೆ ನೀಡಿರುವುದು ನನಗೆ ಗೊತ್ತಿತ್ತು. ನಿವೃತ್ತಿ ಆಗುತ್ತಿರುವ ಹಿನ್ನೆಲೆಯಲ್ಲಿ ಅಮಾನತು ನಿರ್ಧಾರ ಪರಿಶೀಲಿಸಿ ಎಂದು ಮನವಿ ಮಾಡಿದ್ದರು. ಮನವಿಯಲ್ಲಿ ತನಿಖೆಯನ್ನು ಮುಂದುವರಿಸಿ ಎಂದು ಕೇಳಿಕೊಂಡಿದ್ದರು. ಕೇಸ್ ಅಂತಿಮ ಆಗುವವರೆಗೂ ಪುಟ 2ಕ್ಕೆ

# ಎಐಎಡಿಎಂಕೆ ಶಾಸಕರು ಪುದುಚೇರಿ ರೆಸಾರ್ಟ್‌ಗೆ ಶಿಫ್ಟ್

**ಪುದುಚೇರಿ:** ತಮಿಳುನಾಡಿನಲ್ಲಿ ಸರ್ಕಾರ ರಚನೆಗೆ ಸಂಬಂಧಿಸಿದಂತೆ ರಾಜಕೀಯ ಚಟುವಟಿಕೆಗಳು ತೀವ್ರಗೊಂಡಿವೆ. ಎಐಎಡಿಎಂಕೆ 28 ಶಾಸಕರನ್ನು ಪುದುಚೇರಿಯ ಪೂರನ್ ಕುಪ್ಪಂನಲ್ಲಿರುವ ಖಾಸಗಿ ರೆಸಾರ್ಟ್‌ಗೆ ಶಿಫ್ಟ್ ಮಾಡಲಾಗಿದೆ.

ಟಿವಿಕೆ ಪಕ್ಷಕ್ಕೆ ಬೆಂಬಲ ನೀಡುವ ವಿಚಾರಕ್ಕೆ ಎಐಎಡಿಎಂಕೆ ಪಕ್ಷದಲ್ಲಿ ಬಿರುಕು ಮೂಡಿದ ಹಿನ್ನೆಲೆಯಲ್ಲಿ ಕೆಲವು ಶಾಸಕರು ವಿಜಯ್ ಪರ ಒಲವು ಹೊಂದಿದ್ದಾರೆ. ಹೀಗಾಗಿ ಎಐಎಡಿಎಂಕೆ ಹಿರಿಯ ನಾಯಕ ಸಿವಿ ಷಣ್ಮುಗಂ ಅವರ ಬೆಂಬಲಿಗ ಶಾಸಕರನ್ನು ಪುಟ 2ಕ್ಕೆ

# ಸಾಲದ ಹಣ ಕ್ಷಣದಲ್ಲಿ ಸೈಬರ್ ವಂಚಕರ ಪಾಲು

**ಚಿಕ್ಕಮಗಳೂರು:** ಚಿನ್ನ ಅಡವಿಟ್ಟು ಪಡೆದ ಸಾಲ ಬ್ಯಾಂಕ್ ಖಾತೆಗೆ ಜಮೆಯಾದ ಒಂದೇ ಕ್ಷಣದಲ್ಲಿ ಸೈಬರ್ ವಂಚಕರು ಹಣ ಎಗರಿಸಿದ ಪ್ರಕರಣ ಚಿಕ್ಕಮಗಳೂರಲ್ಲಿ ನಡೆದಿದೆ.

ನಗರದ ವಕೀಲರೊಬ್ಬರು ಬ್ಯಾಂಕ್‌ನಲ್ಲಿ ಚಿನ್ನ ಅಡವಿಟ್ಟು 4.14 ಲಕ್ಷ ರೂ. ಸಾಲ ಪಡೆದಿದ್ದರು. ಸಾಲ ಪಡೆದು ಬ್ಯಾಂಕ್‌ನಿಂದ ಹೊರಬರುವ ಮುನ್ನವೇ ಅವರ ಖಾತೆಯಿಂದ 99,584 ರೂ. ಹಣವನ್ನು ಸೈಬರ್ ವಂಚಕರು ಎಗರಿಸಿದ್ದಾರೆ. ಓಟಿಪಿ ಬಂದಿಲ್ಲ. ಎಪಿಕೆ ಲಿಂಕ್ ಕೂಡ ಬಂದಿಲ್ಲ ಹಣ ಮಾತ್ರ ಕಳ್ಳರ ಪಾಲಾಗಿದೆ. ಅಮೆಜಾನ್ ಪೇ ಮೂಲಕ ವಂಚಕರು ಹಣ ಎಗರಿಸಿದ್ದಾರೆ. ಹಣ ಕಳೆದು ಕೊಂಡ ವಕೀಲ ಚಿಕ್ಕಮಗಳೂರು ಠಾಣೆಗೆ ದೂರು ನೀಡಿದ್ದಾರೆ. ಪೊಲೀಸರು ತನಿಖೆ ಆರಂಭಿಸಿದ್ದಾರೆ.

# ಮೈಸೂರು–ಚೆನ್ನೈ ಬುಲೆಟ್ ರೈಲು

## ಅಂದಾಜು ನಕ್ಷೆ ಸಿದ್ಧ: ಶೀಘ್ರವೇ ಅಧಿಕೃತ ಘೋಷಣೆ ಸಾಧ್ಯತೆ

**ಬೆಂಗಳೂರು:** ಭಾರತೀಯ ರೈಲ್ವೆಯಿಂದ ಬೆಂಗಳೂರು–ಮೈಸೂರು ಬುಲೆಟ್ ರೈಲು ಮಾರ್ಗದ ಅಂದಾಜು ನಕ್ಷೆಯನ್ನೂ ಸಿದ್ಧಪಡಿಸಲಾಗಿದೆ. ಶೀಘ್ರವೇ ಈ ಮಾರ್ಗ ಅಧಿಕೃತ ಘೋಷಣೆಯಾಗಲಿದೆ ಎಂಬ ನಿರೀಕ್ಷೆ ಇದೆ.

ಬೆಂಗಳೂರಿನಿಂದ ಹೈದರಾಬಾದ್ ಮತ್ತು ಚೆನ್ನೈ ನಡುವೆ ಸಂಪರ್ಕ ಕಲ್ಪಿಸುವ 2 ಬುಲೆಟ್ ರೈಲು ಯೋಜನೆಗಳನ್ನು ಕೇಂದ್ರ ಬಜೆಟ್‌ನಲ್ಲಿ ಘೋಷಣೆ ಮಾಡಿತ್ತು. ಬಜೆಟ್‌ನಲ್ಲಿ ಸೇರ್ಪಡೆಯಾಗದಿದ್ದರೂ, ಬಹುನಿರೀಕ್ಷಿತ ಬೆಂಗಳೂರು– ಮೈಸೂರು ಬುಲೆಟ್ ರೈಲು ಮಾರ್ಗದ ಅಂದಾಜು ನಕ್ಷೆಯನ್ನೂ ಸಿದ್ಧಪಡೆಸಲಾಗಿದೆ.

ಬೆಂಗಳೂರು–ಚೆನ್ನೈ ಮಾರ್ಗವನ್ನೇ ಮೈಸೂರಿಗೆ ವಿಸ್ತರಣೆ ಮಾಡಬೇಕು ಎಂದು ಸಂಸದ ಯದುವೀರ್ ಒಡೆಯರ್ ಮಾಡಿದ್ದ ಮನವಿಗೆ ರೈಲ್ವೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ನ್ಯಾಷನಲ್ ಹೈಸ್ಪೀಡ್ ರೈಲ್ ಕಾರ್ಪೊರೇಷನ್ ಲಿಮಿಟೆಡ್ ಈ ಯೋಜನೆಗಳ ಸರ್ವೆ ಕಾರ್ಯ ನಡೆಸುತ್ತಿದೆ. ಕಾಮಗಾರಿ 2027– 28ರಲ್ಲಿ ಆರಂಭವಾಗುವ ಸಾಧ್ಯತೆಯಿದೆ.



ಭಾರತೀಯ ರೈಲ್ವೆ ಬಿಡುಗಡೆ ಮಾಡಿದ ಮಾರ್ಗ ಸೂಚಿಯಂತೆ ಮೈಸೂರು–ಬೆಂಗಳೂರು ಬುಲೆಟ್ ಮಾರ್ಗವು 157.34 ಕಿ.ಮೀ ಇದೆ. ಮೈಸೂರು, ಮಂಡ್ಯ, ರಾಮನಗರ, ಕೆಂಗೇರಿ ಮತ್ತು ಎಲೆಕ್ಟ್ರಾನಿಕ್ಸ್ ಸಿಟಿ (ಹುಸ್ಕೂರು ಸಮೀಪ) ನಿಲ್ದಾಣಗಳು ಇರಲಿವೆ. ಈ ಮಾರ್ಗವು ಕೋಡಿಹಳ್ಳಿಯಲ್ಲಿ ಚೆನ್ನೈ ಬುಲೆಟ್ ರೈಲು ಮಾರ್ಗವನ್ನು ಸೇರಿಕೊಳ್ಳಲಿದೆ. ಕೇಂದ್ರ ಸರ್ಕಾರ ಘೋಷಣೆ ಮಾಡಿರುವ ಬೆಂಗಳೂರು – ಹೈದರಾಬಾದ್, ಬೆಂಗಳೂರು ಚೆನ್ನೈ, ಜತೆಗೆ ನಿರೀಕ್ಷಿತ ಬೆಂಗಳೂರು ಮೈಸೂರು ಬುಲೆಟ್ ರೈಲು ಪುಟ 2ಕ್ಕೆ

# ಸಿಎಂ ಕುರ್ಚಿ: 'ಕ್ಲಾರಿಟಿ' ಕೊಡಿ

## ▸▸ ಸಿದ್ದರಾಮಯ್ಯ ಮುಂದುವರಿಸಿ, ಇಲ್ಲವೇ ಬದಲಿಸಿ!: ಕೆ.ಎನ್.ರಾಜಣ್ಣ

**ಮೈಸೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಕುರ್ಚಿಯಲ್ಲಿ ಹೈಕಮಾಂಡ್ ಮುಂದುವರಿಸಬೇಕು. ಇಲ್ಲವೇ, ತಕ್ಷಣ ಬದಲಿಸುವುದಾಗಿ ಘೋಷಿಸಬೇಕು ಎಂದು ಸಿಎಂ ಆಪ್ತರಾದ ಮಾಜಿ ಸಚಿವ ಕೆ.ಎನ್.ರಾಜಣ್ಣ ಆಗ್ರಹಿಸಿದರು.

ನಗರದಲ್ಲಿ ಗುರುವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಹೈಕಮಾಂಡ್ ಸಿಎಂಗೆ ಅಧಿಕಾರ ಮುಂದುವರಿಸಿ ಎಂಬ ಗ್ರೀನ್ ಸಿಗ್ನಲ್ ಕೊಡಬೇಕು. ಇಲ್ಲವೇ ಬದಲಾವಣೆ ಮಾಡ್ತೀವಿ ಎಂದು ಕ್ಲಾರಿಟಿ ಕೊಡಬೇಕು. ಇಲ್ಲದಿದ್ದರೆ ಗೊಂದಲ ಬಗೆಹರಿಯಲ್ಲ ಎಂದು ಹೇಳಿದರು.

ನಾನು ಸಿಎಂ ಬದಲಾಗುತ್ತಾರೆ ಅಂತಾನೂ ಹೇಳಲ್ಲ. ಅಥವಾ ಇರುತ್ತಾರೆ ಅಂತಾನೂ ಹೇಳಲ್ಲ. ಆದರೆ ಹೈಕಮಾಂಡ್ ಸಿಎಂಗೆ ನೀವು ಪರಿಪೂರ್ಣ ಸ್ವತಂತ್ರರು ಅಧಿಕಾರ ಮುಂದುವರೆಸಿ ಎಂಬ ಗ್ರೀನ್ ಸಿಗ್ನಲ್ ಆದರೂ ಕೊಡಲಿ. ಇಲ್ಲವೇ ಬದಲಾವಣೆ ಮಾಡುತ್ತೇವೆ ಎಂದಾದರೂ ಹೇಳಲಿ. ಎರಡು ಬಿಟ್ಟು ಬರಿ ಗೊಂದಲವೇ ಇದ್ದರೆ ಅದು ಎಲ್ಲಾ ರೀತಿಯ ಸಮಸ್ಯೆಗೆ ಕಾರಣವಾಗುತ್ತದೆ. ಪಕ್ಷಕ್ಕೆ ಹಾನಿಯಾಗಲಿದೆ ಎಂದು ಎಚ್ಚರಿಸಿದರು.



### ಸಿಎಂ ಕುರ್ಚಿ ಆಸೆ ಸಹಜ

ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಸಿಎಂ ಆಗುವ ಆಸೆ ಇರುವುದು ಸಹಜ. ಅವರು ನಮ್ಮ ಪಕ್ಷದ ಅಧ್ಯಕ್ಷರು. ಹೀಗಾಗಿ ಅವರಿಗೆ ಸಿಎಂ ಕುರ್ಚಿ ಮೇಲೆ ಜಾಸ್ತಿಯೇ ಆಸೆ ಇದೆ. ಅದು ತಪ್ಪು ಕೂಡ ಅಲ್ಲ ಎಂದು ಮಾಜಿ ಸಚಿವ ಕೆ.ಎನ್.ರಾಜಣ್ಣ ಹೇಳಿದರು.

ಮೈಸೂರಿನಲ್ಲಿ ಗುರುವಾರ ಪುಟ 2ಕ್ಕೆ

# ತಾಪಮಾನದಲ್ಲಿ ಏರುಪೇರು

**ಬೆಂಗಳೂರು:** ರಾಜ್ಯದ ಹವಾಮಾನದಲ್ಲಿ ಮುಂದಿನ 1 ವಾರ ಕಾಲ ಭಾರೀ ಏರುಪೇರು ಕಂಡುಬರಲಿದೆ. ಒಂದೆಡೆ ಸುಡುವ ಬಿಸಿಲು, ಒಣಹವೆ ಮುಂದುವರಿಯಲಿದೆ. ಮತ್ತೊಂದೆಡೆ ಮಳೆಯ ಆರ್ಭಟ ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಉತ್ತರ ಒಳನಾಡಿನ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ, ವಿಜಯಪುರ, ಬಾಗಲಕೋಟೆ, ಕೊಪ್ಪಳ ಮತ್ತು ಗದಗದಲ್ಲಿ ಸೂರ್ಯನ ತಾಪ ವಿಪರೀತವಾಗಿರಲಿದೆ. ವಾರಪೂರ್ತಿ ಸುಮಾರು 42 ಡಿಗ್ರಿ ಸೆಲ್ಸಿಯಸ್ ತಾಪಮಾನದ ಎಚ್ಚರಿಕೆ ನೀಡಲಾಗಿದೆ. ಕಲಬುರಗಿಯಲ್ಲಿ 41.6 ಡಿಗ್ರಿ ದಾಖಲಾಗಿದೆ. ಬೆಳಗಾವಿ ಹಾಗೂ ಧಾರವಾಡ ಭಾಗದಲ್ಲಿ 38 ಡಿಗ್ರಿ ಮತ್ತು ಕರಾವಳಿ ಜಿಲ್ಲೆಗಳಲ್ಲಿ 37 ಡಿಗ್ರಿಯಷ್ಟು ಬಿಸಿಲಿರಲಿದೆ. ಬೆಂಗಳೂರಿನಲ್ಲಿ ತಾಪಮಾನ 36 ಡಿಗ್ರಿ ಆಸುಪಾಸಿನಲ್ಲಿ ಇರಲಿದೆ.

ಬಿಸಿಲಿನ ನಡುವೆಯೇ ರಾಜ್ಯದ ಹಲವು ಜಿಲ್ಲೆಗಳಲ್ಲಿ ಅಲ್ಪ ಮಳೆ ಸಾಧ್ಯತೆಯೂ ಇದೆ. ಹವಾಮಾನ ಇಲಾಖೆಯು ಪುಟ 2ಕ್ಕೆ

# ನಿತೀಶ್ ಕುಮಾರ್ ಪುತ್ರ ಸಚಿವ ಸಂಪುಟಕ್ಕೆ ಸೇರ್ಪಡೆ

**ಬಿಹಾರ:** ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ತಮ್ಮ ಸಚಿವ ಸಂಪುಟ ವಿಸ್ತರಣೆ ಮಾಡಿದ್ದಾರೆ. ಮಾಜಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಪುತ್ರ ನಿಶಾಂತ್ ಕುಮಾರ್ ಸೇರಿದಂತೆ ಜೆಡಿಯು, ಬಿಜೆಪಿ ನೇತೃತ್ವದ ಮೈತ್ರಿಕೂಟದ 31 ಶಾಸಕರು ನೂತನ ಸಚಿವರಾಗಿ ಗುರುವಾರ ಪಮಾಣವಚನ ಸ್ವೀಕರಿಸಿದರು.



ಕಳೆದ ತಿಂಗಳು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ರಾಜ್ಯಸಭೆ ಪ್ರವೇಶಿಸಿದ ನಿತೀಶ್ ಕುಮಾರ್ ಅವರ ಪುತ್ರ ನಿಶಾಂತ್ ಕುಮಾರ್ ಸಂಪುಟಕ್ಕೆ ಸೇರ್ಪಡೆಗೊಂಡಿದ್ದಾರೆ. ಬಿಜೆಪಿಯ 15 ಶಾಸಕರು, ಜೆಡಿಯುನಿಂದ 13 ಮಂದಿ ನೂತನ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ.

ಏಪ್ರಿಲ್ 15ರಂದು ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಮತ್ತು ಇಬ್ಬರು ಉಪಮುಖ್ಯಮಂತ್ರಿಗಳಾದ ವಿಜಯ್ ಕುಮಾರ್ ಚೌಧರಿ ಮತ್ತು ಬಿಜೇಂದ್ರ ಪ್ರಸಾದ್ ಯಾದವ್ ಪ್ರಮಾಣವಚನ ಸ್ವೀಕರಿಸಿದ್ದರು. ಇಂದು ಪ್ರಮಾಣ ವಚನ ಸ್ವೀಕರಿಸಿರುವ ಸಚಿವರಿಗೆ ಖಾತೆ ಹಂಚಿಕೆಯಾಗಬೇಕಿದೆ.

ರಾಜ್ಯಪಾಲರಾದ ಲೆಫ್ಟಿನೆಂಟ್ ಜನರಲ್ (ನಿವೃತ್ತ) ಸಯ್ಯದ್ ಅತಾ ಹಸ್ನೈನ್ ಅವರು ನೂತನ ಸಚಿವರಿಗೆ ಪ್ರತಿಜ್ಞಾ ವಿಧಿ ಬೋಧಿಸಿದ್ದಾರೆ. ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಮತ್ತು ಬಿಜೆಪಿ ಅಧ್ಯಕ್ಷ ನಿತಿನ್ ನವೀನ್ ಪಾಲ್ಗೊಂಡಿದ್ದರು.

# ವಿನಯ್ ಕುಲಕರ್ಣಿ ಅರ್ಜಿ ಮೇ 26ಕ್ಕೆ ಮುಂದೂಡಿಕೆ

**ಬೆಂಗಳೂರು:** ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ವಿನಯ್ ಕುಲಕರ್ಣಿ ಅವರು ಶಿಕ್ಷೆ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಮೇ 26ಕ್ಕೆ ಮುಂದೂಡಿದೆ.



ಶಿಕ್ಷೆ ಅಮಾನತ್ತಿನಲ್ಲಿಟ್ಟು ಜಾಮೀನು ನೀಡುವಂತೆ ಕೋರಿ ವಿನಯ್ ಕುಲಕರ್ಣಿ ಅರ್ಜಿ ಸಲ್ಲಿಸಿದ್ದರು. ಅಲ್ಲದೇ ಪೊಲೀಸ್ ಅಧಿಕಾರಿ ಎ19 ಚೆನ್ನಕೇಶವ್ ಟೆಂಗರಿಕರ್ ಹಾಗೂ ಚಂದ್ರಶೇಖರ್ ಇಂಡಿ ಸಹ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಗಳನ್ನು ನ್ಯಾಯಮೂರ್ತಿ ಸಚಿನ್ ಶಂಕರ್ ಮುಗದಂ ಮತ್ತು ನ್ಯಾ.ರಾಜೇಶ್ ರೈ ಅವರಿದ್ದ ದ್ವಿಸದಸ್ಯ ಪೀಠ ಅರ್ಜಿ ವಿಚಾರಣೆ ನಡೆಸಿತು.

ಚೆನ್ನಕೇಶವ್ ಟೆಂಗರಿಕರ್ ಪರವಾಗಿ ಹಿರಿಯ ವಕೀಲ ಪಿಪಿ ಹೆಗ್ಡೆ ವಾದಿಸಿ, 7 ವರ್ಷ ಜೈಲು ಶಿಕ್ಷೆ ಆಗಿದೆ. ಜಾಮೀನು ಪುಟ 2ಕ್ಕೆ

# ಅಸ್ತಿತ್ವಕ್ಕಾಗಿ ಹೋರಾಟ ಪಾಶ್ಚತ್ಯರ ಪರಿಕಲ್ಪನೆ

## ಭಾಷೆ, ಜಾತಿ, ಪಂಗಡ ಮೀರಿ ಬಂಧುತ್ವ ನೆಲೆಗೊಳ್ಳಲಿ: ಮೋಹನ್ ಭಾಗವತ್

**ಮೈಸೂರು:** ಅಸ್ತಿತ್ವಕ್ಕಾಗಿ ಮತ್ತೊಬ್ಬರ ವಿರುದ್ಧ ಹೋರಾಟ ನಡೆಸುವುದು ಪಾಶ್ಚತ್ಯರ ಪರಿಕಲ್ಪನೆ. ಭಾರತೀಯರು ಭ್ರಾತೃತ್ವ ಮತ್ತು ಪರಸ್ಪರ ಸಹಾಯದೊಂದಿಗೆ ನಾಗರಿಕತೆ ಕಟ್ಟಿದ್ದಾರೆ. ನಮ್ಮ ಸಮಾಜವು, ಪರೋಪಕಾರವೇ ಸೇವೆ, ಕರ್ತವ್ಯವೇ ಜೀವನದ ಪರಮ ಗುರಿಯೆಂದು ತಿಳಿದಿದೆ ಎಂದು ಆರ್‌ಎಸ್‌ಎಸ್ ಸರಸಂಘ ಸಂಚಾಲಕ ಮೋಹನ್ ಭಾಗವತ್ ಅಭಿಪ್ರಾಯಪಟ್ಟರು.

ನಗರದ ಸುತ್ತೂರು ಮಠದಲ್ಲಿ ಗುರುವಾರ ನಡೆದ ಜೆಎಸ್‌ಎಸ್ ಮಹಾವಿದ್ಯಾಪೀಠದ ಸುವರ್ಣ ಮಹೋತ್ಸವದ ವಿಶೇಷ ಉಪನ್ಯಾಸದಲ್ಲಿ 'ರಾಷ್ಟ್ರೀಯ ಅಭಿವೃದ್ಧಿಗೆ ಸಾಮಾಜಿಕ ಸೌಹಾರ್ದತೆ ಪ್ರೇರಕ' ಕುರಿತು ಮಾತನಾಡಿದರು.

ಭಾಷೆ, ಜಾತಿ, ಪಂಗಡಗಳನ್ನು ಮೀರಿ ಬಂಧುತ್ವ ನೆಲೆಗೊಳ್ಳಬೇಕು. ಆದರೆ, ಸಹೋದರರನ್ನು ಅಸ್ಪೃಶ್ಯರಾಗಿ ಶತಮಾನಗಳ ಕಾಲ ದೂರವಿಡಲಾಗಿದೆ. ಮೇಲು–





ಕೀಳು ಎಂಬ ಮನೋಭಾವ ಕಳೆದು ಸರ್ವರೂ ಒಂದೇ ಎಂಬ ಏಕಭಾವ ಭಾರತೀಯರಲ್ಲಿ ಮೂಡಬೇಕಿದೆ ಎಂದು ವಿವರಿಸಿದರು.


ಅಂಬೇಡ್ಕರ್ ಸಂವಿಧಾನ ಸಭೆಯ ಭಾಷಣಗಳನ್ನು ಮತ್ತೊಮ್ಮೆ ಓದಿಕೊಳ್ಳಬೇಕಿದೆ. ಸಾಮಾಜಿಕ ಸ್ವಾತಂತ್ರ್ಯ ನೆಲೆಗೊಳ್ಳದೆ ರಾಜಕೀಯ, ಆರ್ಥಿಕ ಸ್ವಾತಂತ್ರ್ಯ ಸಿಗುವುದಿಲ್ಲ. ಸಂವಿಧಾನದಲ್ಲಿನ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಫ್ರೆಂಚ್ ಕ್ರಾಂತಿಯಿಂದ ತೆಗೆದುಕೊಂಡದ್ದಲ್ಲ. ಈ ಪರಿಕಲ್ಪನೆ ಭಾರತದ್ದೇ ಆಗಿದೆ. ಇದು ತಥಾಗತ ಬುದ್ಧ ನೀಡಿದ್ದು ಎಂದು ತಿಳಿಸಿದರು.

ವಿಭಿನ್ನತೆಯು ವ್ಯಕ್ತಿಗತವಾಗಿ ಎಲ್ಲರಲ್ಲೂ ಇದೆ. ಅದೇ ನಮ್ಮ ನಡುವಿನ ದೂರಕ್ಕೆ ಕಾರಣವಾಗಬಾರದು. ಸಮಾನತೆ ನೆಲೆಸಲು ನಮ್ಮ ಮನಸ್ಸಿನೊಳಗಿನ ಭೇದವೆಂಬ ಕಲ್ಮಶವನ್ನು ತೆಗೆದು ಹಾಕಬೇಕು. ಸಚ್ಚಿತ್ತತೆ ಬರಬೇಕೆಂದರೆ ಇನ್ನೊಬ್ಬರಿಗೆ ತೊಂದರೆ ಕೊಡಬಾರದು. ಎಲ್ಲರೂ ನಮ್ಮವರೇ ಎಂಬ ಭಾವ ಬಂದಾಗ ಸಮಾಜದ ವಿಕಾಸ ತಂತಾನೇ ಆಗುತ್ತದೆ ಎಂದು ಭಾಗವತ್ ಹೇಳಿದರು. ಪುಟ 2ಕ್ಕೆ

# ಬಿಜೆಪಿ ಎಷ್ಟು ಜನರ ಬೆನ್ನಿಗೆ ಚೂರಿ ಹಾಕಿಲ್ಲ?: ಪರಮೇಶ್ವರ್

**ಬೆಂಗಳೂರು:** ತಮಿಳುನಾಡಿನಲ್ಲಿ ವಿಜಯ್ ತಮಿಳ್ ವೆಟ್ರಿ ಕಳಗಂಗೆ (ಟಿವಿಕೆ) ಕಾಂಗ್ರೆಸ್ ಬೆಂಬಲ ನೀಡಿರುವುದನ್ನು ಗೃಹ ಸಚಿವ ಪರಮೇಶ್ವರ್ ಸಮರ್ಥನೆ ಮಾಡಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಎಷ್ಟು ಜನರ ಬೆನ್ನಿಗೆ ಚೂರಿ ಹಾಕಿಲ್ಲ? ಬಿಜೆಪಿ ಅವರು ಭಾರತದಲ್ಲಿ ಎಲ್ಲೆಲ್ಲಿ ಚೂರಿ ಹಾಕಿದ್ದಾರೆ ಅದನ್ನು ಮರೆತು ಬಿಡುತ್ತಾರೆ. ಬಿಜೆಪಿ ಅವರಿಗೆ ಜಾಣ ಕುರುಡು ಮರೆತು ಹೋಗಿ ಬಿಡುತ್ತಾರೆ ಎಂದು ಕಿಡಿಕಾರಿದರು.



ತಮಿಳುನಾಡಿನಲ್ಲಿ ಸರ್ಕಾರ ರಚನೆಯಾಗಬೇಕಿದೆ. ಈ ಕಾರಣಕ್ಕೆ ನಾವು ಬೆಂಬಲ ಕೊಟ್ಟಿದ್ದೇವೆ. ಜನರ ದೃಷ್ಟಿಯಿಂದಾದರೂ ಒಂದು ಸರ್ಕಾರ ಬರಬೇಕು. ಆ ದೃಷ್ಟಿಯಿಂದ ಕಾಂಗ್ರೆಸ್ ಬೆಂಬಲ ನೀಡಿದೆ. ರಾಜಕೀಯದಲ್ಲಿ ಎಲ್ಲವೂ ಸಾಧ್ಯವಿದೆ ಎಂದು ಹೇಳಿದರು.

ಸುಮಾರು ವರ್ಷಗಳಿಂದ ನಮ್ಮ ದೇಶದ ರಾಜಕೀಯದಲ್ಲಿ ಏನೆಲ್ಲಾ ಆಗಿದೆ ಎನ್ನುವುದನ್ನು ವಿಶ್ಲೇಷಣೆ ಮಾಡಿದರೆ ನಿಮಗೆ ಉತ್ತರ ಸಿಗುತ್ತದೆ. ಪುಟ 2ಕ್ಕೆ

## ಮೊದಲನೇ ಪುಟದಿಂದ

### ಚುನಾವಣಾ ರಾಜಕೀಯಕ್ಕೆ ವಿದಾಯ

ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರನ್ನು ಸನ್ಮಾನಿಸಲಿದ್ದಾರೆ. ಆದರೆ, ಈ ಕಾರ್ಯಕ್ರಮಕ್ಕೆ ಸ್ವಪಕ್ಷದವರೇ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

### ಸಿಎಂ ಕುರ್ಚಿ ಆಸೆ ಸಹಜ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ನಂತರ ಮಾತನಾಡಿದ ಅವರು, ಸಿಎಂ ಬದಲಾವಣೆ ಕುರಿತು ಹೈಕಮಾಂಡ್ ಶೀಘ್ರದಲ್ಲೇ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು. ಕಾಂಗ್ರೆಸ್ ಹೈಕಮಾಂಡ್ ಈ ಬಗ್ಗೆ ಅತಿ ಬೇಗ ಮತ್ತು ಜಾಗರೂಕವಾಗಿ ಒಂದು ಗಟ್ಟಿ ನಿರ್ಧಾರ ಕೈಗೊಳ್ಳಲಿ ಎಂದು ಒತ್ತಾಯಿಸಿದರು.

### ವಿನಯ್ ಕುಲಕರ್ಣಿ ಅರ್ಜಿ ಮೇ 26ಕ್ಕೆ ಮುಂದೂಡಿಕೆ

ನೀಡಬಹುದು ಎಂದು ಮನವಿ ಮಾಡಿದರು. ಜಾಮೀನು ನೀಡದಂತೆ ಸಿಬಿಐ ಪರ ವಕೀಲರು ಆಕ್ಷೇಪ ವ್ಯಕ್ತಪಡಿಸಿದರು. ವಾದಗಳನ್ನು ಆಲಿಸಿದ ನ್ಯಾಯಾಲಯ ವಿಚಾರಣೆಯನ್ನು ಮೇ 26ಕ್ಕೆ ಮುಂದೂಡಿದೆ.

### ತಾಪಮಾನದಲ್ಲಿ ಏರುಪೇರು

ಇಂದು ಬೆಂಗಳೂರು, ಮೈಸೂರು, ಮಂಡ್ಯ, ಹಾಸನ, ಶಿವಮೊಗ್ಗ ಸೇರಿದಂತೆ ಒಟ್ಟು 15 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಿದೆ.

### ಅಸ್ತಿತ್ವಕ್ಕಾಗಿ ಹೋರಾಟ ಪಾಶ್ಚತ್ಯರ ಪರಿಕಲ್ಪನೆ

ಮೋಕ್ಷ, ಅರ್ಥ, ಕಾಮ ಪುರುಷಾರ್ಥದಲ್ಲಿ ಧರ್ಮವೂ ಸೇರಿದೆ. ಧರ್ಮವು ಮಾನವನ ಸರ್ವಾಂಗೀಣ ಪ್ರಗತಿಯ ಅಡಿಪಾಯ. ಸೌಹಾರ್ದತೆಯು ಹಿತವಾದ ಸಂಗೀತದಂತೆ ಇರಬೇಕು. ನಾವು ಸಂಯಮ ಕಳೆದುಕೊಂಡರೆ ಏಕಭಾವ ಮೂಡುವುದಿಲ್ಲ. ಎಲ್ಲರೂ ಒಂದೇ ಎನ್ನುವ ಸಮಭಾವವೇ ಸೌಹಾರ್ದತೆ ಎಂದು ಪ್ರತಿಪಾದಿಸಿದರು.

ದಯೆಯಿದ್ದಲ್ಲಿ ಧರ್ಮವಿರುತ್ತದೆ. ಆಶ್ರಯ ಅರಸಿ ಬಂದ ಹಕ್ಕಿಯನ್ನು ರಕ್ಷಿಸಲು ತನ್ನನ್ನೇ ಅರ್ಪಿಸಿಕೊಂಡ ಶಿಬಿ ಚಕ್ರವರ್ತಿಯ ತ್ಯಾಗ, ದಯೆ ನಮಗೆ ಬರಬೇಕು. ಈ ತ್ಯಾಗ, ಕರುಣೆ, ದಯೆಯಲ್ಲಿಯೇ ಸೌಹಾರ್ದವಿದೆ. ಸಮಾಜವು ದೇಶಕ್ಕೆ ನಿಷ್ಠೆಯಾಗಿದ್ದರೆ ಅಭಿವೃದ್ಧಿ ತಂತಾನೆ ಆಗುತ್ತದೆ. ವಿಶ್ವಾತ್ಮಕವಾಗಿ ನೋಡಬೇಕು. ಧರ್ಮವಿದ್ದಲ್ಲಿ ಸಂತೋಷ, ಸಮೃದ್ಧಿ ಇರುತ್ತದೆ. ಅದು ದುಃಖವನ್ನು ನೀಡುವುದಿಲ್ಲ ಎಂದು ಅವರು ವಿಶ್ಲೇಷಿಸಿದರು.

ಸುತ್ತೂರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರು ಸತ್ಯಸಾಯಿ ಆಶ್ರಮದ ಮಧುಸೂದನ ಸಾಯಿ ಅವರ 14ನೇ ಉಪನ್ಯಾಸದ 'ಆತ್ಮಾನೊ ಮೋಕ್ಷಂ ಜಗತ್ ಹಿತಾಯಚ' ಕೃತಿಯನ್ನು ಬಿಡುಗಡೆ ಮಾಡಿದರು. ಜೆಎಸ್‌ಎಸ್ ಉನ್ನತ ಶಿಕ್ಷಣ ಸಂಶೋಧನಾ ಅಕಾಡೆಮಿ ಪ್ರೊ ಚಾನ್ಸಲರ್ ಪ್ರೊ.ಬಿ.ಸುರೇಶ್, ಜೆಎಸ್‌ಎಸ್ ಕಾನೂನು ಕಾಲೇಜಿನ ಕಾರ್ಯಕಾರಿ ಮುಖ್ಯಸ್ಥ ಪ್ರೊ.ಕೆ.ಎಸ್.ಸುರೇಶ್ ಭಾಗವಹಿಸಿದ್ದರು.

### ಮೈಸೂರು–ಚೆನ್ನೈ ಬುಲೆಟ್ ರೈಲು

ಮಾರ್ಗಗಳು ಬೆಂಗಳೂರ ನಗರದ ಹೊರಗೆ ನಿರ್ಮಾಣವಾಗುತ್ತಿವೆ. ಆದರೆ ಇದು ಮೆಜೆಸ್ಟಿಕ್ ಅನ್ನು ಸಂಪರ್ಕಿಸುವುದಿಲ್ಲ. ಈ ಹೈಸ್ಪೀಡ್ ರೈಲು ಮಾರ್ಗವು ಒಟ್ಟು 306 ಕಿ.ಮೀ ಉದ್ದವಿರಲಿದೆ.

### ಎಐಎಡಿಎಂಕೆ ಶಾಸಕರು ಪುದುಚೇರಿ ರೆಸಾರ್ಟ್ಗೆ ಶಿಫ್ಟ್

ರೆಸಾರ್ಟ್ಗೆ ಶಿಫ್ಟ್ ಮಾಡಲಾಗಿದೆ.

ಎಐಎಡಿಎಂಕೆಯ ಹಲವು ಶಾಸಕರು ಪುದುಚೇರಿ ರೆಸಾರ್ಟ್ನಲ್ಲಿ ಉಳಿದುಕೊಂಡಿರುವ ವಿಡಿಯೋಗಳು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿವೆ. ಟಿವಿಕೆ ನಮ್ಮ ಶಾಸಕರನ್ನು ಸೆಳೆಯುವ ಪ್ರಯತ್ನ ಮಾಡಬಹುದು ಎಂಬ ಭೀತಿಯಿಂದ ಅವರನ್ನು ರೆಸಾರ್ಟ್ ಕರೆದೊಯ್ಯಲಾಗಿದೆ ಎಂದು ಎಐಎಡಿಎಂಕೆ ಹೇಳಿದೆ.

ತಮಿಳಗ ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ ವಿಜಯ್ ಅವರು ಈಗಾಗಲೇ ಐದು ಕಾಂಗ್ರೆಸ್ ಶಾಸಕರ ಬೆಂಬಲವನ್ನು ಪಡೆದುಕೊಂಡಿದ್ದಾರೆ. ಆದರೆ ತಮಿಳುನಾಡು ವಿಧಾನಸಭೆಯಲ್ಲಿ ಬಹುಮತವನ್ನು ತಲುಪಲು ಇನ್ನೂ ಐದು ಶಾಸಕರ ಬೆಂಬಲದ ಅಗತ್ಯವಿದೆ.

### ಬಿಜೆಪಿ ಎಷ್ಟು ಜನರ ಬೆನ್ನಿಗೆ ಚೂರಿ ಹಾಕಿಲ್ಲ?: ಪರಮೇಶ್ವರ್

ತಮಿಳುನಾಡಿನಲ್ಲಿ ಡಿಎಂಕೆ–ಕಾಂಗ್ರೆಸ್ ಅಣ್ಣತಮ್ಮಂದಿರ ರೀತಿ ಈಗಲೂ ಇದ್ದೇವೆ. ಯಾರಾದರೂ ಒಬ್ಬರು ಸರ್ಕಾರ ಮಾಡಬೇಕು ಎಂದು ತಿಳಿಸಿದರು.

### ರಾಮಚಂದ್ರರಾವ್ ಅಮಾನತು ವಾಪಸ್ ಸಿಎಂ ನಿರ್ಧಾರ: ಪರಂ

ತನಿಖೆ ನಡೆಯುತ್ತದೆ. ತನಿಖೆಯಲ್ಲಿ ಬಂದ ವರದಿ ಮೇಲೆ ನಿರ್ಧಾರ ತೆಗೆದುಕೊಳ್ಳುತ್ತಾರೆ. ಅನೇಕ ಸಮಯದಲ್ಲಿ ನಿವೃತ್ತಿ ಆದ ಮೇಲೂ ಪೆನ್ಶನ್ ತಡೆಹಿಡಿದಿರೋದು ನೋಡಿದ್ದೇನೆ ಎಂದು ವಿವರಿಸಿದರು.

## ಡ್ರಗ್ಸ್ ಮುಕ್ತ ಪಟ್ಟಣ, ಜನಸ್ನೇಹಿ ವಾತಾವರಣ ನಿರ್ಮಾಣಕ್ಕೆ ಪೊಲೀಸರೊಂದಿಗೆ ಸಹಕರಿಸಿ: ಆರ್.ವಿಜಯ್‌ಕುಮಾರ್

**ರಾಮನಗರ:** ಸ್ಥಳೀಯ ಕೆಲವು ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಲು ಜನಸಂಪರ್ಕ ಸಭೆಗಳು ಉತ್ತಮ ವೇದಿಕೆಗಳಾಗಿವೆ. ಜನಸ್ನೇಹಿ ವಾತಾವರಣ ನಿರ್ಮಾಣಕ್ಕೆ ಪೊಲೀಸರ ಜತೆಗೆ ಸಾರ್ವಜನಿಕರ ಸಹಕಾರ ಬಹುಮುಖ್ಯವಾಗಿದೆ ಎಂದು ಬಿಡದಿ ಪೊಲೀಸ್ ಠಾಣೆ ನಿರೀಕ್ಷಕ ಆರ್.ವಿಜಯ್‌ಕುಮಾರ್ ಹೇಳಿದರು.

ತಾಲ್ಲೂಕಿನ ಬಿಡದಿ ಪುರಸಭೆ ಕಚೇರಿ ಆವರಣದಲ್ಲಿ ಬಿಡದಿ ಪೊಲೀಸ್ ವತಿಯಿಂದ ಆಯೋಜಿಸಲಾಗಿದ್ದ ಸಾರ್ವಜನಿಕ ಜನಸಂಪರ್ಕ ಸಭೆಯಲ್ಲಿ ಮಾತನಾಡಿ, ಸ್ಥಳೀಯವಾಗಿ ನಡೆಯಬಹುದಾದ ಕೆಲವು ಘಟನೆಗಳು ಅಥವಾ ತಮ್ಮ ಬಡಾವಣೆಯಲ್ಲಿ ಅನುಮಾನಾಸ್ಪದ ರೀತಿಯಲ್ಲಿ ಓಡಾಡುವ ಅಪರಿಚಿತ ವ್ಯಕ್ತಿಗಳು ಮತ್ತು ವಾಹನಗಳ ಬಗ್ಗೆ ಪೊಲೀಸರಿಗೆ ಮುಂಚಿತವಾಗಿ ಮಾಹಿತಿ ನೀಡಿದಾಗ ಮುಂದಾಗುವ ಅನಾಹುತಗಳನ್ನು ತಡೆಯಬಹುದಾಗಿದೆ. ಹಾಗಾಗಿ ಜನಸಂಪರ್ಕ ಸಭೆಗಳು ಪೊಲೀಸರು ಹಾಗೂ ಜನರ ನಡುವೆ ಉತ್ತಮ ಬಾಂಧವ್ಯವನ್ನು ವೃದ್ಧಿಸುತ್ತವೆ ಎಂದರು.

#### ಪೊಲೀಸರ ಬಗ್ಗೆ ಭಯ ಬೇಡ

ಪೊಲೀಸರ ಬಗ್ಗೆ ಭಯ ಅಥವಾ ಹಿಂಜರಿಕೆ ಬೇಡ, ಯಾವುದೇ ಸಮಸ್ಯೆಗಳು ಅಥವಾ ಶಂಕೆಗಳಿದ್ದರೆ ಮನಬಿಚ್ಚಿ ಮಾತನಾಡಬೇಕು. ನಿಮ್ಮ ಸಮಸ್ಯೆಗಳಿಗೆ ಸಾಧ್ಯವಾದಷ್ಟು ಪರಿಹಾರ ದೊರಕಿಸಿಕೊಡುವುದು ನಮ್ಮ ಕರ್ತವ್ಯ. ಬೀಟ್ ಪೊಲೀಸರೊಂದಿಗೆ ಸಂಪರ್ಕ ಇಟ್ಟುಕೊಂಡು ಮುನ್ನೆಚ್ಚರಿಕೆ ವಹಿಸುವುದರಿಂದ ಕೆಲವು ಘೋರ ಅಪರಾಧಗಳನ್ನು ತಪ್ಪಿಸಬಹುದಾಗಿದೆ. ಮಾಹಿತಿದಾರರ ಹೆಸರನ್ನು ಗೌಪ್ಯವಾಗಿ ಇಡಲಾಗುವುದು. ಜನಸ್ನೇಹಿ ವಾತಾವರಣ ನಿರ್ಮಾಣಕ್ಕೆ ನಿಮ್ಮ ಸಹಕಾರ ತೀರಾ ಅಗತ್ಯವಾಗಿವೆ ಎಂದು ಧೈರ್ಯ ತುಂಬಿದರು.



**ಬಿಡದಿ ಪುರಸಭೆ ಕಚೇರಿ ಆವರಣದಲ್ಲಿ ನಡೆದ ಸಾರ್ವಜನಿಕ ಜನಸಂಪರ್ಕ ಸಭೆಯಲ್ಲಿ ಸಿಪಿಐ ಆರ್.ವಿಜಯ್‌ಕುಮಾರ್ ಮಾತನಾಡಿದರು.**

ಸ್ಥಳೀಯವಾಗಿ ನಡೆಯುವ ವಿದ್ಯಾಮಾನಗಳ ಬಗ್ಗೆ ಪೊಲೀಸ್‌ರಿಗೆ ಸಾರ್ವಜನಿಕರಿಂದ ಸಲಹೆ ಸೂಚನೆಗಳು ಬೇಕು. ನಿಮ್ಮೆಲ್ಲರ ಸಲಹೆ ಪಡೆದು ಸಮಸ್ಯೆಗಳನ್ನು ನಿವಾರಿಸಲು ನಾವು ರೂಪುರೇಷೆ ಸಿದ್ದಪಡಿಸಲು ಅನುಕೂಲವಾಗುತ್ತದೆ. ಪೊಲೀಸ್ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಪ್ರಯತ್ನಿಸುತ್ತೇವೆ. 24*7 ಜನರ ಸೇವೆಗಾಗಿ 112 ಸಹಾಯವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು. ಸಾಮಾಜಿಕ ಜಾಲತಾಣದಲ್ಲಿ ಬರುವ ಕೆಲ ಸುದ್ದಿಗಳು ತಿರುಚಲಾಗಿರುತ್ತವೆ ಹಾಗೂ ಸುಳ್ಳಿನಿಂದ ಕೂಡಿರುತ್ತವೆ. ಉಹಾಪೋಹಗಳನ್ನು ನಂಬಬಾರದು ಎಂದು ಕಿವಿಮಾತು ಹೇಳಿದರು.

#### ಬಾಡಿಗೆದಾರರ ಮಾಹಿತಿ ನೀಡಿ

ಬೆಂಗಳೂರು ಮಹಾನಗರಕ್ಕೆ ಹೊಂದಿಕೊಂಡು ಬೆಳೆಯುತ್ತಿರುವ ಬಿಡದಿ ಪಟ್ಟಣದಲ್ಲಿ ಅಪರಾಧ ಪ್ರಕರಣಗಳಿಗೆ ಕಡಿವಾಣ ಹಾಕಲು ಕೆಲವು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಗಾಂಜಾ ಸೇರಿದಂತೆ ಮಾದಕ ವಸ್ತುಗಳ ಸೇವನೆ ಅಥವಾ ಮಾರಾಟದ ಬಗ್ಗೆ ಸುಳಿವು ದೊರೆತರೆ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು. ಡ್ರಗ್ಸ್‌ಮುಕ್ತ ಪಟ್ಟಣವನ್ನಾಗಿಸಲು ನಾಗರಿಕರ ಸಹಕಾರ ನಮಗೆ ತೀರಾ ಅಗತ್ಯವಾಗಿದೆ ಎಂದರು.

ಹೊಸದಾಗಿ ಬರುವ ಬಾಡಿಗೆದಾರರ ಬಗ್ಗೆ ಮನೆಯ ಮಾಲೀಕರು ಮಾಹಿತಿ ಸಂಗ್ರಹಿಸುವುದು ಕಡ್ಡಾಯವಾಗಿದೆ. ಹಾಗೆಯೇ ಬ್ಯಾಚುಲರ್ ಹುಡುಗರ ಬಗ್ಗೆಯೂ ನಿಗಾ ವಹಿಸಬೇಕಿದೆ. ತಮ್ಮ ಬಡಾವಣೆಗಳು ಅಥವಾ ಬೀದಿಯಲ್ಲಿ ಅವರ ಚಲನವಲನಗಳನ್ನು ಸ್ಥಳೀಯರು ಗಮನಿಸಿ ಪೊಲೀಸರಿಗೆ ತಿಳಿಸಬೇಕು ಎಂದು ವಿಜಯ್‌ಕುಮಾರ್ ಸಲಹೆ ನೀಡಿದರು.

ಸದಾ ವಾಹನಗಳ ಸಂಚಾರ ದಟ್ಟಣೆಯಿಂದ ಬಿಡದಿ ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆ ಅಧಿಕವಾಗಿರುತ್ತದೆ. ಹೀಗಾಗಿ ಎಲ್ಲೆಂದರಲ್ಲಿ ವಾಹನ ನಿಲುಗಡೆಯನ್ನು ನಿಷೇಧಿಸಲಾಗಿದೆ. ನಲ್ಲಿಗುಡ್ಡೆಕೆರೆ ರಸ್ತೆ ಹಾಗೂ ರೈಲ್ವೆ ಸ್ಟೇಷನ್ ರಸ್ತೆ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ಏಕರೂಪ ಅಂದರೆ ದಿನಬಿಟ್ಟು ದಿನ ಒಂದೇ ಕಡೆ ವಾಹನ ನಿಲ್ಲಿಸಬೇಕು. ಎರಡೂ ಕಡೆ ನಿಲ್ಲಿಸುವ ವಾಹನಗಳ ಮಾಲೀಕರ ವಿರುದ್ಧ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದರು.

ಪೊಲೀಸರು ಹಾಗೂ ಜನರ ನಡುವೆ ಸ್ನೇಹಪೂರ್ವಕ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ನಾವು ಜನಸಂಪರ್ಕ ಸಭೆಗಳನ್ನು ಆಯೋಜಿಸಿ, ಸಮಸ್ಯೆಗಳನ್ನು ಆಲಿಸುತ್ತೇವೆ ಸಾರ್ವಜನಿಕರು ನಿರ್ಭೀತಿಯಿಂದ ಪೊಲೀಸರ ಜತೆಗೆ ಸಮಸ್ಯೆಗಳನ್ನು ಮುಕ್ತವಾಗಿ ಹಂಚಿಕೊಳ್ಳಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಪುರಸಭೆ ಅಧ್ಯಕ್ಷೆ ಭಾನುಪ್ರಿಯ ಸಂಪತ್, ಉಪಾಧ್ಯಕ್ಷೆ ಆಯಿಷಾಖಲೀಲ್, ವಿಪಕ್ಷ ನಾಯಕ ಸಿ.ಉಮೇಶ್, ಸದಸ್ಯರಾದ ಸೋಮಶೇಖರ್, ನವೀನ್, ಹೊಂಬಯ್ಯ, ಯಲ್ಲಮ್ಮ, ವೈ.ರಮೇಶ್, ಲೋಕೇಶ್ ಗ್ರಾಪಂ ಮಾಜಿ ಅಧ್ಯಕ್ಷ ಬೆಟ್ಟಸ್ವಾಮಿ, ಭಾರತ್ ಭೀಮ್ ಸೇನೆ ರಾಜ್ಯಾಧ್ಯಕ್ಷ ದಿನೇಶ್, ಯುವಮುಖಂಡರಾದ ಲೋಕೇಶ್, ಕಾರ್ತಿಕ್, ಸಂಜಯ್, ಮಧು ಮತ್ತಿತರರು ಪುರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

## ಕಾವೇರಿ 2.0 ತಂತ್ರಾಂಶದಲ್ಲಿ ಅನೇಕ ಲೋಪ: ಪತ್ರಬರಹಗಾರರ ಆರೋಪ

**ಮೈಸೂರು:** ನೋಂದಣಿ ಮತ್ತು ಮುದ್ರಾಂಕ ಇಲಾಖೆ ಜಾರಿಗೆ ತಂದಿರುವ ಕಾವೇರಿ 2.0 ತಂತ್ರಾಂಶ ಅನೇಕ ಲೋಪಗಳಿಂದ ಕೂಡಿದೆ. ಇದರಿಂದ ಆಸ್ತಿ ಹೊಂದಿರುವವರಿಗೆ ಸಮಸ್ಯೆಯಾಗುತ್ತಿದೆ ಎಂದು ಮೈಸೂರು ನಗರ ತಾಲ್ಲೂಕು ಪತ್ರ ಬರಹಗಾರರ ಒಕ್ಕೂಟದ ಅಧ್ಯಕ್ಷ ನಿಸಾರ್ ಅಹಮದ್ ಕಿಡಿಕಾರಿದರು.



ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇತ್ತೀಚೆಗೆ ಅನುಷ್ಠಾನಗೊಂಡಿರುವ ಪ್ರಕ್ರಿಯೆಯಲ್ಲಿ ಪಕ್ಷಕಾರರ ಭೌತಿಕ ಸಹಿ, ಸಾಕ್ಷಿಗಳ ಭೌತಿಕ ಸಹಿ, ಉಪ ನೋಂದಣಾಧಿಕಾರಿಗಳ ಭೌತಿಕ ಸಹಿ ಹಾಗೂ ಪತ್ರ ಬರಹಗಾರರ ಭೌತಿಕ ಸಹಿ ಇಲ್ಲದಿದ್ದು, ಇದರಿಂದಾಗಿ ದಾಖಲಾತಿಗಳು ಕೇವಲ ಮುದ್ರಣ ಹೊರತುಪಡಿಸಿ ಯಾವುದೇ ವಿಶೇಷತೆ ಹೊಂದಿಲ್ಲ. ಪೇಪರ್‌ಲೆಸ್ ನೋಂದಣಿ ಮೂಲಕ ನೋಂದಣಿ ಆಗುವ ದಸ್ತಾವೇಜು ಡಿಜಿಟಲ್ ರೂಪದಲ್ಲಿ ಕೇಂದ್ರಿತ ದತ್ತಾಂಶದಲ್ಲಿ ದಾಖಲಾಗುವ ಕಾರಣ ಭೌತಿಕವಾಗಿ ಲಭ್ಯವಾಗದಿದ್ದು, ಈ ನೋಂದಾಯಿತ ದಸ್ತಾವೇಜುಗಳ ಮೇಲೆ ಕಷ್ಟಕಾಲದಲ್ಲಿ ಆರ್ಥಿಕ, ಹಣಕಾಸು ಸೌಲಭ್ಯವನ್ನು ಖಾಸಗಿ ವ್ಯಕ್ತಿಗಳಿಂದ ಪಡೆಯಲು ಸಹಾ ಸಾಧ್ಯವಾಗುವುದಿಲ್ಲ. ಡಿಜಿಟಲ್ ರೂಪದಲ್ಲಿ ಸ್ವತ್ತಿನ ಹಕ್ಕುದಾರರು ಒಂದಕ್ಕಿಂತ ಹೆಚ್ಚು ಮುದ್ರಿತ ಪ್ರತಿ ಪಡೆಯಲು ಸಾಧ್ಯವಿದ್ದು, ಖಾಸಗಿ ವ್ಯಕ್ತಿಗಳು ಯಾವುದೇ ಅಸಲು ದಸ್ತಾವೇಜಿನ ಖಾತರಿ ಇಲ್ಲದೇ ಆರ್ಥಿಕ ಸಹಾಯ ನೀಡಲು ಹಿಂಜರಿಯುವ ಸಂಭವವಿದೆ. ಹೀಗಾಗಿ ಪತ್ರ ಬರಹಗಾರರ ಅವಲಂಬನೆಗೆ ಕಡಿವಾಣ ಹಾಕುವ ಯಾವುದೇ ಪ್ರವೃತ್ತಿ ಸಹಾಯಕಾರಿಯಲ್ಲ. ಇದರಿಂದ ಜನತೆಗೆ ಹೆಚ್ಚು ಅನಾನುಕೂಲವಾಗುವ ಕಾರಣ ಈ ಹಿಂದಿನ ಪದ್ಧತಿ ರದ್ದುಗೊಳಿಸುವುದು ಸರಿಯಲ್ಲ ಎಂದರು. ಇನ್ನಿತರ ಪದಾಧಿಕಾರಿಗಳಾದ ಕೆ.ಆರ್. ಉದಯ್‌ಕುಮಾರ್, ಎಂ.ಎಸ್. ನರಸಿಂಹಮೂರ್ತಿ, ಎಂ. ಗಣೇಶ್, ಎ.ಎಸ್. ನಾಗಭೂಷಣ ಆರಾಧ್ಯ ಹಾಗೂ ಇನ್ನಿತರರು ಇದ್ದರು.

## ಎಸ್ಸಿ, ಎಸ್ಟಿ ಸಭೆ ನಡೆಸುವಂತೆ ಒತ್ತಾಯ

**ಗುಂಡ್ಲುಪೇಟೆ:** ನಿಗದಿತ ಸಮಯಕ್ಕೆ ತಾಲೂಕು ಆಡಳಿತ ಎಸ್ಸಿ, ಎಸ್ಟಿ ಹಿತರಕ್ಷಣಾ ಸಮಿತಿ ಸಭೆ ನಡೆಸುವಂತೆ ಜಾರಕಿಹೊಳಿ ಬ್ರಿಗೇಡ್ ಸಂಸ್ಥಾಪಕ ಗೋವಿನಾಯಕ್ ಒತ್ತಾಯಿಸಿದರು.



ಪ್ರತಿ ಮೂರು ತಿಂಗಳಿಗೊಮ್ಮೆ ಎಸ್ಸಿ, ಎಸ್ಟಿ ಹಿತರಕ್ಷಣಾ ಸಭೆ ನಡೆಸಬೇಕು ಎಂದು ಸರ್ಕಾರದ ಆದೇಶವಿದೆ. ಇದೇ ಕಾರಣಕ್ಕೆ ಹಿಂದಿನ ಸಭೆಯಲ್ಲಿ ಪ್ರತಿ ಮೂರು ತಿಂಗ ಳಿಗೊಮ್ಮೆ ಸಭೆ ನಡೆಸುವುದಾಗಿ ತಹಸೀ ಲ್ದಾರ್ ಎಂ.ಎಸ್.ತನ್ಮಯ್ ಭರವಸೆ ನೀಡಿದ್ದರು. ಆದರೆ 5 ತಿಂಗಳು ಕಳೆದರೂ ಸಭೆ ನಡೆಸಿಲ್ಲ. ಹೀಗಾಗಿ ತಹಸೀಲ್ದಾರರು ಕೂಡಲೇ ಎಸ್ಸಿ, ಎಸ್ಟಿ ಹಿತರಕ್ಷಣಾ ಸಭೆ ಕರೆದು ಪರಿಶಿಷ್ಟ ಸಮುದಾಯ ಮತ್ತು ಪಂಗಡದ ಜನರ ಸಮಸ್ಯೆಗಳಿಗೆ ಪರಿಹಾರ ಕೊಡಿಸಲು ಮುಂದಾಗಬೇಕು ಎಂದು ಮನವಿ ಮಾಡಿದರು.

## ಶೇ.90ರಷ್ಟು ಮರಗಳ ರಕ್ಷಣೆಗೆ ಕ್ರಮ: ಯಧುವೀರ್



**ಮೈಸೂರು:** ಅಭಿವೃದ್ಧಿ ಹೆಸರಿನಲ್ಲಿ ಯಾವುದೇ ಕಾರಣಕ್ಕೂ ಮರಗಳನ್ನು ಕಡಿಯುವುದಿಲ್ಲ. ಶೇ.90 ರಷ್ಟು ಮರಗಳನ್ನು ಉಳಿಸಲು ಸಲಹೆ ಸೂಚನೆ ನೀಡಲಾಗಿದೆ ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.

ಮೈಸೂರು – ಬೆಂಗಳೂರು ಹೊರವರ್ತೂಲ ರಸ್ತೆ ಬಳಿ ಇರುವ ಮಣಿಪಾಲ್ ಆಸ್ಪತ್ರೆಯ ಪಾರ್ಕ್ ಬಳಿ ಮೇಲ್ಸೇತುವೆ ಕಾಮಗಾರಿ ಸ್ಥಳ ಪರಿಶೀಲನೆ ನಡೆಸಿ ಹಿರಿಯ ಅಧಿಕಾರಿಗಳೊಡನೆ ಚರ್ಚೆ ನಡೆಸಿದರು. ನಂತರ ಮಾತನಾಡಿದ ಅವರು, ರಸ್ತೆ ಒತ್ತಡ ಕಡಿಮೆ ಮಾಡಲು 700ಕೋಟಿ ರೂ. ಗಳಲ್ಲಿ ಮೈಸೂರು ಜಿಲ್ಲೆಯಲ್ಲಿ ವಿವಿದೆಡೆ ಮೇಲ್ಸೇತುವೆ ನಿರ್ಮಾಣ ಮಾಡಲಾಗುತ್ತಿದೆ. ಕಾಮಗಾರಿಗೂ ಮುನ್ನ ಗಿಡ–ಮರಗಳ ರಕ್ಷಣೆಗೆ ಮುಂದಾಗಿದ್ದೇವೆ, ಈ ಮೇಲ್ಸೇತುವೆ ಯೋಜನೆಯಲ್ಲಿ ಎರಡು ಬದಿ 150ಕ್ಕೂ ಹೆಚ್ಚು ಮರಗಳು ಕಂಡುಬಂದಿದ್ದು, ಯಾವುದೇ ಕಾರಣಕ್ಕೂ ಈ ಮರಗಳನ್ನು ಕಡಿಯುವುದಿಲ್ಲ, , ಪರಿಸರವಾದಿಗಳು ಆತಂಕಪಡುವ ಪ್ರಮೇಯವಿಲ್ಲ, ಪರಿಸರವನ್ನು ಉಳಿಸಿ ಅಭಿವೃದ್ಧಿ ಕಾರ್ಯ ಮಾಡಲಾಗುವುದು, ಅರಣ್ಯ ಇಲಾಖೆ ಹಾಗೂ ರಾಷ್ಟೀಯ ರಸ್ತೆ ಅಭಿವೃದ್ಧಿ ಸಂಸ್ಥೆಯೇ ಪರಿಸರ ಪೂರಕವಾಗಿ ಕಾರ್ಯ ನಿರ್ವಹಿಸಲಿದೆ ಎಂದರು.

ಅಧಿಕಾರಿಗಳು ಚರ್ಚೆ ನಡೆಸಿ ಕಾಮಗಾರಿ ಆರಂಭಿಸಲಿದ್ದಾರೆ, ನಿಯಮನುಸಾರ ರಸ್ತೆಯ ಎರಡು ಬದಿಯಲ್ಲಿರುವ ಮರಗಳನ್ನ ಅರಣ್ಯ ಇಲಾಖೆಯಿಂದ ಗುರುತಿಸುವ ಕಾರ್ಯ ಮಾಡಲಾಗಿದೆ ಅಷ್ಟೇ ಅವುಗಳನ್ನ ಸಂರಕ್ಷಿಸಲಾಗುವುದು ಎಂದರು. ಸ್ಥಳ ಪರಿಶೀಲನೆ ವೇಳೆ ಮೈಸೂರು ಮಹಾನಗರ ಪಾಲಿಕೆಯ ಆಯುಕ್ತ ತನ್ವಿರ್ ಆಸೀಫ್, ಹೆಚ್ಚುವರಿ ಆಯುಕ್ತೆ ವೀಣಾ, ಮಾಜಿ ಮೇಯರ್ ಸಂದೇಶ್ ಸ್ವಾಮಿ ಸೇರಿ ಮತ್ತಿತರರು ಹಾಜರಿದ್ದರು.

## ಜಿಲ್ಲಾ ಪತ್ರಕರ್ತರ ನೂತನ ಭವನ ನಿರ್ಮಾಣಕ್ಕೆ ಅನುದಾನ ಮಂಜೂರು

### ಸಿಎಂ ಸಿದ್ದರಾಮಯ್ಯಗೆ ಪತ್ರಕರ್ತರ ಪರವಾಗಿ ಕೃತಜ್ಞತೆ

ಮೈಸೂರು: ಜಿಲ್ಲಾ ಪತ್ರಕರ್ತರ ಸಂಘದ ನೂತನ ಭವನ ನಿರ್ಮಾಣಕ್ಕೆ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು 3 ಕೋಟಿ ರೂ. ಬಿಡುಗಡೆ ಮಾಡಲು ಶಿಫಾರಸ್ಸು ಮಾಡಿದ್ದು ಮೊದನ ಕಂತಿನ ಅನುದಾನವನ್ನು ಬಿಡು ಗಡೆ ಮಾಡಿದ್ದಾರೆ.

ಈ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ಉಪಾಧ್ಯಕ್ಷ ರವಿ ಪಾಂಡವಪುರ, ಖಜಾಂಚಿ ಎನ್.ಸುರೇಶ್ ಅವರು ಇಂದು ಮೈಸೂ ರಿನ ಸಿಎಂ ನಿವಾಸಕ್ಕೆ ತೆರಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೃತಜ್ಞತೆ ಸಲ್ಲಿಸಿ ದರು. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಹಾಜರಿದ್ದರು.

ಅತೀ ಶೀಘ್ರದಲ್ಲಿ ಭವನ ನಿರ್ಮಾಣದ ಕಾಮಗಾರಿ ಆರಂಭವಾಗಲಿದೆ ಎಂದು ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ್ ತಿಳಿಸಿದ್ದಾರೆ.



### ಜ್ಞಾನವಿಕಾಸ್ ಕ್ರೀಡಾಂಗಣದಲ್ಲಿ ಅಂತರ ಕಾಲೇಜು ಮಟ್ಟದ ಮಹಿಳೆಯರ ಖೋಖೋ ಪಂದ್ಯಾವಳಿ

## ಶಿಕ್ಷಣದ ಭಾಗವಾಗಿರುವ ಕ್ರೀಡೆಗೂ ವಿದ್ಯಾರ್ಥಿಗಳು ಪ್ರಾಮುಖ್ಯತೆ ನೀಡಬೇಕು: ಸಿ.ಎಂ.ಲಿಂಗಪ್ಪ

**ರಾಮನಗರ:** ಕ್ರೀಡೆಯೂ ಸಹ ಶಿಕ್ಷಣದ ಒಂದು ಭಾಗವಾಗಿರುವುದರಿಂದ ವಿದ್ಯಾರ್ಥಿಗಳು ಪಠ್ಯಕ್ಕೆ ನೀಡುವಷ್ಟೆ ಪ್ರಾಮುಖ್ಯತೆಯನ್ನು ಕ್ರೀಡೆಗೂ ನೀಡಬೇಕು ಎಂದು ಮಾಜಿ ಶಾಸಕರೂ ಆದ ಜ್ಞಾನವಿಕಾಸ್ ವಿದ್ಯಾಸಂಘದ ಛರ್ಮನ್ ಸಿ.ಎಂ.ಲಿಂಗಪ್ಪ ಹೇಳಿದರು.

ಬಿಡದಿಯ ಜ್ಞಾನವಿಕಾಸ್ ಕ್ರೀಡಾಂಗಣದಲ್ಲಿ ಬೆಂಗಳೂರು ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಜ್ಞಾನವಿಕಾಸ್ ಇನ್ಸಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡಿಸ್ ಅಂಡ್ ಕಾಮರ್ಸ್ ವತಿಯಿಂದ ಆಯೋಜಿಸಿದ್ದ 2025–26 ಸಾಲಿನ ಅಂತರ ಕಾಲೇಜು ಮಟ್ಟದ ಮಹಿಳೆಯರ ಖೋ–ಖೋ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.

ನಿರ್ದಿಷ್ಟ ಗುರಿ ಇಟ್ಟುಕೊಂಡು ಸತತ ಪರಿಶ್ರಮ ಪಟ್ಟರೆ ಯಾವುದೂ ಅಸಾಧ್ಯವಾದುದಲ್ಲ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಮುಂದಾಗಬೇಕಿದೆ. ಶಿಕ್ಷಕರು ಹಾಗೂ ಪೋಷಕರು ಮಕ್ಕಳ ಆಸಕ್ತಿ, ಹವ್ಯಾಸಗಳಿಗೆ ಅನುಗುಣವಾಗಿ ಪ್ರೋತ್ಸಾಹ ನೀಡಬೇಕು, ಹಾಗಾಗಿ ವಿದ್ಯಾರ್ಥಿಗಳು ಪಠ್ಯದ ಜತೆಗೆ ಕ್ರೀಡೆಗಳಲ್ಲಿಯೂ ಭಾಗವಹಿಸಿದಾಗ ದೈಹಿಕ ಮತ್ತು ಮಾನಸಿಕವಾಗಿ ಸದೃಢಗೊಳ್ಳಬಹುದು ಎಂದು ಸಲಹೆ ನೀಡಿದರು.

ಜ್ಞಾನವಿಕಾಸ್ ವಿದ್ಯಾಸಂಘದ ಖಜಾಂಚಿ ಬಿ.ಎನ್. ಗಂಗಾಧರಯ್ಯ ಮಾತನಾಡಿ, ಆಟಗಾರರಿಗೆ ಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಮುಖ್ಯವೇ ಹೊರತು, ಸೋಲು–ಗೆಲುವು ಮುಖ್ಯವಲ್ಲ. ಸೋತವರು ನಿರಾಶರಾಗಬಾರದು. ಗೆದ್ದವರು ಬೀಗದೆ ಮುಂದಿನ ಕ್ರೀಡಾಕೂಟಗಳಲ್ಲಿ ಭಾಗವಹಿಸಿ, ಇನ್ನೂ ಉನ್ನತ ಸಾಧನೆಗಳನ್ನು ಮಾಡಬೇಕು. ಪ್ರಶಸ್ತಿಗಳನ್ನು ಗಳಿಸುವ ಮೂಲಕ ನಮ್ಮ ಜಿಲ್ಲೆಗೆ ಮತ್ತು ರಾಜ್ಯಕ್ಕೆ ಕೀರ್ತಿ ತರಬೇಕು ಎಂದು ಶುಭಹಾರೈಸಿದರು.



**ಬಿಡದಿಯ ಜ್ಞಾನವಿಕಾಸ್ ಕಾಲೇಜು ಕ್ರೀಡಾಂಗಣದಲ್ಲಿ ನಡೆದ ಮಹಿಳೆಯರ ಖೋ ಖೋ ಪಂದ್ಯಾವಳಿಯಲ್ಲಿ ವಿಜೇತ ತಂಡಕ್ಕೆ ಗಣ್ಯರು ಪ್ರಮಾಣಪತ್ರ ಹಾಗೂ ಟ್ರೋಫಿ ವಿತರಿಸಿದರು.**

ಬೆಂಗಳೂರು ವಿಶ್ವವಿದ್ಯಾಲಯ ಸೇರಿದಂತೆ ನಾನಾ ಕಾಲೇಜುಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು. ಮಹಿಳೆಯರ ಖೋ ಖೋ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಬೆಂಗಳೂರು ವಿವಿ ಯು.ಸಿ.ಪಿ ಕಾಲೇಜು ಪ್ರಥಮ ಸ್ಥಾನ ಹಾಗೂ ನೆರಳೂರು ಎಸ್.ವಿ.ಆರ್.ಎಫ್.ಜಿ.ಸಿ. ಕಾಲೇಜು ದ್ವಿತೀಯ ಸ್ಥಾನ ಪಡೆದುಕೊಂಡವು. ವಿಜೇತ ತಂಡಗಳಿಗೆ ಜ್ಞಾನವಿಕಾಸ್ ವಿದ್ಯಾಸಂಘದ ಛರ್ಮನ್ ಸಿ.ಎಂ.ಲಿಂಗಪ್ಪ, ಖಜಾಂಚಿ ಬಿ.ಎನ್.ಗಂಗಾಧರಯ್ಯ ಪ್ರಮಾಣಪತ್ರ ಮತ್ತು ಟ್ರೋಫಿಗಳನ್ನು ವಿತರಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ರೂಪ.ಟಿ, ದೈಹಿಕ ಶಿಕ್ಷಣ ನಿರ್ದೇಶಕ ಶರತ್ ಕುಮಾರ್ ಸೇರಿದಂತೆ ಕಾಲೇಜಿನ ಎಲ್ಲಾ ಬೋಧಕ ಬೋಧಕೇತರ ವರ್ಗದವರು ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು.

## ಮೇ.9,10ಕ್ಕೆ ಬುದ್ಧ ಪ್ರಜ್ಞೆ ಕುರಿತು ಕಾರ್ಯಕ್ರಮ

**ಮೈಸೂರು:** ಮೇ 9 ಮತ್ತು 10 ರಂದು ಉದ್ಬೂರು ಗೇಟ್ ಬಳಿಯ ವಿಷ್ಣುವರ್ಧನ್ ಸ್ಮಾರಕ ಭವನದಲ್ಲಿ ಬುದ್ಧ ಪ್ರಜ್ಞೆ ವಿಷಯ ಆಧರಿಸಿದ ಕಾರ್ಯಕ್ರಮ ಆಯೋಜಿಸಿದ್ದು, ಈ ಹಿಂದೆ ರಾಜ್ಯಾದ್ಯಂತ ಇದೇ ವಿಷಯ ಕುರಿತು ಹಮ್ಮಿಕೊಂಡಿದ್ದ ಆನ್‌ಲೈನ್ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದ ನೂರಾರು ಮಕ್ಕಳು ಪಾಲ್ಗೊಂಡು ವಿವಿಧ ಸ್ಪರ್ಧೆಗಳಲ್ಲಿ ಭಾಗಿಯಾಗಲಿದ್ದಾರೆ ಎಂದು ಮಾಜಿ ಮೇಯರ್ ಪುರುಷೋತ್ತಮ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಎರಡೂ ದಿನ ಬೆಳಗ್ಗೆ 7.30 ರಿಂದ ಸಂಜೆ 7.30 ರವರೆಗೆ ಈ ಕಾರ್ಯಕ್ರಮ ನಡೆಯಲಿದೆ. ಇಂದು ಮೊಬೈಲ್, ಟಿವಿ ಮೊದಲಾದವುಗಳಿಗೆ ದಾಸರಾಗಿ ಖಿನ್ನತೆಗೆ ದೂಡಲ್ಪಡುತ್ತಿರುವ ಮಕ್ಕಳನ್ನು ನೈತಿಕವಾಗಿ ಮೇಲೆ ತಂದು ಆರೋಗ್ಯಕರ ಮನಸ್ಸು ರೂಢಿಸಿಕೊಳ್ಳುವಂತೆ ಮಾಡುವ ಉದ್ದೇಶ ಈ ಕಾರ್ಯಕ್ರಮದ್ದಾಗಿದೆ. ಕೆಲ ತಿಂಗಳ ಹಿಂದೆ ಬುದ್ಧ ಪ್ರಜ್ಞೆ ಬಗ್ಗೆ ಮನೆಯಲ್ಲೇ ಮಾತನಾಡಿ, ಬುದ್ಧರ ಕಥೆ ಹೇಳಿ ಎಂಬ ಶೀರ್ಷಿಕೆ ಅಡಿಯಲ್ಲಿ ಮಕ್ಕಳಿಗೆ ಆನ್‌ಲೈನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬೀದರ್‌ನಿಂದ ಚಾಮರಾಜನಗರದವರೆಗಿನ ಮಕ್ಕಳು ಇದರಲ್ಲಿ ಪಾಲ್ಗೊಂಡಿದ್ದರು. ಈ ಕಾರ್ಯಕ್ರಮ ಸಮಾರೋಪವಾಗಿ ಮೇ 9, 10 ರ ಕಾರ್ಯಕ್ರಮ ನಡೆಯುತ್ತಿದೆ. ಆದರೆ ಬುದ್ಧ ಪ್ರಜ್ಞೆ ಹರಡುವುದು ನಿರಂತರವಾಗಿ ನಡೆಯಲಿದೆ ಎಂದು ವಿವರಿಸಿದರು.

ಅಂದು ನಾಲ್ಕು ಸಭಾಂಗಣಗಳಲ್ಲಿ ನುರಿತ ತೀರ್ಪುಗಾರರಿಂದ ವಿವಿಧ ಸ್ಪರ್ಧೆ ನಡೆಯಲಿದೆ. ಪಾಲ್ಗೊಂಡ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಗುವುದು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಕೋಟಗಾನಹಳ್ಳಿ ರಾಮಯ್ಯ, ಮೂಡ್ನಕೂಡು ಚಿನ್ನಸ್ವಾಮಿ, ಜ್ಞಾನಪ್ರಕಾಶ ಸ್ವಾಮೀಜಿ, ತಾವು ಪಾಲ್ಗೊಂಡು ಬುದ್ಧ ಪ್ರಜ್ಞೆ ಬಗ್ಗೆ ಅರಿವು ಮೂಡಿಸಲಾಗುವುದು. ಈ ಕಾರ್ಯಕ್ರಮ ಪರಿಕಲ್ಪನೆ ಅಂಬೇಡ್ಕರ್ ಸಾಹಿತ್ಯ ಅಕಾಡೆಮಿಯದಾಗಿದ್ದರೆ, ಸಹಯೋಗ ಗ್ರಾಮ್ಯಾಕ್ಸ್ ಡೆವಲರ್ಸ್‌ದಾಗಿದೆ ಎಂದು ಮಾಹಿತಿ ನೀಡಿದರು. ಹರಕುಮಾರ್, ಸೋಮಯ್ಯ ಮಲೆಯೂರು, ಹಾರೋಹಳ್ಳಿ ಸುರೇಶ್ ಇದ್ದರು.



# ಐತಿಹಾಸಿಕ ಶ್ರೀಮಾರಮ್ಮದೇವಿ, ಶ್ರೀಮಾಸ್ತಮ್ಮದೇವಿ ದೇವತೆಗಳ ಅಗ್ನಿಕೊಂಡ ಮಹೋತ್ಸವ

## 37 ವರ್ಷಗಳ ನಂತರ 7 ದಿನಗಳ ಊರಹಬ್ಬ ಆಚರಣೆಗೆ ಹೆಗ್ಗಡಗೆರೆ ಗ್ರಾಮಸ್ಥರು ಸಜ್ಜು

**ರಾಮನಗರ:** ತಾಲ್ಲೂಕಿನ ಹೆಗ್ಗಡಗೆರೆ ಗ್ರಾಮದಲ್ಲಿ 37 ವರ್ಷಗಳ ಬಳಿಕ ಐತಿಹಾಸಿಕ ಶ್ರೀ ಮಾರಮ್ಮದೇವಿ ಮತ್ತು ಶ್ರೀಮಾಸ್ತಮ್ಮದೇವಿ ದೇವತೆಗಳ ಅಗ್ನಿಕೊಂಡ ಮಹೋತ್ಸವ(ಹೆಗ್ಗಡಗೆರೆ ಊರಹಬ್ಬ) ಆಚರಣೆಗೆ ಸಕಲ ಸಿದ್ಧತೆಗಳು ಭರದಿಂದ ಸಾಗಿವೆ.

ಬಿಡದಿ ಪುರಸಭೆಯ 23ನೇ ವಾರ್ಡ್ ವ್ಯಾಪ್ತಿಗೆ ಒಳಪಡುವ ಹೆಗ್ಗಡಗೆರೆ ಗ್ರಾಮದಲ್ಲಿ ಶ್ರೀಮಾರಮ್ಮ ದೇವಿ ಮತ್ತು ಶ್ರೀಮಾಸ್ತಮ್ಮದೇವಿ ದೇವತೆಗಳ ಅಗ್ನಿಕೊಂಡ ಮಹೋತ್ಸವವನ್ನು ಕೆಲವು ಕಟ್ಟನಿಟ್ಟಿನ ಶಿಸ್ತುಪಾಲನೆಯಿಂದ ಏಳು ದಿನಗಳ ಕಾಲ ಆಚರಣೆ ಮಾಡಲಾಗುತ್ತದೆ. ಮೇ.8ರಿಂದ 15ರವರೆಗೆ ನಡೆಯಲಿರುವ ಹಬ್ಬದಲ್ಲಿ ಸಾವಿರಾರು ಜನ ಭಕ್ತರು, ನೆಂಟರಿಷ್ಟರು ಪಾಲ್ಗೊಂಡು ಸಂಭ್ರಮಿಸುವುದು ವಿಶೇಷ.

1989ರಲ್ಲಿ ನಡೆದ ಊರಹಬ್ಬವು ನಂತರ ನಾನಾ ಕಾರಣಗಳಿಂದ ಆಚರಿಸಲು ಸಾಧ್ಯವಾಗಿರಲಿಲ್ಲ. 37 ವರ್ಷಗಳ ಬಳಿಕ ಗ್ರಾಮದ ಪ್ರಮುಖರಾದ ಹರೀಶ್‌ಪಟೇಲ್ ಹಾಗೂ ಪುರಸಭೆ ಸದಸ್ಯ ಹೆಚ್.ನಾಗರಾಜು ಅವರ ಮೇಲುಸ್ತುವಾರಿಯಲ್ಲಿ ಊರಹಬ್ಬದಾಚರಣೆಗೆ ಗ್ರಾಮಸ್ಥರು ಸನ್ನದ್ಧರಾಗಿದ್ದಾರೆ. ಹಬ್ಬಕ್ಕೆ ರಾಮನಗರ ಜಿಲ್ಲೆ ಮಾತ್ರವಲ್ಲದೇ ಬೆಂಗಳೂರು, ತುಮಕೂರು, ಮಂಡ್ಯ, ಮೈಸೂರು ಭಾಗಗಳಿಂದಲೂ ಭಕ್ತರು ಹಾಗೂ ನೆಂಟರಿಷ್ಟರು ಆಗಮಿಸಲಿದ್ದು ಇಡೀ ಗ್ರಾಮ ಜನಜಂಗುಳಿಯಿಂದ ತುಂಬಿ ತುಳುಕುವ ಸಾಧ್ಯತೆಯಿದೆ.

ಹಬ್ಬದಲ್ಲಿ ಮೊದಲ ಎರಡು ದಿನಗಳ ಕಾಲ ದೇವಾಲಯಗಳಲ್ಲಿ ಹೋಮಹವನಗಳು ಹಾಗೂ ಪೂಜಾ ಕೈಂಕರ್ಯಗಳು ನಡೆಯಲಿವೆ. ಮೇ.11ರ ಸೋಮವಾರ ಶ್ರೀಮಾಸ್ತಮ್ಮದೇವಿಗೆ ಯಳವಾರ ಪೂಜೆ ಕಾರ್ಯಕ್ರಮ ಮತ್ತು ಗ್ರಾಮದ ಶ್ರೀವೀರಭದ್ರಸ್ವಾಮಿ, ಆಂಜನೇಯ, ಗಣಪತಿ, ಶ್ರೀಮಾರಮ್ಮ ಹಾಗೂ ಮಾಸ್ತಮ್ಮ ದೇವತೆಗಳ ಮೆರವಣಿಗೆ ನಡೆಯಲಿದೆ. ಮೇ.12ರ ಮಂಗಳವಾರ ಬೆಳಗ್ಗೆ 11.30ಕ್ಕೆ ಹೂವಿನ ಆರತಿಯೊಂದಿಗೆ ಶ್ರೀಮಾಸ್ತಮ್ಮದೇವಿ ಅಗ್ನಿಕೊಂಡ ಪ್ರವೇಶ ಜರುಗಲಿದೆ.

ಅಂದು ಸಂಜೆ ವೇಳೆಗೆ ಶ್ರೀಮಾರಮ್ಮದೇವಿಯ ಯಳವಾರ(ಕೊಂಡಕ್ಕೆ ಸೌದೆ ತುಂಬಿಸುವುದು) ಕಾರ್ಯ ನಡೆಯಲಿದೆ. ಮೇ.13ರ ಬುಧವಾರ ಮಧ್ಯಾಹ್ನ 12.30 ಗಂಟೆಗೆ ಹೂವಿನ ಆರತಿಯೊಂದಿಗೆ ಶ್ರೀಮಾರಮ್ಮದೇವಿ ಅಗ್ನಿಕೊಂಡ ಪ್ರವೇಶ ನಡೆಯಲಿದೆ. ಮೇ.14ರ ಗುರುವಾರ ಕುರ್ಜು ಮೆರವಣಿಗೆ, ಮೇ.15ರಂದು ಗ್ರಾಮದ ಎಲ್ಲಾ ದೇವರುಗಳ ಉತ್ಸವ ಮೆರವಣಿಗೆ ನಡೆಯಲಿದೆ.





ಬಿಡದಿಯ ಹೆಗ್ಗಡಗೆರೆ ಶ್ರೀಮಾಸ್ತಮ್ಮದೇವಿ ಮತ್ತು ಶ್ರೀಮಾರಮ್ಮದೇವಿ ದೇವಾಲಯಗಳ ಚಿತ್ರ



**1989ರ ನಂತರದಲ್ಲಿ ಅನೇಕ ಕಾರಣಗಳಿಂದ ಹೆಗ್ಗಡಗೆರೆ ಊರಹಬ್ಬವನ್ನು ಆಚರಿಸಲು ಸಾಧ್ಯವಾಗಿರಲಿಲ್ಲ. ಇದೀಗ ಗ್ರಾಮಸ್ಥರು ಮತ್ತು ಮುಖ್ಯಸ್ಥರು ಸೇರಿ ಮಾತಾಡಿ ಶ್ರೀಮಾರಮ್ಮದೇವಿ ಮತ್ತು ಶ್ರೀಮಾಸ್ತಮ್ಮದೇವಿ ಅಗ್ನಿಕೊಂಡ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ತೀರ್ಮಾನಿಸಿದ್ದೇವೆ. ದೇವಾಲಯಗಳಿಗೆ ಸುಣ್ಣಬಣ್ಣ, ಅಲಂಕಾರ, ಪೂಜಾ ಕಾರ್ಯಗಳಿಗೆ ಸುಮಾರು 10 ಲಕ್ಷ ಖರ್ಚಾಗಲಿದೆ. ಯಾರ ಬಳಿಯೂ ದೇಣಿಗೆ ಸ್ವೀಕರಿಸದೆ ಗ್ರಾಮಸ್ಥರಿಂದಲೇ ಹಣ ಸಂಗ್ರಹಿಸಿ ಊರಹಬ್ಬವನ್ನ ಆಚರಿಸಲಾಗುತ್ತದೆ. ಸುಮಾರು 40 ಸಾವಿರಕ್ಕೂ ಹೆಚ್ಚು ಜನರು ಸೇರುವ ನಿರೀಕ್ಷೆಯಿದೆ.**

▸▸ **ಹೆಚ್.ನಾಗರಾಜು** ಪುರಸಭೆ ಸ್ಥಳೀಯ ಸದ್ಯಸ್ಯರು.

## ನಿಯಮಬಾಹಿರ ಪೋಡಿ ಅಳತೆ: ಭೂಮಾಪಕನ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲು

**ಬೆಂಗಳೂರು:** ಯಲಹಂಕ ತಾಲ್ಲೂಕಿನ, ಕೋತಿಹೊಸಹಳ್ಳಿ ಗ್ರಾಮದ ಸ.ನ 13/1 ರಲ್ಲಿ ಬಲರಾಮ್ ಎಂಬುವವರಿಗೆ 1ಎಕರೆ–19ಗುಂಟೆ ಜಮೀನನ್ನು ಅಕ್ರಮವಾಗಿ ಪೋಡಿ ಅಳತೆ ಮಾಡಿಕೊಟ್ಟಿರುವ ಹಿನ್ನೆಲೆಯಲ್ಲಿ ಪರವಾನಗಿ ಭೂಮಾಪಕರಾದ ಟಿ.ಕೆ.ಎಲ್ ಪ್ರಕಾಶ್ ಮತ್ತು ಅರ್ಜಿದಾರರಾದ ಬಲರಾಮ್ ವಿರುದ್ಧ ಕೊಡುಗೆಹಳ್ಳಿ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆ ಎಂದು ಯಲಹಂಕ ತಾಲೂಕಿನ ಭೂ ದಾಖಲೆಗಳ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ತತ್ಕಾಲ್ ಪೋಡಿ ಅಳತೆ ಮಾಡಿಕೊಡಲು ಅರ್ಜಿ ಸಲ್ಲಿಸಿದ ಬಲರಾಮ್ ಅವರೊಂದಿಗೆ ಅಕ್ರಮವಾಗಿ ಶಾಮೀಲಾಗಿ ಪ್ರಕಾಶ್ ಅವರು ಸ್ಥಳದಲ್ಲಿ BBMP ಕಟ್ಟಡ ಮತ್ತು ಆಟದ ಮೈದಾನ ಇದ್ದರೂ ಸಹ ಅದನ್ನು ಪರಿಗಣಿಸಿರುವುದಿಲ್ಲ.

ಅಲ್ಲದೆ, ಅಳತೆಯ ಜಮೀನು ಈ ಹಿಂದೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಬಡಾವಣೆ ನಕ್ಷೆ ಅನುಮೋದಿಸುವ ಸಂಧರ್ಭದಲ್ಲಿ ಉದ್ಯಾನವನ (ಸಿ.ಎ.ನಿವೇಶನ) ಕ್ಕೆ 0–33ಗುಂಟೆ ಜಮೀನನ್ನು ಕಾಯ್ದಿರಿಸಿರುವುದನ್ನು ಸಹ ಪರಿಗಣಿಸದೆ ಭೂಮಾಪಕರು ಸ್ಥಳದಲ್ಲಿರುವ BBMP ಕಟ್ಟಡ ಮತ್ತು ಆಟದ ಮೈದಾನ ಸೇರಿದಂತೆ 1ಎಕರೆ–19ಗುಂಟೆ ಜಮೀನಿನ ನಕ್ಷೆ ತಯಾರಿಸಿರುತ್ತಾರೆ.

ಈ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರು ಸದರಿ ಸಿ.ಎ.ನಿವೇಶನಕ್ಕೆ ಕಾಯ್ದಿರಿಸಿದ ಪ್ರದೇಶವನ್ನು ಸಹಕಾರ ನಗರ ಕ್ಲಬ್ ಗೆ 30 ವರ್ಷಗಳ ಅವಧಿಗೆ ಗುತ್ತಿಗೆ ನೀಡಿದ್ದು , ಸದರಿ ಜಮೀನನ್ನೂ ಸೇರಿಸಿ ಅಕ್ರಮವಾಗಿ ಪೋಡಿ ಮಾಡಿರುವ ಬಗ್ಗೆ ಕಾನೂನು ಕ್ರಮ ಜರುಗಿಸುವಂತೆ ತಕರಾರು ಅರ್ಜಿ ಸಲ್ಲಿಸಿದ ಹಿನ್ನೆಲೆಯಲ್ಲಿ ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯ ಆಯುಕ್ತರು ಇಲಾಖಾ ಅಧಿಕಾರಿಗಳೊಂದಿಗೆ ದಿನಾಂಕ 25–04–2026 ರಂದು ಸ್ಥಳ ಪರಿಶೀಲನೆ ನಡೆಸಿದ್ದಾರೆ.

ಜಮೀನಿನ ವಸ್ತು ಸ್ಥಿತಿಯನ್ನು ಮರೆಮಾಚಿ, ಅಕ್ರಮವಾಗಿ ಅಳತೆ ಕಾರ್ಯ ಕೈಗೊಂಡಿರುವ ಪರವಾನಗಿ ಭೂಮಾಪಕರಾದ ಟಿ.ಕೆ. ಎಲ್.ಪ್ರಕಾಶ್ ಹಾಗೂ ತತ್ಕಾಲ್ ಪೋಡಿ ಕೋರಿ ಅರ್ಜಿ ಸಲ್ಲಿಸಿರುವ ಅರ್ಜಿದಾರರಾದ ಬಲರಾಮ ರವರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಲು ಆಯುಕ್ತರು ಸೂಚನೆ ನೀಡಿದ ಮೇರೆಗೆ, ಕರ್ನಾಟಕ ಲ್ಯಾಂಡ್ ರೆವೆನ್ಯೂ ಆಕ್ಟ್ 1964 ಸೆಕ್ಷನ್ 192(J) (BNS) 2023 (U/S–318(2), 336(3), 340(2) ಪ್ರಕಾರ ಕೋಡಿಗೆಹಳ್ಳಿ ಪೋಲೀಸ್ ಠಾಣೆಯಲ್ಲಿ ದಿನಾಂಕ 28–04–2026 ರಂದು ಕ್ರಿಮಿನಲ್ ಪ್ರಕರಣ ದಾಖಲಾಗಿದೆ ಎಂದು ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 10ರಂದು ಡಾ.ರಾಜೇಶ್ ಸ್ಮರಣಾರ್ಥ ಭಾವನಾತ್ಮಕ ಸಂಗೀತ ನಮನ

**ಭವ್ಯ ಸಾಂಸ್ಕೃತಿಕ ಕಾರ್ಯಕ್ರಮ । ಗಣ್ಯರ ಸಮ್ಮಿಲನ**

**ಬೆಂಗಳೂರು:** ಕರ್ನಾಟಕದ ಸಾಂಸ್ಕೃತಿಕ ಪರಂಪರೆಯನ್ನು ಸಮೃದ್ಧಗೊಳಿಸುವ ಉದ್ದೇಶದಿಂದ ಕರುನಾಡ ಮುಕುಟ ಕಲಾತಪಸ್ವಿ ಪ್ರತಿಷ್ಠಾನ ಟ್ರಸ್ಟ್ (ರಿ.) ವತಿಯಿಂದ ಖ್ಯಾತ ಕಲಾವಿದ ಡಾ. ರಾಜೇಶ್ ಅವರ ಸ್ಮರಣಾರ್ಥ ಭಾವಪೂರ್ಣ "ಗೀತ–ನುಡಿ ನಮನ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಭವ್ಯ ಸಾಂಸ್ಕೃತಿಕ ಸಂಭ್ರಮವು ಮೇ 10, 2026 (ಭಾನುವಾರ) ಸಂಜೆ 6.00 ಗಂಟೆಗೆ, ಬೆಂಗಳೂರಿನ ಶ್ರೀ ಶಿರಡಿ ಸಾಯಿಬಾಬಾ ಮಂದಿರ, ಹಳೆ ಪೋಸ್ಟ್ ಆಫೀಸ್ ರಸ್ತೆ, ವಿದ್ಯಾರಣ್ಯಪುರದಲ್ಲಿ ನಡೆಯಲಿದೆ.

## ಖಾಲಿ ಹುದ್ದೆ ಭರ್ತಿ ಸೇರಿ ಹಲವು ಬೇಡಿಕೆಗಳ ಈಡೇರಿಸಲು ಮನವಿ




**ಮೈಸೂರು:** ರಾಜ್ಯಸರ್ಕಾರ ತೀರ್ಮಾನಿಸಿದಂತೆ 56,432 ಹುದ್ದೆಗಳಿಗೆ ಕೂಡಲೇ ನೇಮಕಾತಿ ಅಧಿಸೂಚನೆ ಹೊರಡಿಸಬೇಕೆಂಬುದು ಸೇರಿ ತಮ್ಮ ಹಲವು ಬೇಡಿಕೆ ಈಡೇರಿಸುವಂತೆ ಮೈಸೂರಿನ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯಿಂದ ಅಪರ ಜಿಲ್ಲಾಧಿಕಾರಿ ಐಶ್ವರ್ಯಗೆ ಮನವಿ ಸಲ್ಲಿಸಿತು.

ಎಲ್ಲಾ ರೀತಿಯ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಹಾಗೂ ಪಾರದರ್ಶಕ ನೇಮಕಾತಿಗಾಗಿ ಕೆ.ಪಿ.ಎಸ್.ಸಿ. ಸಂಪೂರ್ಣವಾಗಿ ಸ್ವಚ್ಛಗೊಳಿಸಲು ಪಿ.ಸಿ. ಹೋಟಾ ಸಮಿತಿಯ ವರದಿಯನ್ನು ತಕ್ಷಣವೇ ಜಾರಿಗೊಳಿಸಬೇಕು. ಎಲ್ಲಾ ನೇಮಕಾತಿಗಳ ದುಬಾರಿ ಅರ್ಜಿ ಶುಲ್ಕವನ್ನು ಕೈಬಿಡಬೇಕು ಹಾಗೂ ನೇಮಕಾತಿ ಪರೀಕ್ಷೆ ಸಂದರ್ಭದಲ್ಲಿ ಅಭ್ಯರ್ಥಿಗಳಿಗೆ ಉಚಿತ ಸಾರಿಗೆ ಒದಗಿಸಬೇಕು. ರಾಜ್ಯದಲ್ಲಿ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಪ್ರತಿ ವರ್ಷ ನೇಮಕಾತಿ ಪ್ರಕ್ರಿಯೆಯ ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಮಾಡಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಕೂಡಲೇ ಭರ್ತಿಮಾಡಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸರ್ಕಾರಿ ಉದ್ಯೋಗಗಳ ಮೇಲಿನ ಅನುದಾನ ಕಡಿಮೆ ಮಾಡಲು, ತನ್ಮೂಲಕ ಉದ್ಯೋಗ ಕಡಿತಗೊಳಿಸಲು ಪ್ರಮುಖ ಕಾರಣವಾಗಿರುವ ಎಫ್‌ಆರ್‌ಬಿಎಂ ಕಾಯ್ದೆ –2003ರನ್ನು ರದ್ದುಗೊಳಿಸಬೇಕೆಂಬ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿದರು. ಹೋರಾಟದ ಸಮಿತಿಯ ಮೈಸೂರು ಜಿಲ್ಲಾ ಸಂಚಾಲಕ ಎಸ್.ವಿ.ನೀತುಶ್ರೀ, ಸದಸ್ಯರಾದ ಎಸ್.ಸುಮಾ, ರಣಜಿತ್ ಧೂಪತ್, ಪೂರ್ಣಿಮಾ ಇದ್ದರು.



**ಮೈಸೂರಿನ ಕುವೆಂಪು ನಗರದಲ್ಲಿರುವ ಗ್ರಾಮೀಣ ಕುಡಿ ಯುವ ನೀರು ಮತ್ತು ನೈರ್ಮಲ್ಯ ಕಛೇ–ರಿಯಲ್ಲಿ "ಸಂವಿಧಾನ ಓದು" ಪುಸ್ತಕ ವಿತರಣೆ ಅಭಿಯಾನ ಮೈಸೂರಿನ ಕುವೆಂಪು ನಗರದಲ್ಲಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಮುಖ್ಯಸ್ಥ–ರಿಗೆ ಸನ್ಮಾನಿಸಿದರು.**

## ಮೌಲಾನಾ ಆಜಾದ್ ಪ್ರೌಢಶಾಲೆಯಿಂದ ಪ್ರತಿಭಾ ಪುರಸ್ಕಾರ



**ಮೈಸೂರು:** ನಗರದ ಡಾ.ರಾಧಾಕೃಷ್ಣ ನಗರ (ಟೀಚರ್ಸ್ ಲೇಔಟ್)ನಲ್ಲಿರುವ ಆಜಾದ್ ನ್ಯಾಷನಲ್ ನರ್ಸರಿ, ಪ್ರಾಥಮಿಕ ಶಾಲೆ ಮತ್ತು ಮೌಲಾನಾ ಆಜಾದ್ ಪ್ರೌಢಶಾಲೆ (ಆಂಗ್ಲ ಮಾಧ್ಯಮ) ಯು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇಕಡಾ 99 ಫಲಿತಾಂಶವನ್ನು ಪಡೆದಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶಾಲೆ ಆಡಳಿತ ಮಂಡಳಿ ವತಿಯಿಂದ ಗುರುವಾರ ಆಯೋಜಿಸಲಾಗಿದ್ದ ವಿದ್ಯಾರ್ಥಿ ಅಭಿನಂದನಾ ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ಶಾಲೆಯ ಸಾಯಿ ಭರತ್ (572), ನಿತಿನ್ ನಾರಾಯಣ್ (530) ಹಾಗೂ ಸಿಂಧುಶ್ರೀ (513) ಅವರನ್ನು ಮುಖ್ಯ ಅತಿಥಿಗಳು ಶಾಲು ಹೊದಿಸಿ, ಹಾರ ಹಾಕಿ ಅಭಿನಂದಿಸಿದರು.

ರಾಜ್ಯ ಸಂಗೀತ ವಿವಿ ಹುಬ್ಬಳ್ಳಿಯ ಕಾತ್ಯಾಯಿನಿ ಯಶೋಮತಿ ಮತ್ತು ಹಿರಿಯ ಪತ್ರಕರ್ತ ಟಿ.ಆರ್. ಸತೀಶ್‌ಕುಮಾರ್ ಅವರು ಮುಖ್ಯ ಅತಿಥಿಗಳಾಗಿದ್ದರು. ಸಂಸ್ಥೆಯ ಅಧ್ಯಕ್ಷ ಜಾಕೀರ್ ಹುಸೇನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, 1998ರಲ್ಲಿ ಸ್ಥಾಪನೆಯಾದಾಗಿನಿಂದಲೂ ಸುಲ್ತಾನ್ ಶಾಹೀದ್ ಎಜುಕೇಶನ್ ಟ್ರಸ್ಟ್ ವತಿಯಿಂದ ನರ್ಸರಿ, ಪ್ರಾಥಮಿಕ ಶಾಲೆ ಮತ್ತು ಮೌಲಾನಾ ಆಜಾದ್ ಪ್ರೌಢ ಶಾಲೆಗಳು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಸಮಗ್ರ ಶಿಕ್ಷಣ, ಸೃಜನ ಶೀಲತೆ, ಬಲವಾದ ಶೈಕ್ಷಣಿಕ ಅಡಿಪಾಯ, ಶಿಸ್ತು ಮತ್ತು ಭವಿಷ್ಯದ ಸವಾಲುಗಳಿಗೆ ವಿದ್ಯಾರ್ಥಿಗಳನ್ನು ಸಬಲರನ್ನಾಗಿ ಮಾಡುವ ಉದ್ದೇಶ ಹೊಂದಿದೆ ಎಂದು ಹೇಳಿದರು. ಅಲ್ಲದೇ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರವೇಶ ಮತ್ತು ಮೌಲ್ಯಾಧಾರಿತ ಶಿಕ್ಷಣವನ್ನು ಖಾತ್ರಿಪಡಿಸುವ ಮಧ್ಯಮ ಮತ್ತು ಕೈಗೆಟಕುವ ಶುಲ್ಕಗಳನ್ನು ನಿಗದಿಪಡಿಸಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಫಾಹೀನ್ ಹುಸೇನ್ , ಮುಖ್ಯೋಪಾಧ್ಯಾಯರಾದ ಸಾದಿಕ್ ಉರ್ ರೆಹನಾ, ಆಡಳಿತಾಧಿಕಾರಿ ಮನ್ಸೂರ್ ಅಹಮದ್ ಖಾನ್, ಶಿಕ್ಷಕ ವೃಂದದ ಭವ್ಯ, ಶಿವಮ್ಮ, ತನುಶ್ರೀ, ಮೈಕ್ ಪ್ರಕಾಶ್ ಉಪಸ್ಥಿತರಿದ್ದರು.

## ಮೈಮುಲ್‌ಗೆ ಆಡಳಿತಾಧಿಕಾರಿಗಳ ನೇಮಕ

**ಮೈಸೂರು:** ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿಯಮಿತ ಆಡಳಿತ ಮಂಡಳಿ ಅವಧಿ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಸರ್ಕಾರದ ಆದೇಶದ ಮೇರೆಗೆ ಒಕ್ಕೂಟದ ಆಡಳಿತಾಧಿಕಾರಿಯಾಗಿ ಸಹಕಾರ ಸಂಘಗಳ ಜಂಟಿ ನಿಂಬಧಕ ಸಿ.ಪ್ರಸಾದ್ ರೆಡ್ಡಿ ಅಧಿಕಾರ ವಹಿಸಿಕೊಂಡರು

**ಪುರಸಭಾ ಕಾರ್ಯಾಲಯ, ಗುಂಡ್ಲುಪೇಟೆ**
**ಚಾಮರಾಜನಗರ ಜಿಲ್ಲೆ–571111**
**Phone No: 08229-222226, Help line No: 08229-223377**
**Website: www.gundlupettown.mrc.gov.in,**
**E-mail: ka.gundlupete.tmc@gmail.com**

ಪು.ಗು/ಕಿ.ಅ/ಪುರಸಭಾ ನಿಧಿ.(2026–27)/ಬೀದಿ ದೀಪ ನಿರ್ವಹಣೆ01/2026–27 ದಿ: 06.05.2026

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು ಹಾಗೂ ಇತ್ತೀಚಿನ ತಿದ್ದುಪಡಿ ನಿಬಂಧನೆಗೆ ಒಳಪಟ್ಟಂತೆ ಅಧಿಕೃತ ಅರ್ಹ ವಿದ್ಯುತ್ ಗುತ್ತಿಗೆದಾರರು ಪುರಸಭಾ ವ್ಯಾಪ್ತಿಯಲ್ಲಿ ಬೀದಿ ದೀಪಗಳ ದುರಸ್ಥಿ & ನಿರ್ವಹಣೆ ಮಾಡಲು ಗುಂಡ್ಲುಪೇಟೆ ಪುರಸಭೆ ವ್ಯಾಪ್ತಿಯಲಿ ಪುರಸಭಾ ನಿಧಿಯಡಿ ಬರುವ ಕಾಮಗಾರಿಗಳಿಗೆ ಕರ್ನಾಟಕ ಪಾರದರ್ಶಕ ಅಧಿನಿಯಮದ ಪ್ರಕಾರದ ಇ–ಪೋರ್ಟಲ್ ಮುಖಾಂತರ ಟೆಂಡರ್‌ಆಹ್ವಾನಿಸಲಾಗಿದೆ.ಟೆಂಡರ್‌ನಲ್ಲಿ ಭಾಗವಹಿಸಲು ಅಸಕ್ತಿವುಳ್ಳ ಗುತ್ತಿಗೆದಾರರು, https://kpp.karnataka.gov.in ನಲ್ಲಿ ಮಾಹಿತಿ ಪಡೆಯಬಹುದು.

**ಶ್ರೀ. ಸರವಣ.ಎಸ್, ಮುಖ್ಯಾಧಿಕಾರಿಗಳು,**
**ಪುರಸಭೆ, ಗುಂಡ್ಲುಪೇಟೆ, ದೂರವಾಣಿ ಸಂಖ್ಯೆ: 08229–222226, 08229–223377**

| ಕ್ರಮ ಸಂಖ್ಯೆ | ಕಾಮಗಾರಿ ವಿವರ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಇ.ಎಂ.ಡಿ. ಮೊತ್ತ (ರೂ. ಗಳಲ್ಲಿ) |
|---|---|---|---|
| 1 | DMA/2026-27/EL/WORK_INDENT57351 | 30.00 | 60000 |

**ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: 25.05.2026ರ ಸಂಜೆ 5.30ಗಂಟೆವರೆಗೆ**
**ಟೆಂಡರ್ ತೆರೆಯುವ ದಿನಾಂಕ: 27.05.2026ರ ಬೆಳಿಗ್ಗೆ 11.30 ಗಂಟೆಗೆ**

ಸಹಿ/–
ಮುಖ್ಯಾಧಿಕಾರಿ
ಪುರಸಭೆ, ಗುಂಡ್ಲುಪೇಟೆ

ಸಂ.ವಾಸಸಂಇ/ಚಾನಗರ/92/2026–27

## ಮೇ.9ಕ್ಕೆ ಸತ್ಯನಾರಾಯಣರ ಜನ್ಮಶತಮಾನೋತ್ಸವ



**ಮೈಸೂರು:** ಬ್ರಹ್ಮವಿದ್ಯಾಸಂಸ್ಥೆ ವತಿಯಿಂದ ಮೇ 9 ರಂದು ಮೈಸೂರು ವಿವಿ ಸೆನೆಟ್ ಸಭಾಂಗಣದಲ್ಲಿ ಸಂಜೆ 5.30ಕ್ಕೆ ಮಹಾ ಮಹೋಪಾಧ್ಯಾಯ ಡಾ.ರಾ. ಸತ್ಯನಾರಾಯಣರ ಜನ್ಮಶತಮಾನೋತ್ಸವ ಶತಮಾನ ರಾಸ ಮತ್ತು ಭಾರತೀಯ ಸಂಗೀತಶಾಸ್ತ್ರ ದಿನಾಚರಣಾ ಕಾರ್ಯಕ್ರಮ ಆಯೋಜಿಸಿರುವುದಾಗಿ ಸಂಸ್ಥಾಪಕ ರಾ.ಸ. ಆನಂದಕುಮಾರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ವೇಳೆ ಶ್ರೀವಿದ್ಯಾಶಾಸ್ತ್ರಸೂರಿ ಪ್ರಶಸ್ತಿಯನ್ನು ರಾಜೇಶ್ವರಶಾಸ್ತ್ರಿ ಜೋಶಿ ಅವರಿಗೆ, ಸಂಸ್ಮರಣ ಪ್ರಶಸ್ತಿಯನ್ನು ಡಾ. ವಸುಂಧರ ದೊರೆಸ್ವಾಮಿ, ಆನೂರು ಅನಂತಕೃಷ್ಣ ಶರ್ಮ, ಡಾ. ಗ್ವಿಡೋ ಜಾಂಡರೀಗೋ ಅವರಿಗೆ ಪ್ರದಾನ ಮಾಡಲಾಗುವುದು. ಡಾ. ಅಹಲ್ಯಾ ಶರ್ಮ ಉದ್ಘಾಟಿಸುವರು, ಡಾ. ವಿಜಯ್‌ಶಂಕರ್ ಶುಕ್ಲಾ, ಮಹಾರಾಜ ಶ್ರೀಕೃಷ್ಣದೇವರಾಯ, ಸವಿತಾ ಸುಲುಗೋಡು, ಗೋ. ಮಧುಸೂದನ್, ಟಿ.ಎಸ್. ಸುಬ್ರಹ್ಮಣ್ಯ ಅತಿಥಿಗಳಾಗಿರುವರು, ಡಾ.ರಾ. ವಿಶ್ವೇಶ್ವರನ್ ಅಧ್ಯಕ್ಷತೆ ವಹಿಸುವರು, ಡಾ. ಅಲೋಕಾ ಕನುಂಗೋ, ಡಾ. ಶ್ರೀಕಾಂತ್ ನಾಗೇಂದ್ರಶಾಸ್ತ್ರಿ, ಮಧುಕರಂ ಪ್ರಶಾಂತ್ ಅಯ್ಯಂಗಾರ್, ಕನಕರಾಜು ಇನ್ನಿತರರು ಉಪಸ್ಥಿತರಿರುವರು. ಈ ವೇಳೆ ಗೋಷ್ಠಿ ಗಾಯನ, ಡಿ.ವಿ.ಜಿ. ಕೃತಿ ಪ್ರಾರ್ಥನೆ, ಆರೋಗ್ಯ ದಿನಚರಿ, ಡಾ.ರಾ.ಸ. ಸತ್ಯನಾರಾಯಣರು ರಚಿಸಿರುವ, ತಾವು ಸಂಗ್ರಹಿಸಿರುವ ಶ್ರೀವಿದ್ಯೆಯ ಅಪರೂಪದ ರಹಸ್ಯಗಳನ್ನೊಗಳಗೊಂಡ ತ್ರಯೀ ಚಿತ್ಕಲಾ ಬೃಹದ್ ಗ್ರಂಥ ಸಹಾ ಲೋಕಾರ್ಪಣೆಗೊಳ್ಳಲಿದೆ ಎಂದರು.

ಶ್ರೀಹರ್ಷ, ಕೌಸ್ತುಭ ಶರ್ಮ, ವಿಜಯ ಸಾರಥಿ ಇದ್ದರು.

# ಪಾರ್ಕ್ ಜಾಗ ಅತಿಕ್ರಮಣ ರಸ್ತೆ ಚರಂಡಿ ನಿರ್ಮಾಣ–ಅಧಿಕಾರಿಗಳು ಶಾಮೀಲು ಲೋಕಾಯುಕ್ತ ಕಚೇರಿಯಲ್ಲಿ ದೂರು ದಾಖಲು

**ರಾಮನಗರ:** ತಾಲ್ಲೂಕಿನ ಬಿಡದಿ ಭಾಗದಲ್ಲಿ ದಿನದಿಂದ ದಿನಕ್ಕೆ ಭೂಮಿಯ ಬೆಲೆ ಗಗನಕ್ಕೆರುತ್ತಿದ್ದಂತೆ ಅಕ್ರಮಗಳು ಕೂಡ ಹೆಚ್ಚಾಗುತ್ತಿವೆ. ಖಾಸಗಿ ಲೇಔಟ್‌ನಲ್ಲಿ ಪಾರ್ಕ್ ನಿರ್ಮಾಣಕ್ಕಾಗಿ ಮೀಸಲಿದ್ದ ಜಾಗವನ್ನು ಪುರಸಭೆ ಅಧಿಕಾರಿಗಳು ಕೆಲವು ರಿಯಲ್ ಎಸ್ಟೇಟ್ ಮಾಫಿಯಾದೊಂದಿಗೆ ಶಾಮೀಲಾಗಿ ಅತಿಕ್ರಮಣ ಮಾಡಿರುವ ಕುರಿತು ಲೋಕಾಯುಕ್ತ ಕಚೇರಿಯಲ್ಲಿ ದೂರು ದಾಖಲಾಗಿದೆ.

ಬೆಂಗಳೂರು ಮಹಾನಗರಕ್ಕೆ ಅತೀ ಸಮೀಪದಲ್ಲಿ ಬಿಡದಿ ಪಟ್ಟಣ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಕಾರಣ ಈ ಭಾಗದಲ್ಲಿ ಭೂಮಿಗೆ ಬಂಗಾರದ ಬೆಲೆ ಬಂದಿದೆ. ಹಾಗಾಗಿ ಕೆಲವು ರಿಯಲ್ ಎಸ್ಟೇಟ್ ಮಾಫಿಯಾದವರು ಅಧಿಕಾರಿಗಳ ಜತೆ ಸೇರಿ ಸರಕಾರಿ ಜಾಗವನ್ನು ಕಬಳಿಸುವ ಪ್ರಕರಣಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿವೆ.

ಇದರ ಮುಂದುವರೆದ ಭಾಗವಾಗಿ ಬಿಡದಿ ಪುರಸಭೆ ವ್ಯಾಪ್ತಿಯ 8ನೇ ವಾರ್ಡ್ ವ್ಯಾಪ್ತಿಯಲ್ಲಿನ ಖಾಸಗಿ ಬಡಾವಣೆಯಲ್ಲಿ ಉದ್ಯಾನವನಕ್ಕೆ ಮೀಸಲಿಟ್ಟಿದ್ದ ಜಾಗವನ್ನ ಒತ್ತುವರಿ ಮಾಡಿಕೊಂಡು ರಸ್ತೆ ನಿರ್ಮಿಸುವ ಕೆಲಸ ಸದ್ದಿಲ್ಲದೆ ನಡೆಯುತ್ತಿದೆ. ಪಾರ್ಕ್ ಜಾಗದ ರಕ್ಷಣೆಗೆ ಕಾಮಗಾರಿ ನಿಲ್ಲಿಸುವಂತೆ ಸ್ಥಳೀಯ ನಾಗರಿಕರು ಬಿಡದಿ ಪುರಸಭೆ, ತಾಲ್ಲೂಕು ತಹಸೀಲ್ದಾರ್ ಹಾಗೂ ಜಿಲ್ಲಾಧಿಕಾರಿಗಳಿಗೂ ಮನವಿ ಮಾಡಿದ್ದಾರೆ. ಅಲ್ಲದೆ ಶಾಸಕ ಬಾಲಕೃಷ್ಣರನ್ನೂ ಭೇಟಿ ಮಾಡಿ ಕೋರಿದರೂ ಯಾವ ಪ್ರಯೋಜನವಾಗಿಲ್ಲ. ಇದರ ವಿರುದ್ಧ ಸಾಮಾಜಿಕ ಹೋರಾಟಗಾರರು ಇದೀಗ ಕಾನೂನಿನ ಮೊರೆ ಹೋಗಿದ್ದಾರೆ.

**ಉದ್ಯಾನವನದ ಜಾಗದಲ್ಲಿ ರಸ್ತೆ:**

ಪುರಸಭೆ 8ನೇ ವಾರ್ಡ್ ವ್ಯಾಪ್ತಿಯ ಸಿಸ್ತಾ ವಸತಿ ಬಡಾವಣೆಯಲ್ಲಿ ಸಾರ್ವಜನಿಕ ಉದ್ಯಾನವನಕ್ಕಾಗಿ 1798 ಅಡಿ ವಿಸ್ತೀರ್ಣದ ಜಾಗವನ್ನು ಮೀಸಲಿಡಲಾಗಿದೆ. ಸದರಿ ಜಾಗದಲ್ಲಿ ಮತ್ತೊಂದು ಖಾಸಗಿ ಲೇಔಟ್‌ಗೆ ಸಂಪರ್ಕ ರಸ್ತೆ ಕಲ್ಪಿಸಲು ಅಕ್ರಮವಾಗಿ ಪಾರ್ಕ್ ಜಾಗವನ್ನು ಕಬಳಿಸಲಾಗುತ್ತಿದೆ. ಈ ಬಗ್ಗೆ 2024ರಿಂದಲೂ ದೂರು ನೀಡಿದರೂ ಯಾವ ಅಧಿಕಾರಿಗಳು ಗಮನಹರಿಸುತ್ತಿಲ್ಲ. ಪಾರ್ಕ್ ಜಾಗದಲ್ಲಿ ರಸ್ತೆ ಮತ್ತು ಚರಂಡಿ ನಿರ್ಮಿಸಲು ಖಾಸಗಿ ಲೇಔಟ್‌ನ ಮಾಲೀಕರು ಮುಂದಾಗಿದ್ದಾರೆ.

ಸಿಸ್ತಾ ಬಡಾವಣೆ ಪಕ್ಕದಲ್ಲಿರುವ ಖಾಸಗಿ ಲೇಔಟ್‌ನಲ್ಲಿರುವ ಅನೇಕ ನಿವೇಶನಗಳಿಗೆ ರಸ್ತೆ ಸಂಪರ್ಕವೇ ಇರುವುದಿಲ್ಲ. ಬಡಾವಣೆಯ ನಕ್ಷೆಯಲ್ಲಿ ನಾಮಕಾವಸ್ತೆಗೆ ರಸ್ತೆ ತೋರಿಸಿದ್ದು ವಾಸ್ತವದಲ್ಲಿ ರಸ್ತೆ ಇರುವುದಿಲ್ಲ. ಹಾಗಾಗಿ ಸಿಸ್ತಾ ಬಡಾವಣೆಯಲ್ಲಿ ಉದ್ಯಾನವನಕ್ಕೆ ಮೀಸಲಿದ್ದ ಜಾಗದಲ್ಲಿ ರಸ್ತೆ ನಿರ್ಮಿಸಲು ಮುಂದಾಗಿರುವುದು ಕಂಡುಬಂದಿದೆ. ಕಾಮಗಾರಿ ನಿಲ್ಲಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡುವಂತೆ ಸಾಮಾಜಿಕ ಕಾರ್ಯಕರ್ತರು ಇದೀಗ ಲೋಕಾಯುಕ್ತ ಕಚೇರಿಗೆ ದೂರು ದಾಖಲಿಸಿದ್ದಾರೆ.



ಬಿಡದಿಯ ಸಿಸ್ತಾ ವಸತಿ ಬಡಾವಣೆಯಲ್ಲಿ ಮೀಸಲಿರುವ ಪಾರ್ಕ್ ಜಾಗದಲ್ಲಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿ ನಡೆಯುತ್ತಿರುವ ದೃಶ್ಯ

**ಬಿಡದಿ ಪುರಸಭೆ 8ನೇ ವಾರ್ಡ್ ವ್ಯಾಪ್ತಿಯಲ್ಲಿರುವ ಸಿಸ್ತಾ ವಸತಿ ಬಡಾವಣೆಯಲ್ಲಿ ಉದ್ಯಾನವನಕ್ಕೆ ಮೀಸಲಿಟ್ಟಿರುವ ಜಾಗದಲ್ಲಿ ಅಕ್ರಮವಾಗಿ ರಸ್ತೆ ಮತ್ತು ಚರಂಡಿ ನಿರ್ಮಿಸಲಾಗುತ್ತಿದೆ. ಈ ಬಗ್ಗೆ ಪುರಸಭೆ ಅಧಿಕಾರಿಗಳು, ಜನಪ್ರತಿನಿಧಿಗಳು ತಾಲ್ಲೂಕು ತಹಸೀಲ್ದಾರ್, ಜಿಲ್ಲಾಧಿಕಾರಿಗಳಿಗೆ ದೂರು ಕೊಟ್ಟಿದ್ದೇವೆ. ಇತ್ತೀಚೆಗೆ ಶಾಸಕ ಬಾಲಕಷ್ಣ ಅವರನ್ನೂ ನಾವು ಭೇಟಿ ಮಾಡಿ ಆಗಿರುವ ಲೋಪಗಳ ಬಗ್ಗೆ ಮನವರಿಕೆ ಮಾಡಿದರೂ ಸಹ ಸ್ಪಂದಿಸಲಿಲ್ಲ. ಹಾಗಾಗಿ ಈಗ ಲೋಕಾಯುಕ್ತ ಕಚೇರಿಯಲ್ಲಿ ದೂರು ದಾಖಲಿಸಿದ್ದೇವೆ.**

▸▸ **ಆರ್.ಹೆಚ್.ರಾಜಶೇಖರ್**
ಅಧ್ಯಕ್ಷರು, ಸಿಸ್ತಾ ಬಡಾವಣೆ ಕ್ಷೇಮಾಭಿವೃದ್ಧಿ ಸಂಘ(ರಿ).

## ಅರ್ಜಿ ಆಹ್ವಾನ




**ಮಂಡ್ಯ:** ಮದ್ದೂರು ತಾಲ್ಲೂಕಿನ ಸೋಮನಹಳ್ಳಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಬೇತಿ ಕೇಂದ್ರದ 2026–2027 ನೇ ಶೈಕ್ಷಣಿಕ ಸಾಲಿಗೆ 100% ಉದ್ಯೋಗಾವಕಾಶವುಳ್ಳ ಡಿಪ್ಲೋಮಾ,ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಎಲೆಕ್ಟಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ಇನ್ ಆಟೋಮೇಷನ್ ಅಂಡ್ ರೋಬೋಟಿಕ್ಸ್ ಕೋರ್ಸ್ ಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಸಲ್ಲಿಸು ಅವಧಿಯನ್ನು ಮೇ 10 ರವರೆಗೆ ವಿಸ್ತರಿಸಲಾಗಿದ್ದು 10ನೇ ತರಗತಿಯಲ್ಲಿ ಉತ್ತೀರ್ಣರಾದವರು ಪ್ರಥಮ ವರ್ಷಕ್ಕೆ (3+1 ವರ್ಷ) ಮತ್ತು ಐಟಿಐ ಮತ್ತು ಪಿ.ಯು.ಸಿ ತರಗತಿ ಉತೀರ್ಣರಾದವರು (ವಿಜ್ಞಾನ) ಉತೀರ್ಣರಾದವರು ಲ್ಯಾಟರಲ್ ಎಂಟ್ರಿ ಮೂಲಕ ದ್ವಿತೀಯ ವರ್ಷಕ್ಕೆ (2+1 ವರ್ಷ) ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರಾದ ಡಾ. ಮದನ್ ಕೆ ರವರ ದೂ.ಸಂ.9964679968 ಯನ್ನು ಸಂಪರ್ಕಿಸಬಹುದು ಎಂದು ಮದ್ದೂರು ತಾಲ್ಲೂಕಿನ ಸೋಮನಹಳ್ಳಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮೈಸೂರು:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಗ್ರಾಮೀಣ ಪುನರ್ವಸತಿ ಯೋಜನೆಯಡಿ ನಗರ ಪುನರ್ವಸತಿ ಕಾರ್ಯಕರ್ತರನ್ನು ಗೌರವಧನದ ಆಧಾರದ ಮೇಲೆ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಲಯ ಕಛೇರಿ–01 ಮತ್ತು ಕಛೇರಿ–07 ರಲ್ಲಿ ಖಾಲಿಯಿರುವ ನಗರ ಪುನರ್ವಸತಿ ಕಾರ್ಯಕರ್ತರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರಬೇಕು (ಅಂಕಪಟ್ಟಿ ಕಡ್ಡಾಯ), ವಯೋಮಿತಿ 18 ರಿಂದ 45 ವರ್ಷದ ಒಳಗಿರಬೇಕು. ಸದರಿ ಹುದ್ದೆಯು ಗೌರವಧನ ಆಧಾರಿತ ಹುದ್ದೆಯಾಗಿದ್ದು, ಖಾಯಂ ಹುದ್ದೆಯಾಗಿರುವುದಿಲ್ಲ. ಆಸಕ್ತ ಅರ್ಹ ವಿಕಲಚೇತನರು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಪುಲಿಕೇಶಿ ರಸ್ತೆ ತಿಲಕ್‌ನಗರ, ಮೈಸೂರು ಇಲ್ಲಿ ಮೇ 08 ರಿಂದ 22 ರವಗೆ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಮೇ 25 ರ ಸಂಜೆ 5.00 ಗಂಟೆಯೊಳಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0821–2490333 ನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಅಂಗ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶತಮಾನ ಕಂಡ ಸರ್ಕಾರಿ ಶಾಲೆಗಳು ಪಾರಂಪರಿಕ ಶಾಲೆಗಳಾಗಿ ಪರಿವರ್ತನೆ

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಪುರುಷೋತ್ತಮ ಬಿಳಿಮಲೆ

**ಚಾಮರಾಜನಗರ;** ರಾಜ್ಯದಲ್ಲಿ 3139 ಶತಮಾನಕಂಡ ಸರ್ಕಾರಿ ಶಾಲೆಗಳಿದ್ದು ಈ ಪೈಕಿ ಪ್ರಥಮ ಹಂತದಲ್ಲಿ 31 ಶಾಲೆಗಳನ್ನು ಪಾರಂಪಾರಿಕ ಶಾಲೆಗಳನ್ನಾಗಿ ಪರಿವರ್ತಿಸುವ ಉದ್ದೇಶ ಹೊಂದಲಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಪುರುಷೋತ್ತಮ ಬಿಳಿಮಲೆ ಅವರು ತಿಳಿಸಿದರು.

ನಗರದ ಧೀನಬಂಧು ಸಂಸ್ಥೆಯಲ್ಲಿಂದು 2019–20ರಲ್ಲಿ ಇಂಗ್ಲೀಷ್ ಮಾಧ್ಯಮಕ್ಕೆ ಪರಿವರ್ತನೆಗೊಂಡ ಶಾಲೆಗಳ ಈಗಿನ 6 ಮತ್ತು 7ನೇ ತರಗತಿಗೆ ತಲುಪಿರುವ ವಿದ್ಯಾರ್ಥಿಗಳ ಇಂಗ್ಲೀಷ್ ಭಾಷಾ ಪ್ರಾವಿಣ್ಯತೆಯ ಅಧ್ಯಯನ ಸಂಬಂಧ ವರದಿ ಸ್ವೀಕರಿಸಿ ಅವರು ಮಾತನಾಡಿದರು.



ರಾಜ್ಯದಲ್ಲಿ ಶತಮಾನ ಕಂಡ ಶಾಲೆಗಳಲ್ಲಿ ಮೊದಲಿಗೆ 31 ಶಾಲೆಗಳನ್ನು ಪಾರಂಪರಿಕ ಶಾಲೆಗಳನ್ನಾಗಿ ಪರಿವರ್ತಿಸುವ ಉದ್ದೇಶವಿದೆ. ಪ್ರತಿ ಜಿಲ್ಲೆಗಳಲ್ಲೂ ಪಾರಂಪರಿಕ ಶಾಲೆಗಳನ್ನು ಪರಿವರ್ತಿಸುವ ಗುರಿ ಹೊಂದಿದ್ದು, ರಾಷ್ಟ್ರ ನಾಯಕರು ಭೇಟಿ ನೀಡಿದ ಖ್ಯಾತ ಕವಿಗಳು, ಎಂಜಿನಿಯರ್ ಗಳು, ವಿಜ್ಞಾನಿಗಳು ವ್ಯಾಸಂಗ ಮಾಡಿದ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಪಾರಂಪಾರಿಕ ಶಾಲೆಗಳನ್ನಾಗಿ ಪರಿವರ್ತಿಸಿ ಹಂತ ಹಂತವಾಗಿ ಉಳಿದ ಶಾಲೆಗಳನ್ನೂ ವಿಸ್ತರಿಸಲು ಯೋಜಿಸಿದೆ ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ರಾಜ್ಯ ಶಿಕ್ಷಣ ನೀತಿಯಲ್ಲಿ ಶಿಫಾರಸ್ಸು ಕುರಿತ ವರದಿಯನ್ನು ಸಲ್ಲಿಸಿದೆ. 1500 ಪುಟಗಳ ಎರಡು ವರದಿ ಸರ್ಕಾರದ ಮುಂದಿದೆ. ಮಾತೃ ಭಾಷೆ ಶಿಕ್ಷಣದ ಮಹತ್ವ ಕುರಿತು ವಿವರಿಸಲಾಗಿದೆ. ಭಾಷಾ ಕಲಿಕೆ ಕ್ಷೇತ್ರವು ಪ್ರತಿ ವರ್ಷ ನವೀಕರಣವಾಗಬೇಕಿದೆ. ಶಿಕ್ಷಕರಿಗೆ ತರಬೇತಿ ಕೂಡ ಆಗಬೇಕಿದೆ ಎಂದು ಅಧ್ಯಕ್ಷರು ತಿಳಿಸಿದರು.

ಕನ್ನಡ ಪಠ್ಯ ಕ್ರಮ ಪರಿಷ್ಕರಣೆ ಆಗಬೇಕಿದೆ. ಕನ್ನಡ ಭಾಷೆಯ ಬಗ್ಗೆ ಆರಂಭದಲ್ಲಿಯೇ ಹೇಳಿಕೊಡಬೇಕು. ಸರ್ವನಾಮಗಳ ಬಗ್ಗೆ ಸರಿಯಾಗಿ ತಿಳಿಸಿಕೊಡಬೇಕು. ತರಬೇತಿ ಕಾರ್ಯಕ್ರಮಗಳನ್ನು ಗಂಭೀರವಾಗಿ ತೆಗೆದುಕೊಳ್ಳಬೇಕಿದೆ. ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಗೆ ಈ ಬಗ್ಗೆ ತಿಳಿಸಲಾಗಿದೆ ಎಂದರು.

ರಾಜ್ಯದ 26 ಜಿಲ್ಲೆಗಳಿಗೆ ಭೇಟಿ ಕೊಟ್ಟಿದ್ದೇವೆ. ಕನ್ನಡ ಅನುಷ್ಠಾನದ ಬಗ್ಗೆ ಪರಿಶೀಲಿಸಿ ಅಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಿದ್ದೇವೆ. 19700 ಸರ್ಕಾರಿ ಶಾಲೆಗಳಿಗೆ ಖಾತಾ ಪತ್ರ ಇರಲಿಲ್ಲ. ಈ ಬಗ್ಗೆ ಕ್ರಮವಹಿಸಲು ನಿರ್ದೇಶನ ನೀಡಿದ ಬಳಿಕ ಇಂದು ಈ ಸಂಖ್ಯೆ 400ಕ್ಕೆ ಇಳಿದಿದೆ ಎಂದು ಹೇಳಿದರು.

ಇಂಗ್ಲೀಷ್ ಮಾಧ್ಯಮಕ್ಕೆ ಪರಿವರ್ತನೆಗೊಂಡ ಶಾಲೆಗಳ ಈಗಿನ 6 ಮತ್ತು 7ನೇ ತರಗತಿಗೆ ತಲುಪಿರುವ ವಿದ್ಯಾರ್ಥಿಗಳ ಇಂಗ್ಲೀಷ್ ಭಾಷಾ ಪ್ರಾವಿಣ್ಯತೆಯ ಅಧ್ಯಯನ ಕುರಿತು ಜಿಲ್ಲಾ ಸ್ವಯಂ ಸೇವೆಗಳ ಒಕ್ಕೂಟ ಧೀನಬಂಧು ಸಂಸ್ಥೆ ಸಲ್ಲಿಸಿರುವ ವರದಿ ಸೂಕ್ಷ್ಮ ಅಧ್ಯಯನದಿಂದ ಕೂಡಿದೆ. ಇದನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಪುರುಷೋತ್ತಮ ಬಿಳಿಮಲೆ ತಿಳಿಸಿದರು.

ಆರಂಭದಲ್ಲಿ ಮಾತನಾಡಿದ ಧೀನಬಂಧು ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಜಿ.ಎಸ್. ಜಯದೇವ ಅವರು ಏಳು ವರ್ಷಗಳ ಕಾಲ ಅಧ್ಯಯನ ಮಾಡಿ ವರದಿ ಸಿದ್ದಪಡಿಸಲಾಗಿದೆ. ಮಕ್ಕಳಿಗೆ ಭಾವನೆಗಳನ್ನು ಸುಲಲಿತವಾಗಿ ಹೇಳಿಕೊಳ್ಳುವ ಅವಕಾಶ ದೊರಕಬೇಕು. ಭಾವನಾತ್ಮಕವಾಗಿ ಕನ್ನಡದಲ್ಲಿ ಅಭಿವ್ಯಕ್ತಿಗೆ ಅವಕಾಶವಾಗಲಿದೆ ಎಂಬುದನ್ನು ಪೋಷಕರು ಗಮನಿಸಬೇಕಿದೆ ಎಂದರು. ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಡಾ. ಸಂತೋಷ ಹಾನಗಲ್ಲ, ಹಿರಿಯ ಸಾಹಿತಿಗಳಾದ ಡಾ. ಹನೂರು ಕೃಷ್ಣಮೂರ್ತಿ, ಓ.ಎಲ್. ನಾಗಭೂಷಣ ಸ್ವಾಮಿ, ಜಿ.ಪಿ. ಬಸವರಾಜು, ಕೆ. ವೆಂಕಟರಾಜು, ಶಿವಸ್ವಾಮಿ, ಅಜೀಂ ಪ್ರೇಮ್ ಜಿ ಫೌಂಡೇಶನ್‌ನ ರಾಮಕೃಷ್ಣ, ಇತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಸಂಸ್ಕೃತಿ ಬೆಳೆಸಿಕೊಳ್ಳಿ : ಐ.ಎ.ಎಸ್. ಅಕಾಡೆಮಿ ಸಿ.ಇ.ಓ ಶ್ರೀನಿವಾಸ್

**ಚಾಮರಾಜನಗರ:** ಜಿಲ್ಲೆಯ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆತ್ಮವಿಶ್ವಾಸದಿಂದ ಎದುರಿಸಲು ಸ್ಪರ್ಧಾತ್ಮಕ ಸಂಸ್ಕೃತಿಯನ್ನು ಈಗಿನಿಂದಲೇ ಬೆಳೆಸಿಕೊಳ್ಳುವಂತೆ ಇಂಡಿಯಾ ಫಾರ್ ಐ.ಎ.ಎಸ್ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪಿ.ಸಿ. ಶ್ರೀನಿವಾಸ್ ಸಲಹೆ ಮಾಡಿದರು.

ನಗರದ ಜಿಲ್ಲಾ ಪಂಚಾಯತ್‌ನ ಕೆ.ಡಿ.ಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಚಾಮರಾಜನಗರ ವಿಶ್ವವಿದ್ಯಾಲಯ ಹಾಗೂ ಇಂಡಿಯಾ ಫಾರ್ ಐ.ಎ.ಎಸ್ ಅಕಾಡೆಮಿ ಸಹಯೋಗದಲ್ಲಿ ಜಿಲ್ಲೆಯ ಪದವಿ ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಅರಿವು ಮತ್ತು ತಯಾರಿಯನ್ನು ಉತ್ತೇಜಿಸಲು ?ಅಭ್ಯುದಯ? ಶೀರ್ಷಿಕೆಯಡಿ ಏರ್ಪಡಿಸಲಾಗಿದ್ದ ಜಾಗೃತಿ ಹಾಗೂ ಮಾರ್ಗದರ್ಶನ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಯು.ಪಿ.ಎಸ್.ಸಿ, ಐ.ಎ.ಎಸ್, ಐ.ಪಿ.ಎಸ್ ಹಾಗೂ ಐ.ಎಫ್.ಎಸ್ ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯುವಜನತೆ ಯಶಸ್ವಿಯಾಗಿ ಎದುರಿಸುವ ಮೂಲಕ ಉನ್ನತ ಹುದ್ದೆಗಳನ್ನು ಪಡೆಯಲು ಮುಂದಾಗಬೇಕು. ದೇಶದ ಉತ್ತಮ ಭವಿಷ್ಯಕ್ಕೆ ಭದ್ರಬುನಾದಿ ಹಾಕಬೇಕು. ಈ ನಿಟ್ಟಿನಲ್ಲಿ ಕರ್ನಾಟಕದ ಯುವಜನರಿಗೆ ಹೆಚ್ಚಾಗಿ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಅರಿವು ಮತ್ತು ಮಾರ್ಗದರ್ಶನ ನೀಡಲು ಬೆಂಗಳೂರಿನ ಚಂದ್ರಾ ಲೇಔಟ್‌ನಲ್ಲಿ ಇಂಡಿಯಾ ಫಾರ್ ಐ.ಎ.ಎಸ್ ಅಕಾಡೆಮಿ ಕಾರ್ಯನಿರ್ವಹಿಸುತ್ತಿದೆ. ವಿದ್ಯಾರ್ಥಿಗಳು, ಯುವಕರಿಗೆ ಸ್ಪರ್ಧಾತ್ಮಕ ಸಂಸ್ಕೃತಿಯನ್ನು ಬೆಳೆಸುವುದೇ ಅಕಾಡೆಮಿಯ ಸದುದ್ದೇಶವಾಗಿದೆ ಎಂದರು.

ಮುಖ್ಯವಾಗಿ ಚಾಮರಾಜನಗರ ಜಿಲ್ಲೆಯ ಯುವಜನತೆಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಅರಿವು ಮೂಡಿಸಿ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ತುಂಬಲು ಜಿಲ್ಲಾಡಳಿತ ಮುಂದಾಗಿರುವುದು ಶ್ಲಾಘನೀಯ ಬೆಳವಣಿಗೆಯಾಗಿದೆ. ಸರ್ಕಾರವು ಈಗಾಗಲೇ 56 ಸಾವಿರ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಿದೆ. ಈ ಪೈಕಿ ಕನಿಷ್ಠ ಒಂದು ಸಾವಿರ ಉನ್ನತ ಹುದ್ದೆಗಳು ಜಿಲ್ಲೆಯ ಯುವಕರಿಗೆ ದೊರೆಯಬೇಕು. ಇದಕ್ಕಾಗಿ ಕಠಿಣ ಪರಿಶ್ರಮ ಅಗತ್ಯವಾಗಿದೆ. ಜಿಲ್ಲೆಯ ಪ್ರತಿ ಹಳ್ಳಿಹಳ್ಳಿಗಳಲ್ಲೂ ಒಬ್ಬರು ಅಥವಾ ಇಬ್ಬರು ಅಭ್ಯರ್ಥಿಗಳು ಆಯ್ಕೆಯಾಗುವ ಇರಾದೆ ಹೊಂದಬೇಕು. ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲು ಜಿಲ್ಲಾಡಳಿತ, ಚಾಮರಾಜನಗರ ವಿ.ವಿಯೊಂದಿಗೆ ಅಕಾಡೆಮಿಯು ಕಟಿಬದ್ಧವಾಗಿದೆ ಎಂದು ಹೇಳಿದರು. ಉತ್ತರ ಭಾರತ ಭಾಗದಲ್ಲಿ ಎಸ್.ಎಸ್.ಎಲ್.ಸಿ ಅಥವಾ ಪಿಯುಸಿ ಬಳಿಕ ಹೆಚ್ಚಿನ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ತೆಗೆದುಕೊಳ್ಳುತ್ತಾರೆ. ನಮ್ಮ ದಕ್ಷಿಣ ಭಾರತದ ಯುವಜನರು ಈ ಬಗ್ಗೆ ಜಾಗೃತರಾಗಬೇಕು. ಜಿಲ್ಲೆಯ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಈಗಿನಿಂದಲೇ ಸನ್ನದ್ಧರಾಗಬೇಕು. ಉತ್ತಮ ಭವಿಷ್ಯ ತಮ್ಮದಾಗಿಸಿಕೊಳ್ಳಬೇಕು. ಅಕಾಡೆಮಿಯು ವರ್ಷಪೂರ್ತಿ ಅರಿವು ಮತ್ತು ಮಾರ್ಗದರ್ಶನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಮುಂದಾಗಿದೆ. ಅಕಾಡೆಮಿಯ ಅರಿವು, ಮಾರ್ಗದರ್ಶನದ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಇಂದಿನ ತಾಂತ್ರಿಕ ಯುಗದಲ್ಲಿ ಎಲ್ಲಾ ಬಗೆಯ ವಿಷಯವಾರು ಮಾಹಿತಿ ಕ್ಷಣಾರ್ಧದಲ್ಲಿ ಲಭ್ಯವಾಗಲಿದೆ. ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳನ್ನು ಅಗತ್ಯವಿರುವಷ್ಟನ್ನು ಮಾತ್ರ ಬಳಸಬೇಕು. ಪ್ರತಿನಿತ್ಯ ದಿನಪತ್ರಿಕೆಗಳನ್ನು ಮನನ ಮಾಡಬೇಕು. ಪ್ರಚಲಿತ ವಿದ್ಯಾಮಾನಗಳನ್ನು ತಿಳಿಯಬೇಕು. ಸ್ಪರ್ಧಾತ್ಮಕ ಬೇಡಿಕೆಗೆ ತಕ್ಕಂತೆ ವಿದ್ಯಾರ್ಥಿಗಳು ಪರೀಕ್ಷೆಗಳಿಗೆ ತಯಾರಾಗಬೇಕು. ಶೈಕ್ಷಣಿಕ ಹಾಗೂ ಔದ್ಯೋಗಿಕ ಕ್ರಾಂತಿಗೆ ಮುನ್ನುಡಿ ಬರೆಯಬೇಕು ಎಂದು ಶ್ರೀನಿವಾಸ್ ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

# "ಬೀಜೋತ್ಸವ – ಪೂರ್ವ ಮುಂಗಾರು ಆಂದೋಲನ–2026" ಕಾರ್ಯಕ್ರಮ

**ಮಂಡ್ಯ:** ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ವತಿಯಿಂದ ನಾಳೆ 08.05.2026 ರಂದು ಬೆಳಿಗ್ಗೆ 10.00 ಗಂಟೆಗೆ ವಿ.ಸಿ. ಫಾರಂ, ಮಂಡ್ಯದ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ "ಬೀಜೋತ್ಸವ ಮತ್ತು ಪೂರ್ವ ಮುಂಗಾರು ಆಂದೋಲನ–2026" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮವನ್ನು ಡಾ. ಕೆ. ಸಿ. ನಾರಾಯಣಸ್ವಾಮಿ, ಗೌರವಾನ್ವಿತ ಕುಲಪತಿಗಳು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ವೈ. ಎಸ್. ಪಾಟೀಲ್, ಕೃಷಿ ಆಯುಕ್ತರು, ಕೃಷಿ ಆಯುಕ್ತಾಲಯ, ಬೆಂಗಳೂರು ಹಾಗೂ ಡಾ. ಜಿ. ಟಿ. ಪುತ್ರ, ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಜಿ. ಎಂ. ದೇವಗಿರಿ, ಸಂಶೋಧನಾ ನಿರ್ದೇಶಕರು ವಹಿಸಲಿದ್ದಾರೆ.

ಉತ್ತಮ ಗುಣಮಟ್ಟದ ಬೀಜಗಳ ಮಹತ್ವ, ಅವುಗಳ ಸಮಯೋಚಿತ ಲಭ್ಯತೆ ಹಾಗೂ ಸುಧಾರಿತ ತಳಿಗಳ ಬಳಕೆಯನ್ನು ಉತ್ತೇಜಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಮಂಡ್ಯ, ಮೈಸೂರು, ಹಾಸನ, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಗಳ ರೈತರು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಲಿದ್ದಾರೆ.

ಮಂಡ್ಯ, ಹಾಸನ ಹಾಗೂ ಚಾಮರಾಜನಗರ ಕೃಷಿ ವಿಜ್ಞಾನ ಕೇಂದ್ರಗಳ (KVKs) ವಿಜ್ಞಾನಿಗಳು ಹಾಗೂ ಮೈಸೂರು ಮತ್ತು ಕೊಡಗು ವಿಸ್ತರಣಾ ಶಿಕ್ಷಣ ಘಟಕಗಳ (EEUs)ವಿಜ್ಞಾನಿಗಳೂ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸುಮಾರು 30ಕ್ಕೂ ಹೆಚ್ಚು ಮಳಿಗೆಗಳು (ಸ್ಟಾಲ್‌ಗಳು) ಸ್ಥಾಪಿಸಲಾಗುತ್ತಿದ್ದು, ಪ್ರಮಾಣಿತ ಹಾಗೂ ದೇಶೀ ಬೀಜಗಳ ಮಾರಾಟ ಮತ್ತು ಪ್ರದರ್ಶನ ನಡೆಯಲಿದೆ. ಸಾವಿರಾರು ರೈತರು, ಕೃಷಿ ಆಸಕ್ತರು ಪಾಲ್ಗೊಳ್ಳಲಿದ್ದಾರೆ ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಬೀಜ ನಿಗಮ (KSSC), ರಾಷ್ಟ್ರೀಯ ಬೀಜ ನಿಗಮ (NSC). ವಿವಿಧ ಸ್ವಯಂಸೇವಾ ಸಂಸ್ಥೆಗಳು (NGO), ದೇಶೀ ತಳಿಗಳ ಪೋಷಕರು ಮತ್ತು ಸಂರಕ್ಷಕರು, ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಗುಂಪುಗಳು, ಬೀಜ ಉತ್ಪಾದಕರು, ಬೀಜ ಪರಿಕರ ಮಾರಾಟಗಾರರು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

# ಆಕಸ್ಮಿಕ ಬೆಂಕಿಗೆ ರಾಗಿ ಹುಲ್ಲಿನ ಮೆದೆ ಭಸ್ಮ



**ನಾಗಮಂಗಲ:** ಪಟ್ಟಣದ ಬ್ರಾಹ್ಮಣ ಸಮುದಾಯ ಭವನದ ಸಮೀಪದಲ್ಲಿರುವ ಲೇ. ನಾರಾಯಣಸ್ವಾಮಿ ಅವರ ಪುತ್ರ ಎನ್. ಚಂದ್ರಶೇಖರ್ ಅವರಿಗೆ ಸೇರಿದ ರಾಗಿ ಹುಲ್ಲಿನ ಮೆದೆಗೆ ಆಕಸ್ಮಿಕವಾಗಿ ಬೆಂಕಿ ತಗುಲಿ, ಸುಮಾರು ರೂ.1.60 ಲಕ್ಷ ಮೌಲ್ಯದ ರಾಗಿ ಹುಲ್ಲು ಸಂಪೂರ್ಣವಾಗಿ ಭಸ್ಮವಾಗಿದೆ.

ಸಂಜೆ ಸುಮಾರು 5–30ಕ್ಕೆ ಕಾಣಿಸಿಕೊಂಡ ಬೆಂಕಿ ಕ್ಷಣಾರ್ಧದಲ್ಲೇ ವ್ಯಾಪಕವಾಗಿ ಹರಡಿದ್ದು, ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಮಾಹಿತಿ ತಿಳಿದ ತಕ್ಷಣ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ, ಸುಮಾರು ಮೂರು ಗಂಟೆಗಳ ಕಾಲ ನಿರಂತರ ಕಾರ್ಯಾಚರಣೆ ನಡೆಸಿ ರಾತ್ರಿ 8.30ರ ವೇಳೆಗೆ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು.

ಬೆಂಕಿ ಪಕ್ಕದಲ್ಲಿದ್ದ ಸುಮಾರು ರೂ.4 ಲಕ್ಷ ಮೌಲ್ಯದ ಕುರಿ ಕೊಟ್ಟಿಗೆಗೆ ವ್ಯಾಪಿಸಿದ್ದರೆ ಭಾರೀ ಅನಾಹುತ ಸಂಭವಿಸುವ ಸಾಧ್ಯತೆ ಇತ್ತು ಎಂದು ಮನೆಯ ಮಾಲೀಕ ಚಂದ್ರಶೇಖರ್ ತಿಳಿಸಿದರು. ಪ್ರಭಾರ ಅಗ್ನಿಶಾಮಕ ಅಧಿಕಾರಿ ಮಂಜುನಾಥ್ ನೇತೃತ್ವದಲ್ಲಿ ಪ್ರಮುಖ ಅಗ್ನಿಶಾಮಕ ಸಿಬ್ಬಂದಿ ಜಗದೀಶ್, ಪ್ರಜ್ವಲ್ ಉಪ್ಪಾರ ಹಾಗೂ ಚಾಲಕ ಪ್ರಭುಲಿಂಗ ಜೋಗಿ ಅವರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು.

# ಗ್ರಾಮ ಪಂಚಾಯಿತಿ ಪಿಡಿಓ ವಿರುದ್ಧ ಅಕ್ರಮಗಳ ಆರೋಪ: ಕ್ರಮಕ್ಕೆ ಒತ್ತಾಯ



**ಕೆ.ಆರ್.ನಗರ:** ತಾಲೂಕಿನ ತಂದೆರೆ ಅಂಕನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಪಿಡಿಓ ಆಗಿದ್ದ ಟಿ.ಎಂ. ಮಹದೇವ ಅವರ ವಿರುದ್ಧ ಹಲವು ಅಕ್ರಮಗಳನ್ನು ನಡೆಸಿರುವ ಆರೋಪ ಕೇಳಿಬಂದಿದೆ ಎಂದು ಗ್ರಾಮದ ಮುಖಂಡರು ಆರೋಪಿಸಿದರು.

ಸಾಲಿಗ್ರಾಮ ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮದಲ್ಲಿ ಕೈಗೊಳ್ಳದ ಕಾಮಗಾರಿಗಳಿಗೆ ಬಿಲ್ ಮಾಡಲಾಗಿದೆ ಎಂದು ದೂರಿದರು. ಕೆಲವರ ಜಮೀನಿನಲ್ಲಿ ಯಾವುದೇ ಕಾಮಗಾರಿ ಮಾಡದಿದ್ದರೂ, ನರೇಗಾ ಯೋಜನೆಯಡಿ ರಸ್ತೆ ಕಾಮಗಾರಿಯಂತೆ ದಾಖಲಿಸಿ ಹಣ ಪಡೆಯಲಾಗಿದೆ ಎಂದು ಆರೋಪಿಸಿದರು.

ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗ ಸೃಷ್ಟಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಉದ್ಯೋಗ ಖಾತರಿ ಯೋಜನೆಯಲ್ಲಿ ಯಂತ್ರೋಪಕರಣಗಳನ್ನು ಬಳಸುವ ಮೂಲಕ ಕೂಲಿ ಕಾರ್ಮಿಕರ ಉದ್ಯೋಗವನ್ನು ಕಸಿದುಕೊಳ್ಳಲಾಗುತ್ತಿದೆ ಎಂದು ಆಕ್ಷೇಪಿಸಿದರು.

ಪಂಚಾಯಿತಿ ಕಚೇರಿಗೆ ನಿಗದಿತ ಸಮಯದಲ್ಲಿ ಹಾಜರಾಗದೆ ಸಾರ್ವಜನಿಕರನ್ನು ಅಲೆದಾಡಿಸುತ್ತಿದ್ದಾರೆ. ಸಮಸ್ಯೆಗಳ ಬಗ್ಗೆ ಪ್ರಶ್ನಿಸಿದರೆ ಅವಮಾನಕರವಾಗಿ ವರ್ತಿಸಿ, ಪೊಲೀಸರಲ್ಲಿ ದೂರು ನೀಡುವುದಾಗಿ ಬೆದರಿಕೆ ಹಾಕುತ್ತಾರೆ ಎಂದು ಆರೋಪಿಸಿದರು.

ಸಾರ್ವಜನಿಕರಿಗೆ ಲಭ್ಯವಾಗಬೇಕಾದ ಸೌಲಭ್ಯಗಳನ್ನು ಪಡೆಯಲು ಫಲಾನುಭವಿಗಳ ದಾಖಲೆಗಳನ್ನು ದುರ್ಬಳಕೆ ಮಾಡಿಕೊಂಡು ಅನಗತ್ಯ ತೊಂದರೆ ನೀಡಲಾಗುತ್ತಿದೆ ಎಂದು ಹೇಳಿದರು. ಇಂತಹ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡಿದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. ಮೇಲಾಧಿಕಾರಿಗಳ ಆದೇಶಕ್ಕೂ ಸ್ಪಂದನೆ ಇಲ್ಲದಿರುವುದು ಆತಂಕಕಾರಿ ಎಂದು ಹೇಳಿದರು.

ಪ್ರಸ್ತುತ ಟಿ.ಎಂ. ಮಹದೇವ ಅವರನ್ನು ವರ್ಗಾವಣೆ ಮಾಡಲಾಗಿದೆ. ಆದರೂ ಅವರ ಅವಧಿಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಿ ಸಾರ್ವಜನಿಕರಿಗೆ ನ್ಯಾಯ ಒದಗಿಸಬೇಕು. ಇಲ್ಲವಾದಲ್ಲಿ ಪಂಚಾಯಿತಿ ಕಚೇರಿ ಮುಂದೆ ಧರಣಿ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಹಿರಿಯ ಪತ್ರಕರ್ತ ಸಿ.ನಾ. ಸೋಮೇಶ್ ಅವರಿಗೆ ಸನ್ಮಾನ

**ಮಡಿಕೇರಿ:** ಕೊಡಗು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಮನೆಯಂಗಳ ದಲ್ಲಿ ಮನದುಂಬಿ ಕಾರ್ಯಕ್ರಮದಡಿ ಹಿರಿಯ ಪತ್ರಕರ್ತರು, ಸಂಘದ ಮಾಜಿ ಅಧ್ಯಕ್ಷರಾದ ಚಿ.ನಾ.ಸೋಮೇಶ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕೊಡಗು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಬಾಚರಣಿಯಂಡ ಅನು ಕಾರ್ಯಪ್ಪ ನೇತೃತ್ವದಲ್ಲಿ ಸೋಮವಾರಪೇಟೆ ತಾಲೂಕಿನ ಜಂಬೂರು ಗ್ರಾಮದಲ್ಲಿರುವ ಸೋಮೇಶ್ ಅವರ ನಿವಾಸದಲ್ಲಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸೋಮೇಶ್ ಅವರು, ಡಿ.ವಿ. ಗುಂಡಪ್ಪ ಅವರು ಸ್ಥಾಪಿಸಿದ ಕಾರ್ಯನಿರತ ಪತ್ರಕರ್ತರ ಸಂಘ ಇಂದಿಗೂ ಗಟ್ಟಿಯಾಗಿ ನೆಲೆಯೂರಿದೆ. ಈ ಸಂಘದ ಅಧ್ಯಕ್ಷನಾಗಿ ಕೆಲಸ ಮಾಡಲು ಅವಕಾಶ ದೊರೆತ್ತಿದ್ದು, ನನ್ನ ಸೌಭಾಗ್ಯವಾಗಿದೆ. ನಿವೃತ್ತಿ ನಂತರ ಸಂಘದವರು ಮನೆಗೆ ಬಂದು ಗೌರವಿಸುತ್ತಿರುವುದು ಹೆಮ್ಮೆ ಮೂಡಿಸುವುದರೊಂದಿಗೆ ಹಳೆಯ ನೆನೆಪುಗಳನ್ನು ಮೆಲುಕು ಹಾಕುವಂತೆ ಮಾಡಿದೆ ಎಂದರು.

ಸಾಕ?್ಟು ಏಳುಬೀಳುಗಳ ನಡುವೆ ಕಾರ್ಯನಿರತ ಪತ್ರಕರ್ತರ ಸಂಘ ಗಟ್ಟಿಯಾಗಿ ನಿಂತಿದೆ. 1982ರಲ್ಲಿ ಬೆಂಗಳೂರಿನಲ್ಲಿ ವಿಕ್ರಮ್ ಪತ್ರಿಕೆಯಿಂದ ವೃತ್ತಿ ಜೀವನ ಆರಂಭಿಸದ ನಾನು ನವಶಕ್ತಿ ಪತ್ರಿಕೆಯಲ್ಲಿ ಕೆಲಸ ಮಾಡಿದ ನಂತರ ಶಕ್ತಿ ಪತ್ರಿಕೆಯಲ್ಲಿ ಸುದೀರ್ಘ ಅವಧಿ ಕೆಲಸ ಮಾಡುವ ಅವಕಾಶ ದೊರೆಯಿತು. ಪತ್ರಕರ್ತರಾಗಿ ಕೆಲಸ ಮಾಡುವಾಗ ಸಿಗುವ ಅನುಭವ ಬೇರೆ ಯಾವುದೇ ವೃತ್ತಿಯಲ್ಲಿಯೂ ಸಿಗಲು ಸಾಧ್ಯವಿಲ್ಲ ಎಂದು ಸೋಮೇಶ್ ಹೇಳಿದರು.



ಸಂಘದ ಅಧ್ಯಕ್ಷ ಬಾಚರಣಿಯಂಡ ಅನು ಕಾರ್ಯಪ್ಪ ಮಾತನಾಡಿ, ಚಿ.ನಾ ಸೋಮೇಶ್ ಸಂಘದ ಅಧ್ಯಕ್ಷರಾಗಿದ್ದ ಸಂದರ್ಭ ಸಾಕ?್ಟು ಕೆಲಸಗಳು ಆಗಿವೆ. ಸಂಘದ ಹಿತಕ್ಕಾಗಿ ಸಾಕ?್ಟು ಉತ್ತಮ ನಿರ್ಧಾರಗಳನ್ನು ತೆಗೆದುಕೊಂಡಿದ್ದಾರೆ. ನೇರ ನಡೆನುಡಿಯ ಪತ್ರಕರ್ತರಾಗಿ ಸೋಮೇಶ್ ಅವರು ಹೆಸರು ಮಾಡಿದವರು. ಈಗ ಸಂಘದ ಸದಸ್ಯರಲ್ಲದಿದ್ದರೂ ಅದೇ ಸಂಬಂಧ ಒಡನಾಟವನ್ನು ಹೊಂದಿದ್ದಾರೆ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನಿರ್ದೇಶಕಿ ಸವಿತಾ ರೈ ಮಾತನಾಡಿ, ಸೋಮೇಶ್ ಅವರು ಅಗಾಧವಾದ ಪಾಂಡಿತ್ಯವನ್ನು ಹೊಂದಿದ್ದಾರೆ. ಅವರೊಟ್ಟಿಗೆ ಒಡನಾಡಿಯಾಗಿ ಸಾಕ?್ಟು ಕೆಲಸಗಳನ್ನು ಮಾಡಿದ್ದೇನೆ. ಅವರು ಹಾಕಿಕೊಟ್ಟ ಹೆಜ್ಜೆಯಲ್ಲಿ ನಾವು ಮುನ್ನಡೆಯುತ್ತಿದ್ದೇವೆ. ಹಿರಿಯರ ಅನುಭವವನ್ನು ಹಂಚಿಕೊಳ್ಳಲು ಸಂಘ ಉತ್ತಮ ವೇದಿಕೆಯನ್ನು ಕಲ್ಪಿಸಿಕೊಟ್ಟಿದ್ದು ಇದೊಂದು ಉತ್ತಮ ಕಾರ್ಯಕ್ರಮ. ಮನೆಗೆ ತೆರಳಿ ಗೌರವಿಸಿ ಮಾತನಾಡುವುದು ಸ್ಮರಣೀಯವಾಗಿರುತ್ತದೆ ಎಂದು ತಿಳಿಸಿದರು.

ಪ್ರೆಸ್ ಕ್ಲಬ್ ಅಧ್ಯಕ್ಷ ಬೊಳ್ಳಜಿರ ಅಯ್ಯಪ್ಪ ಮಾತನಾಡಿ, ಸತ್ಯಾಸತ್ಯತೆಯನ್ನು ತಿಳಿದು ಮಾತನಾಡುವ ಸೋಮೇಶ್ ಅವರು ಸಾಹಿತ್ಯ ಕ್ಷೇತ್ರಕ್ಕೂ ಕೊಡುಗೆ ನೀಡಿದ್ದಾರೆ. ನೇರನಡೆನುಡಿಯ ವ್ಯಕ್ತಿಯಾಗಿದ್ದು ಇದೀಗ ಅಧ್ಯಾತ್ಮದತ್ತ ಮುಖ ಮಾಡಿದ್ದಾರೆ. ಸಂಘಕ್ಕೆ ಸೋಮೇಶ್ ಅವರ ಮಾರ್ಗದರ್ಶನ ನೀಡಬೇಕೆಂದರು.

ಈ ಸಂದರ್ಭ ಸಂಘದ ಉಪಾಧ್ಯಕ್ಷ ನವೀನ್ ಸುವರ್ಣ, ಸೋಮವಾರಪೇಟೆ ತಾಲೂಕು ಸಂಘದ ಅಧ್ಯಕ್ಷ ವಿಶ್ವಕುಮಾರ್, ನಿರ್ದೇಶಕರಾದ ಶಿವಕುಮಾರ್, ಸದಸ್ಯರಾದ ಮಂಜು ಸುವರ್ಣ, ಕೆ.ಎಂ.ವಿನೋದ್, ಸುರ್ಜಿತ್ ಉಪಸ್ಥಿತರಿದ್ದರು.

# ಇಂದು ರಾಮನಗರ ನಗರಸಭೆಯಲ್ಲಿ ಬಸವೇಶ್ವರರ ಪುತ್ಥಳಿ ಸ್ಥಾಪನೆ

**ರಾಮನಗರ:** ಸಂವಿಧಾನ ಕತೃ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿ ಸ್ಥಾಪಿಸಿ ಸ್ಥಳೀಯ ಸಂಸ್ಥೆಗಳಿಗೆ ಮಾದರಿಯಾದ ರಾಮನಗರ ನಗರಸಭೆ ಈಗ ಸಮ ಸಮಾಜದ ನಿರ್ಮಾಣ, ಪ್ರಜಾಪ್ರಭುತ್ವದ ಕಲ್ಪನೆಯನ್ನು 12ನೇ ಶತಮಾನದಲ್ಲೇ ಪ್ರತಿಪಾದಿಸಿದ ಬಸವಣ್ಣನವರ ಪುತ್ಥಳಿಯನ್ನು ಇಂದು (ಮೇ 8) ಪ್ರತಿಷ್ಠಾಪಿಸುತ್ತಿದೆ. ಸುತ್ತೂರು ಮಠ, ಶಿವಗಂಗೆ ಮಠಾಧೀಶರುಗಳು, ಡಿಸಿಎಂ ಡಿ.ಕೆ.ಶಿವಕುಮಾರ್ ಮುಂತಾದ ಗಣ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ.

**ಪುತ್ಥಳಿ ಸ್ಥಾಪನೆ, ನಾಗರೀಕರ ಪ್ರಶಂಸೆ!:** ಮಹನೀಯರನ್ನು ಪ್ರತಿ ವರ್ಷ ಅವರ ಜಯಂತಿ ದಿನದಂದು ಮಾತ್ರ ಸ್ಮರಿಸುವ ಸಕಾಲವಿದು. ನಾಡು ಕಟ್ಟಿದವರು, ಸಮ ಸಮಾಜದ ಕಲ್ಪನೆಯನ್ನು ಹೊತ್ತವರು, ನಾಡು, ನುಡಿ, ಜಲ, ಭಾಷೆಗೆ ಶ್ರಮಿಸಿದವರು ಪ್ರಾತಃಸ್ಮರಣೆಗೆ ಅರ್ಹರು ಎಂಬುದು ಇಂಜಿನಿಯರಿಂಗ್ ಪದವೀಧರ ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಅವರ ಚಿಂತನೆ.

ನಾಗರೀಕರಿಗೆ ತೀರಾ ಹತ್ತಿರವಾದ ಸರ್ಕಾರಿ ಸಂಸ್ಥೆ ಸ್ಥಳೀಯ ಸಂಸ್ಥೆಗಳು, ಒಂದಿಲ್ಲೊಂದು ಕಾರಣಕ್ಕೆ ನಾಗರೀಕರು ಹಾಗೂ ಸ್ಥಳೀಯ ಸಂಸ್ಥೆಗಳ ಒಡೆನಾಟ ಇದ್ದೇ ಇರುತ್ತದೆ. ಭವ್ಯ ಭಾರತದ ನಿರ್ಮಾಣಕ್ಕೆ ಶ್ರಮಿಸಿದವರು, ಸಮಾಜ ಸುಧಾರಕರನ್ನು ನಗರಸಭೆಗೆ ಬರುವ ಪ್ರತಿ ನಾಗರೀಕನು ಸ್ಮರಿಸಿಬೇಕು ಎಂಬ ಸದುದ್ದೇಶದಿಂದ ಪುತ್ಥಳಿಗಳನ್ನು ಸ್ಥಾಪಿಸಲಾಗುತ್ತಿದೆ ಎಂಬುದು ಕೆ.ಶೇಷಾದ್ರಿ ಮತ್ತು ನಗರಸಭಾ ಸದಸ್ಯರ ಅಭಿಪ್ರಾಯ. ನಗರಸಭಾಧ್ಯಕ್ಷರು ಮತ್ತು ಸದಸ್ಯರ ಈ ಅಭಿಪ್ರಾಯಕ್ಕೆ ನಗರದ ನಾಗರೀಕರು ಸಹ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇಂದು ಸಂಜೆ ಕಾರ್ಯಕ್ರಮ



ಇಂದು ಮೇ 8, ಸಂಜೆ 4.30ಕ್ಕೆ ನಗರಸಭೆಯ ಆವರಣದಲ್ಲಿ ವಿಶ್ವಗುರು ಬಸವೇಶ್ವರರ ಪುತ್ಥಳಿಯನ್ನು ಸ್ಥಾಪಿಸಲಾಗುತ್ತಿದೆ. ತದನಂತರ ಬಸವ ಜಯಂತಿ ಕಾರ್ಯಕ್ರಮ ನಡೆಯಲಿದೆ. ಬಸವೇಶ್ವರರ ಪುತ್ಥಳಿಯನ್ನು ನ್ಯಾಯಮೂರ್ತಿಗಳಾದ ನಾಗಮೋಹನ ದಾಸ್ ಅನಾವಣಗೊಳಿಸಲಿದ್ದಾರೆ.

- ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮತ್ತು ಸಿದ್ದಲಿಂಗ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ
- ಡಿ.ಕೆ.ಶಿವಕುಮಾರ್, ರಾಮಲಿಂಗಾರೆಡ್ಡಿ, ಡಾ.ಸಿ.ಎನ್. ಮಂಜುನಾಥ್, ಎಚ್.ಎಂ.ರೇವಣ್ಣ ಇಕ್ಬಾಲ್ ಹುಸೇನ್ ಭಾಗಿ
- ಕೆ.ಶೇಷಾದ್ರಿ ಅವರ ಚಿಂತನೆಗೆ ನಗರದ ನಾಗರೀಕರ ಸ್ವಾಗತ

ಬಸವ ಜಯಂತಿ ಕಾರ್ಯಕ್ರಮವನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಉದ್ಘಾಟಿಸಲಿದ್ದಾರೆ. ಮೈಸೂರು ಸುತ್ತೂರು ಮಹಾಸಂಸ್ಥಾನ ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಹಾಗೂ ತುಮಕೂರು ಶ್ರೀ ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಈ ಕಾರ್ಯಕ್ರಮಗಳು ನಡೆಯಲಿವೆ. ಕನಕಪುರ ದೇಗುಲ ಮಠದ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ಆಶೀವರ್ಚನ ಇರಲಿದೆ. ಇವರೊಟ್ಟಿಗೆ ವಿವಿಧ ಮಠಾಧೀಶರ ಉಪಸ್ಥಿತಿ ಇರಲಿದೆ.

ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಅಧ್ಯಕ್ಷತೆವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿಯವರು ಉಪಸ್ಥಿತರಿರುವರು. ಸಂಸದ ಡಾ.ಸಿ.ಎನ್.ಮಂಜುನಾಥ್ ಮತ್ತು ರಾಜ್ಯ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಎಚ್. ಎಂ.ರೇವಣ್ಣ ಅವರ ಗೌರವ ಉಪಸ್ಥಿತಿ ಇರಲಿದೆ. ಜಿಲ್ಲೆಯ ಶಾಸಕರು ಹಾಗೂ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ನಗರಸಭೆಯ ಪ್ರಕಟಣೆ ತಿಳಿಸಿದೆ.

# ಮೇಜರ್ ಡಾಕ್ಟರ್ ಪಾಯಲ್ ಭಾಬ್ರ (ವೈದ್ಯೆ ಮತ್ತು ಯೋಧ ಮಹಿಳೆ)



| ವೀಣಾ ಹೇಮಂತ್‌ಗೌಡ ಪಾಟೀಲ್

ಹರಿಯಾಣದ ಪ್ರಶಾಂತವಾದ ಭೂಮಿತಾಯಿಯ ಅಂಗಳದಲ್ಲಿ ಮನೆ ಮಾಡಿಕೊಂಡಿದ್ದ ಆ ಕುಟುಂಬವು ತಮ್ಮ ಇಡೀ ಬದುಕನ್ನು ರೋಗಿಗಳ ಸೇವೆಗೆ ಅರ್ಪಿಸಿಕೊಳ್ಳುವ ಪ್ರಮಾಣವನ್ನು ಮಾಡಿತ್ತು. ತಂದೆ, ತಾಯಿ, ಸಹೋದರ ಎಲ್ಲರೂ ವೈದ್ಯರಾಗಿದ್ದರು. ಇನ್ನು ಆ ಕುಟುಂಬದ ಮಗಳು ಪಾಯಲ್ ಭಾಬ್ರಾ ಬದುಕು ವಿಭಿನ್ನವಾಗಿರಲು ಹೇಗೆ ಸಾಧ್ಯ? ಕಲ್ಲಿನಲ್ಲಿ ಕೆತ್ತಿದಂತೆ ಆಕೆಯ ಭವಿಷ್ಯ ಅತ್ಯಂತ ನಿಖರವಾಗಿತ್ತು....ಆದರೆ ಓರ್ವ ಎಂಬಿಬಿಎಸ್ ಪದವೀಧರ ವೈದ್ಯೆ, ಶಸ್ತ್ರಚಿಕಿತ್ಸೆಯಲ್ಲಿ ಸ್ನಾತಕೋತ್ತರ ಪದವಿ ಪಡೆದು ಶಸ್ತ್ರಚಿಕಿತ್ಸಕಳಾದಳು. ಸುಸಜ್ಜಿತವಾದ ಆಸ್ಪತ್ರೆಯ ಗೌರವಾನ್ವಿತ ಕ್ಯಾಬಿನ್ ನಲ್ಲಿ ಆಕೆ ತನ್ನನ್ನು ತಾನು ಗುರುತಿಸಿಕೊಂಡ ಆಕೆ ಅಲ್ಲೂ ಕೂಡ ತನ್ನ ವೈಯುಕ್ತಿಕ ಹಿತಾಸಕ್ತಿಗಾಗಿ ಕಾದು ಕುಳಿತಿರಲಿಲ್ಲ... ಬದಲಾಗಿ ಕರ್ತವ್ಯದ ಕರೆಗೆ ಕಾಯುತ್ತಿದ್ದರು.

ಹಿರಿಯ ಸ್ಥಾನಿಕ ವೈದ್ಯಳಾಗಿ ಕಲ್ಪನಾ ಚಾವ್ಲಾ ಗೌರ್ಮೆಂಟ್ ಮೆಡಿಕಲ್ ಕಾಲೇಜಿನಲ್ಲಿ 2020 ರಲ್ಲಿ ಕಾರ್ಯನಿರ್ವಹಿಸಿದ ಪಾಯಲ್ 2021ರ ಜನವರಿ ತಿಂಗಳಲ್ಲಿ ಅದಕ್ಕಿಂತ ಹೆಚ್ಚಿನದನ್ನು ಸಾಧಿಸುವ ಇಚ್ಛೆಯಿಂದ ತಾನು ಧರಿಸಿದ ವೈದ್ಯೆಯ ಬಿಳಿ ಕೋಟಿನ ಜೊತೆಗೆ ಹಸಿರು ಬಣ್ಣದ ಮಿಲಿಟರಿ ಸಮವಸ್ತ್ರವನ್ನು ಧರಿಸಿ ಮಿಲಿಟರಿಯ ಕ್ಯಾಪ್ಟನ್ ಆಗಿ ಆಯ್ಕೆಯಾಗಿ ಗುರುತಿಸಿಕೊಂಡರು. ಆಕೆಯ ಆರಂಭಿಕ ಶಿಕ್ಷಣ ಅಂಬಾಲಾದಲ್ಲಿ ಪ್ರಾರಂಭವಾಯಿತು ವಿಧಿ ಆಕೆಯನ್ನು ಜಗತ್ತಿನ ಅತ್ಯಂತ ಎತ್ತರದ ಯುದ್ಧ ಭೂಮಿಯಾದ ಲೇಹ್ ನ ಖರ್ದುಂಗ ಲಾ ದತ್ತ ಕರೆದೊಯ್ಯಿತು.

ದೇಹವನ್ನು ಮಾತ್ರವಲ್ಲ, ದೇಹದ ಒಳಗಿರುವ ಮೂಳೆಗಳನ್ನು ಕೂಡ ಕೊರೆಯುವ ಹಿಮಾಲಯದ ಕಡುಚಳಿಯಲ್ಲಿ ಆಕೆ ಗಾಯಗೊಂಡ ಸೈನಿಕರ ಶುಶ್ರೂಷೆ ಮಾಡುತ್ತಿದ್ದಳು... ಅಗತ್ಯ ಬಿದ್ದರೆ ಶಸ್ತ್ರ ಚಿಕಿತ್ಸೆ ಕೂಡ.

ಯುದ್ಧದಲ್ಲಿ ಗಾಯಗೊಂಡ ಯೋಧರಿಗೆ ನಾನು ಚಿಕಿತ್ಸೆ ನೀಡಿ ಅವರ ಕಾಳಜಿ ಮಾಡಬಲ್ಲೆನಾದರೆ ನಾನೇಕೆ ಅವರಂತೆ ಯೋಧಳಾಗಬಾರದು? ಎಂಬ ಪ್ರಶ್ನೆ ಆಕೆಯಲ್ಲಿ ಮೂಡಿತು.

ಈ ರೀತಿ ವೈದ್ಯರಿಗೆ ಮಿಲಿಟರಿಯ ಕಠಿಣ ತರಬೇತಿಯನ್ನು ನೀಡುವುದು ಅತ್ಯಂತ ಕಷ್ಟಕರ ಹಾಗೂ ಯಾವುದೇ ರೀತಿಯ ಭರವಸೆಯನ್ನು ಅವರ ಜೀವದ ಮೇಲೆ ಕೊಡುವುದು ಸಾಧ್ಯವಿಲ್ಲ ಎಂಬ ಕಾರಣವನ್ನು ಮುಂದೊಡ್ಡಿ ಆಕೆಯ ತರಬೇತಿಗೆ ಪ್ರಾರಂಭದಲ್ಲಿ ಅವಕಾಶವನ್ನು ನೀಡಲಿಲ್ಲ...ಆದರೆ ಆಕೆ ಈಗಾಗಲೇ ತನ್ನ ಮನಸ್ಸಿನಲ್ಲಿ ಈ ಕುರಿತು ಯೋಜನೆಯನ್ನು ಮಾಡಿಕೊಂಡಿದ್ದಳು, ಪರಿಣಾಮವಾಗಿ ಆಕೆ ಬೇರೆ ಯಾವುದೇ ಆಯ್ಕೆಯನ್ನು ತನ್ನದಾಗಿಸಿಕೊಳ್ಳದೆ ಅದೇ ದಾರಿಯಲ್ಲಿ ಮುಂದುವರೆಯಲು ನಿಶ್ಚಯಿಸಿದ್ದಳು. ಮಿಲಿಟರಿ ಆಸ್ಪತ್ರೆಯಲ್ಲಿ ಗಾಯಗೊಂಡ ಯೋಧರಿಗೆ ಶಸ್ತ್ರಚಿಕಿತ್ಸೆಯ ತನ್ನ ಕರ್ತವ್ಯದ ಜೊತೆ ಜೊತೆಗೆ ಆಕೆ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳುವ ಕಠಿಣ ತರಬೇತಿಯಲ್ಲಿ ತೊಡಗಿಕೊಂಡಳು.





ಆಗ್ರಾದಲ್ಲಿರುವ ಪ್ಯಾರಾ ಟ್ರೂಪರ್ ಗಳ ತರಬೇತಿ ಶಾಲೆಯಲ್ಲಿ ಪ್ರತಿದಿನ ನಸುಕಿನ ಜಾವದ 3 ಗಂಟೆಗೆ ಆರಂಭವಾಗುತ್ತಿದ್ದ ತರಬೇತಿಯಲ್ಲಿ ಆಕೆ ಕೇವಲ ತನ್ನ ವೈದ್ಯಕೀಯ ಜ್ಞಾನವನ್ನು ಮಾತ್ರವಲ್ಲ ಬದಲಾಗಿ ಸರಿಸುಮಾರು 65 ಕೆಜಿ ತೂಕದ ರಕ್ ಸ್ಯಾಕನ್ನು ಹೊರ ಬೇಕಾಗುತ್ತಿತ್ತು. 40 ಕಿ.ಮೀ ದೂರದವರೆಗೆ ನಡೆಯುವ ಮತ್ತು ಓಡುವ ಸಾಮರ್ಥ್ಯವನ್ನು ಪಡೆದುಕೊಳ್ಳಲು ನಿರಂತರವಾಗಿ ಆಕೆಯ ತರಬೇತಿ ನಡೆಯುತ್ತಿತ್ತು. ಚಿಕಿತ್ಸೆಯ ಅತ್ಯಂತ ಸೂಕ್ಷ್ಮಾತಿಸೂಕ್ಷ್ಮ ನಿಖರತೆಯನ್ನು ಹೊಂದಿದ ಆಕೆಯ ಕೈಗಳು ಇದೀಗ ಮಣ್ಣಿನ ಒಡನಾಟದಲ್ಲಿ ಗಟ್ಟಿ ಮುಟ್ಟಾಗಿದ್ದವು. ಇದೀಗ ಆಕೆ ಕೇವಲ ಓರ್ವ ವೈದ್ಯಳಾಗಿರಲಿಲ್ಲ ಬದಲಾಗಿ ಹರಿತವಾದ ಆಯುಧವಾಗಿ ಬದಲಾಗಿದ್ದಳು.

2020ರ ಸೆಪ್ಟೆಂಬರ್ ತಿಂಗಳ ಆ ದಿನ ಭಾರತೀಯ ಮಿಲಿಟರಿ ಇತಿಹಾಸದ ಐತಿಹಾಸಿಕ

ದಂತ ಕಥೆಯೊಂದರ ಉದಯವಾಯಿತು. ಆಗ್ರಾದ ಮಣ್ಣಿನಲ್ಲಿ ಓರ್ವ ನವ ಸ್ಫೂರ್ತಿಯ ಉದಯವಾಯಿತು. ಅತ್ಯಂತ ಗಟ್ಟಿಯಾದ ಗಾಜಿನ ತಾರಸಿಯನ್ನು ಒಡೆಯುವಂತೆ ಡಾಕ್ಟರ್ ಪಾಯಲ್ ಭಾಬ್ರಾ ಅವರು ತಮ್ಮೆಲ್ಲ ದೈಹಿಕ ಅಡೆತಡೆಗಳನ್ನು ಮೀರಿ ಭಾರತೀಯ ಮಿಲಿಟರಿ ಯೋಧರ ಸಮವಸ್ತ್ರದಲ್ಲಿ ಹೆಮ್ಮೆಯಿಂದ ತಲೆಯೆತ್ತಿ ನಿಂತಿದ್ದರು.

ಮೊದಲ ಮಹಿಳಾ ಶಸ್ತ್ರಚಿಕಿತ್ಸರಯಾಗಿ ಭಾರತದ ಮಿಲಿಟರಿ ಇತಿಹಾಸದಲ್ಲಿ ದಾಖಲಾಗಿರುವ ಆಕೆ ಎಲೈಟ್ ಪ್ಯಾರಾ ಸ್ಪೆಷಲ್ ಫೋರ್ಸ್ ನಲ್ಲಿ ಪದಗ್ರಹಣ ಮಾಡಿದಳು. ಆಕೆಯ ತಂದೆ ರಾಜೇಂದ್ರ ಭಾಬ್ರಾ ಅವರು ಹೆಮ್ಮೆಯ ಜೊತೆಗೆ ಕಂಪಿಸುತ್ತಿರುವ ಧ್ವನಿಯಲ್ಲಿ ಮಾತನಾಡಿ ಅತ್ಯಧಿಕ ಸಂಪಾದನೆಯ ಹಲವಾರು ವಿದೇಶಿ ಅವಕಾಶಗಳನ್ನು ತಿರಸ್ಕರಿಸಿದ ತಮ್ಮ ಮಗಳ ಹೃದಯ ಕೇವಲ ತಾಯ್ನಾಡಿನ ಸೇವೆಗಾಗಿ ತುಡಿಯುತ್ತಿತ್ತು ಎಂದು ಗದ್ಗದಿತರಾಗಿ ಹೇಳಿದರು.

ಶೌರ್ಯದ ನಿಜವಾದ ಪರಂಪರೆಯ ಕೊಂಡಿಯಾಗಿರುವ ಪಾಯಲ್ ಅವರು ಇದೀಗ ಮೇಜರ್ ಹುದ್ದೆಗೆ ಬಡ್ತಿಯನ್ನು ಹೊಂದಿದ್ದು ದೇಶದ ಉತ್ತರ ಗಡಿ ಭಾಗವಾದ ಲಡಾಖನಲ್ಲಿ ಸೇವೆ ಸಲ್ಲಿಸುತ್ತಿದ್ದು ಆಕೆ ನಿಜವಾದ ರಕ್ಷಕಿ ಎಂದು ಗುರುತಿಸಿಕೊಂಡಿದ್ದಾರೆ.

ತನ್ನ ಒಂದು ಕೈಯಲ್ಲಿ ಶಸ್ತ್ರಚಿಕಿತ್ಸೆಯ ಉಪಕರಣವನ್ನು ಹಿಡಿದುಕೊಂಡು ಯುದ್ಧದ ಗಾಯಾಳುಗಳನ್ನು ರಕ್ಷಿಸುವ

ಕೆಲಸ ಮಾಡುತ್ತ ಭರವಸೆಯ ದೀಪವನ್ನು ಹೊತ್ತಿಸುವ ಆಕೆ ಮತ್ತೊಂದು ಕೈಯಲ್ಲಿ ಶತ್ರುಗಳನ್ನು ಹಿಡಿದು ದೇಶಕ್ಕೆ ಎದುರಾಗುವ ಯಾವುದೇ ಅಪಾಯವನ್ನು ಎದುರಿಸಲು ಸನ್ನದ್ದರಾಗಿ ನಿಂತಿದ್ದಾಳೆ.

ಮೋಡಗಳ ಮರೆಯಿಂದ ಪ್ಯಾರಾಚೂಟ್ ಸಹಾಯದಿಂದ ವೈರಿಗಳ ಗಡಿ ಪ್ರದೇಶದಲ್ಲಿ ಕೆಳಗಿಳಿದು

ಹೋಗುವ ಛಾತಿಯನ್ನು ಹೊಂದಿರುವ ಆಕೆ ಮುಂದಿನ ಕ್ಷಣವೇ ಜೀವವನ್ನು ರಕ್ಷಿಸುವ ಶಸ್ತ್ರಚಿಕಿತ್ಸೆಯನ್ನು ಆಗಸದ ಅಡಿಯ ತೆರೆದ ಬಯಲಿನಲ್ಲಿ ಮಾಡುವ ಧೈರ್ಯವನ್ನು ಕೂಡ ಹೊಂದಿದ್ದಾಳೆ

ಮೇಜರ್ ಡಾ. ಪಾಯಲ್ ಭಾಬ್ರಾ ಹೆಣ್ಣು ಮಕ್ಕಳ ಧೈರ್ಯ ಮತ್ತು ಸಾಹಸಕ್ಕೆ ಮಿತಿಯೇ ಇಲ್ಲ ಎಂಬುದಕ್ಕೆ ಸಾಕ್ಷಿಯಾಗಿ ನಿಂತಿದ್ದಾಳೆ. ಆಕೆ ಆಪರೇಷನ್ ಥಿಯೇಟರ್ ನಲ್ಲಿ ಕಾರ್ಯ ನಿರ್ವಹಿಸಿದಷ್ಟೇ ಸಹಜವಾಗಿ, ಅಷ್ಟೇ ಧೈರ್ಯ ಸಾಹಸ ಹಾಗೂ ಚಾಕಚಕ್ಯತೆಯಿಂದ ಯುದ್ಧ ರಂಗದಲ್ಲಿಯೂ ಕಾರ್ಯನಿರ್ವಹಿಸುತ್ತಿದ್ದಾಳೆ.

ಪಾಯಲ್ ಭಾಬ್ರಾರಂತಹ ಹೆಣ್ಣು ಮಕ್ಕಳ ಸಂತತಿ ಸಾವಿರವಾಗಲಿ ಎಂದು ಹಾರೈಸುವ

# ಮೇ.10 ರಂದು ನಗರದಲ್ಲಿ ಉಚಿತ ಕೃತಕ ಕೈ, ಕಾಲು ಜೋಡಣಾ ಶಿಬಿರ: ಡಾ.ನಾಗಾರ್ಜುನ್

**ಚಾಮರಾಜನಗರ:** ರೋಟರಿ ಸಂಸ್ಥೆ ವತಿಯಿಂದ ಉಚಿತ ಕೃತಕ ಕೈ-ಕಾಲು ಜೋಡಣಾ ಶಿಬಿರವು ಮೇ.10 ರಂದು ನಡೆಯಲಿದೆ ಎಂದು ರೋಟರಿ ಸಂಸ್ಥೆಯ ಜಿಲ್ಲಾ ಮಾಜಿ ಗೌರರ್ ಡಾ.ನಾಗಾರ್ಜುನ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ. ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಮೇ.10 ರಂದು ನಗರದ ಬಿ.ರಾಚಯ್ಯ ಜೋಡಿರಸ್ತೆಯಲ್ಲಿರುವ ರೋಟರಿ ಭವನದಲ್ಲಿ ಬೆಳಿಗ್ಗೆ 9.30 ಕ್ಕೆ ಉಚಿತ ಕೃತಕ ಕೈ-ಕಾಲು ಜೋಡಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಈಗಾಗಲೇ 100 ಮಂದಿ ನೋಂದಾಯಿಸಿಕೊಂಡಿದ್ದಾರೆ. ಚಾಮರಾಜನಗರ ಹಾಗೂ ಮೈಸೂರು ಜಿಲ್ಲೆಯ ದಿವ್ಯಾಂಗರು ಶಿಬಿರದ ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ರೋಟರಿ ಸಂಸ್ಥೆಯು ಅಂತಾರಾಷ್ಟ್ರೀಯ ಸೇವಾ ಸಂಸ್ಥೆಯಾಗಿದ್ದು, ಸಮಾಜಮುಖಿ ಕಾರ್ಯಗಳನ್ನು ನಡೆಸುತ್ತಿದ್ದು, ಜನರಿಗೆ ನೆರವಾಗುವ ಕಾರ್ಯಕ್ರಮ ಮಾಡುತ್ತಾ ಬರಲಾಗಿದೆ. ಅಂಗವಿಕಲ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ವಿಚಾರಿಸಿದಾಗ? ಜಿಲ್ಲೆಯಲ್ಲಿ ಕೈ ಕಾಲು ತೊಂದರೆಯುಳ್ಳ ವಿಕಲಚೇನರು ಇದ್ದಾರೆ ಎಂದು ಮಾಹಿತಿ ನೀಡಿದರು.

ನಮ್ಮ ಸಂಸ್ಥೆಯ ಅಧ್ಯಕ್ಷರಾದ ಕಾಗಲವಾಡಿಚಂದ್ರು ಅವರ ಅಧಿಕಾರ ವಹಿಸಿಕೊಂಡ ಸಂದರ್ಭದಿಂದಲ್ಲೇ ಕೈ-ಕಾಲು ಕಳೆದುಕೊಂಡಿರುವಂತಹರಿಗೆ ಕೃತಕ ಕೈ-ಕಾಲು ಶಿಬಿರವನ್ನು ಮಾಡಬೇಕು ಎಂದು ಆಶಯದಂತೆ ಈ ಮಹತ್ವ ಆಕಾಂಕ್ಷೆ ಪೂರೈಸುವ ಹಂತಕ್ಕೆ ಬಂದಿದೆ. ಶಿಬಿರದಲ್ಲಿ ಕೈ-ಕಾಲು ಅಳತೆ ಪಡೆದು ಜೂನ್ ತಿಂಗಳ ಮೊದಲ ವಾರದಲ್ಲಿ ಕೃತಕ ಕೈ-ಕಾಲು ಜೋಡಣೆ ಮಾಡಲಾಗುವುದು ಎಂದರು.

ರೋಟರಿ ಅಧ್ಯಕ್ಷ ಕಾಗಲವಾಡಿ ಚಂದ್ರು ಮಾತನಾಡಿ, ನನ್ನ ಒಂದು ವರ್ಷದ ಅವಧಿಯ 300ನೇ ಕಾರ್ಯಕ್ರಮ ಉಚಿತ ಕೃತಕ ಕೈ-ಕಾಲು ಜೋಡಣಾ ಶಿಬಿರವಾಗಿದೆ. ಜಿಲ್ಲೆಯಲ್ಲಿ ಕೈ-ಕಾಲು ತೊಂದರೆಯುಳ್ಳುವರು ಶಿಬಿರದ ಸದುಪಯೋಗಪಡ 'ದುಕೊಳ್ಳಬೇಕು ಎಂದು ಮನವಿ ಮಾಡಿದರು.

ರೋಟರಿ ಸಂಸ್ಥಾಪಕ ಸದಸ್ಯ ಜಿ.ಆರ್.ಆಶ್ವಥನಾರಾಯಣ್ ಮಾತನಾಡಿ, ರೋಟರಿ ಸಂಸ್ಥೆಯು ಜಿಲ್ಲೆಯಲ್ಲಿ ಸಾಮಾಜಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ಮಾಡುತ್ತಾ ಬಂದಿದೆ. 10 ಕೃತಕ ಕಾಲು ವೈಯುಕ್ತಿಕವಾಗಿ ನೀಡಲಾಗಿದೆ ಎಂದರು.

ರೋಟರಿ ಸಂಸ್ಥೆ ಸಂಸ್ಥಾಪಕ ಸದಸ್ಯ ಸಿ.ವಿ.ಶ್ರೀನಿವಾಸಶೆಟ್ಟಿ ಮಾತನಾಡಿ, ರೋಟರಿ ಸಂಸ್ಥೆಯು ಪ್ರತಿತಿಂಗಳು ಭಾನುವಾರ ಉಚಿತ ಕಣ್ಣಿನ ತಪಾಸಣಾ ಶಿಬಿರ ಮಾಡಿಕೊಂಡು ಬರಲಾಗಿದ್ದು ಮೇ. 10 ರಂದು ಉಚಿತ ಕೈ-ಕಾಲು ಜೋಡಣಾ ಶಿಬಿರವನ್ನು ಹಮ್ಮಿಕೊಂಡಿದೆ ಎಂದರು.

ಹೆಚ್ಚಿನ ಮಾಹಿತಿಗಾಗಿ / ನೊಂದವಣಿಗಾಗಿ 9620485806, 8088223227, 9538035559, 9449971709 ಸಂಪರ್ಕಿಸಬಹುದು ಪತ್ರಿಕಾಗೋಷ್ಠಿಯಲ್ಲಿ ರೋಟರಿ ಮಾಜಿ ಅಧ್ಯಕ್ಷ ಚಂದ್ರಪ್ರಭಜೈನ್, ಸಂಸ್ಥೆಯ ಮುಂದಿನ ಸಾಲಿನ ಅಧ್ಯಕ್ಷ ಅಬ್ದುಲ್‌ಅಜೀಜ್ ದೀನಾ, ಕಾರ್ಯದರ್ಶಿ ಅಂಕಶೆಟ್ಟಿ ಹಾಜರಿದ್ದರು.



# "ಟಿಕೆಟ್ ಕಲೆಕ್ಟರ್ ಟು ವರ್ಲ್ಡ್ ಕಪ್ ವಿನ್ನರ್"



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಯಶಸ್ಸು ಎಂಬುದು ಕೇವಲ ಅದೃಷ್ಟವಲ್ಲ,ಅದು ಅಚಲವಾದ ತಾಳ್ಮೆ ಮತ್ತು ಕಠಿಣ ಪರಿಶ್ರಮದ ಫಲ. ರಾಂಚಿಯಂತಹ ಪುಟ್ಟ ನಗರದಿಂದ ಬಂದ ಮಹೇಂದ್ರ ಸಿಂಗ್ ಧೋನಿ ಅವರ ಬದುಕು ಇಂದು ಕೋಟ್ಯಂತರ ಯುವಕರಿಗೆ ಬರಿ ಕಥೆಯಲ್ಲ, ಅದೊಂದು ಜೀವಂತ ಪಾಠ.

ಧೋನಿ ಅವರ ಆರಂಭಿಕ ದಿನಗಳು ಸವಾಲುಗಳ ಸುಳಿಯಾಗಿದ್ದವು. ಕುಟುಂಬದ ಆರ್ಥಿಕ ಭದ್ರತೆಗಾಗಿ ಅವರು ರೈಲ್ವೆಯಲ್ಲಿ ಟಿಕೆಟ್ ಕಲೆಕ್ಟರ್ ಆಗಿ ಕೆಲಸಕ್ಕೆ ಸೇರಬೇಕಾಯಿತು. ಖರಗ್‌ಪುರ ರೈಲ್ವೆ ನಿಲ್ದಾಣದಲ್ಲಿ ಟಿಕೆಟ್ ತಪಾಸಣೆ ಮಾಡುತ್ತಾ, ಕಿಕ್ಕಿರಿದ ಜನರ ನಡುವೆ ಡ್ಯೂಟಿ ಮುಗಿಸಿ, ಮೈದಾನದಲ್ಲಿ ಬೆವರು ಸುರಿಸುತ್ತಿದ್ದರು. ಆ ಹಂತದಲ್ಲಿ ಅವರು ಅನುಭವಿಸಿದ ಅನಿಶ್ಚಿತತೆ ಮತ್ತು ಕನಸು-ವಾಸ್ತವದ ನಡುವಿನ ಹೋರಾಟ ಸಾಮಾನ್ಯದ್ದಲ್ಲ. ಆದರೆ, ಸುರಕ್ಷಿತ ಕೆಲಸವನ್ನು ಬಿಟ್ಟು ಕ್ರಿಕೆಟ್‌ಗಾಗಿ ಸರ್ವಸ್ವವನ್ನೂ ಪಣಕ್ಕಿಡುವ ಧೈರ್ಯ ತೋರಿದರು.

ಅಂತರಾಷ್ಟ್ರೀಯ ಕ್ರಿಕೆಟ್‌ಗೆ ತಡವಾಗಿ ಪದಾರ್ಪಣೆ ಮಾಡಿದರೂ,ಧೋನಿ ತಮ್ಮ ವಿಶಿಷ್ಟ ಶೈಲಿಯ ಮೂಲಕ ಇತಿಹಾಸ ಬರೆದರು. ಸೋತಾಗ ಕುಗ್ಗದೆ, ಗೆದ್ದಾಗ ಬೀಗದೆ ಕ್ಯಾಪ್ಟನ್ ಕೂಲ್ ಆಗಿ ಹೊರಹೊಮ್ಮಿದರು. 2007ರ ಟಿ20 ವಿಶ್ವಕಪ್, 2011ರ ಏಕದಿನ ವಿಶ್ವಕಪ್ ಮತ್ತು 2013ರ ಚಾಂಪಿಯನ್ಸ್ ಟ್ರೋಫಿ ಗೆಲ್ಲಿಸಿಕೊಡುವ ಮೂಲಕ ಐಸಿಸಿಯ ಎಲ್ಲಾ ಪ್ರಮುಖ ಟ್ರೋಫಿಗಳನ್ನು ಮುಡಿಗೇರಿಸಿಕೊಂಡ ಏಕೈಕ ನಾಯಕ ಎಂಬ ಕೀರ್ತಿಗೆ ಭಾಜನರಾದರು.



ಸ್ಫೂರ್ತಿ ಸುಧೆ - 15

ಒತ್ತಡದ ಪರಿಸ್ಥಿತಿಯಲ್ಲಿ ಶಾಂತವಾಗಿ ನಿರ್ಧಾರ ತೆಗೆದುಕೊಳ್ಳುವ ಅವರ ಕಲೆ ಜಗತ್ತನ್ನೇ ಬೆರಗುಗೊಳಿಸಿತು.

ಧೋನಿ ಅವರ ಜೀವನ ನಮಗೆ ಕಲಿಸುವ ಪಾಠವೆಂದರೆ, ನೀವು ಎಲ್ಲಿಂದ ಬಂದಿದ್ದೀರಿ ಎಂಬುದು ಮುಖ್ಯವಲ್ಲ, ಎಲ್ಲಿಗೆ ತಲುಪಬೇಕೆಂಬ ಛಲವಿದ್ದರೆ ಗಲ್ಲಿಯಿಂದ ವಿಶ್ವಮಟ್ಟಕ್ಕೆ ಏರಬಹುದು. ರಿಸ್ಕ್ ತೆಗೆದುಕೊಳ್ಳುವ ಧೈರ್ಯ ಮತ್ತು ಪರಿಶ್ರಮವಿದ್ದರೆ ಶೂನ್ಯದಿಂದ ಸಾಮ್ರಾಜ್ಯವನ್ನೇ ಕಟ್ಟಬಹುದು ಎಂಬುದಕ್ಕೆ ಇವರೇ ಸಾಕ್ಷಿ. ಸವಾಲುಗಳನ್ನೇ ಮೆಟ್ಟಿಲು ಮಾಡಿಕೊಂಡು ಬೆಳೆದ ಈ ಮಹಾನ್ ನಾಯಕನ ಪಯಣ, ಹತಾಶರಾದ ಪ್ರತಿಯೊಬ್ಬ ಯುವಕನಿಗೂ ಒಂದು ಭರವಸೆಯ ದಾರಿದೀಪ.


# ಕರ್ನಾಟಕದ ಗದ್ದುಗೆ ಸಮರದ ಇತಿಹಾಸ

ಕರ್ನಾಟಕದ ಇಂದಿನ ರಾಜಕೀಯ ಸನ್ನಿವೇಶವು ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ 'ಅಧಿಕಾರ ಕೇಂದ್ರ'ಗಳ ಪೈಪೋಟಿಗೆ ಸಾಕ್ಷಿಯಾಗಿದೆ. 2023ರಲ್ಲಿ ಕಾಂಗ್ರೆಸ್ 135 ಸ್ಥಾನಗಳ ಭರ್ಜರಿ ಬಹುಮತ ಗಳಿಸಿದರೂ, ಆಡಳಿತದ ಒಳಗಿನ ಶಕ್ತಿ ಸಮತೋಲನವು ಹಳೆಯ 'ಪವರ್ ಪಾಲಿಟಿಕ್ಸ್' ಅನ್ನು ನೆನಪಿಸುತ್ತಿದೆ. ಸಿದ್ಧರಾಮಯ್ಯ ಅವರ 'ಅಹಿಂದ' ವರ್ಗಗಳ ಬೆಂಬಲ ಮತ್ತು ಡಿ.ಕೆ. ಶಿವಕುಮಾರ್ ಅವರ ಸಾಂಸ್ಥಿಕ ಹಿಡಿತದ ನಡುವಿನ ಈ ಹಗ್ಗಜಗ್ಗಾಟವು ಕೇವಲ ವ್ಯಕ್ತಿಗತವಲ್ಲ; ಇದು ಕರ್ನಾಟಕ ರಾಜಕಾರಣದ ಇತಿಹಾಸದಲ್ಲಿ ಹಾಸುಹೊಕ್ಕಾಗಿರುವ "ನಾಯಕತ್ವದ ಸಂಘರ್ಷ" ಎಂಬ ಪರಂಪರೆಯ ಮುಂದುವರಿಕೆಯಾಗಿದೆ. ಬನ್ನಿ , ಇತಿಹಾಸವನ್ನೊಮ್ಮೆ ನೋಡೋಣ .

1. ನಿಜಲಿಂಗಪ್ಪ ಮತ್ತು ಕಾಂಗ್ರೆಸ್‌ನ ಮೊದಲ ಬಿರುಕು (1960ರ ದಶಕ): ಏಕೀಕೃತ ಕರ್ನಾಟಕದ ಬಲಿಷ್ಠ ನಾಯಕ ಎಸ್. ನಿಜಲಿಂಗಪ್ಪ ಅವರ ಕಾಲದಲ್ಲಿಯೇ ಹೈಕಮಾಂಡ್ ಸಂಸ್ಕೃತಿ ಮತ್ತು ಪ್ರಾದೇಶಿಕ ನಾಯಕತ್ವದ ನಡುವಿನ ಸಂಘರ್ಷ ಆರಂಭವಾಯಿತು. 1969ರಲ್ಲಿ ಕಾಂಗ್ರೆಸ್ ಪಕ್ಷವು ರಾಷ್ಟ್ರೀಯ ಮಟ್ಟದಲ್ಲಿ ಇಭ್ಭಾಗವಾದಾಗ (Congress–O ಮತ್ತು Congress-I),ಕರ್ನಾಟಕದ ನಾಯಕತ್ವವೂ ವಿಭಜನೆಗೊಂಡಿತು. ನಿಜಲಿಂಗಪ್ಪ ಅವರು ಇಂದಿರಾ ಗಾಂಧಿಯವರ ವಿರುದ್ಧ ನಿಂತ 'ಸಿಂಡಿಕೇಟ್' ಗುಂಪಿನ ನೇತೃತ್ವ ವಹಿಸಿದರು. ಇದು ರಾಜ್ಯದಲ್ಲಿ ಕಾಂಗ್ರೆಸ್‌ನ ಏಕಸ್ವಾಮ್ಯಕ್ಕೆ ಮೊದಲ ದೊಡ್ಡ ಪೆಟ್ಟು ನೀಡಿತು ಮತ್ತು ಲಿಂಗಾಯತ-ಒಕ್ಕಲಿಗ ಸಮುದಾಯಗಳ ರಾಜಕೀಯ ಧ್ರುವೀಕರಣಕ್ಕೆ ನಾಂದಿ ಹಾಡಿತು.



2. **ದೇವರಾಜ ಅರಸು:** ಅಧಿಕಾರ ಹಸ್ತಾಂತರದ ಕ್ರಾಂತಿ ಡಿ. ದೇವರಾಜ ಅರಸು ಅವರು ಕರ್ನಾಟಕದ ರಾಜಕೀಯ ಭೂಪಟವನ್ನು ಮರುಹೊಂದಿಸಿದರು. ಅವರು ಪ್ರಬಲ ಸಮುದಾಯಗಳಿಂದ ಅಧಿಕಾರವನ್ನು ಕಿತ್ತು ಹಿಂದುಳಿದ ವರ್ಗಗಳಿಗೆ ನೀಡಿದರು. ಆದರೆ, ಅಧಿಕಾರದ ಉತ್ತುಂಗದಲ್ಲಿದ್ದಾಗ ಅವರೂ ಕೂಡ ಸ್ವಪಕ್ಷೀಯರ ವಿರೋಧ ಎದುರಿಸಬೇಕಾಯಿತು. ಇಂದಿರಾ ಗಾಂಧಿಯವರೊಂದಿಗಿನ ಭಿನ್ನಾಭಿಪ್ರಾಯ ಮತ್ತು ಆರ್. ಗುಂಡೂರಾವ್ ಅವರಂತಹ ನಾಯಕರ ಬಂಡಾಯದಿಂದಾಗಿ ಅರಸು ಅವರು ಕಾಂಗ್ರೆಸ್ ತೊರೆದು 'ಕರ್ನಾಟಕ ಕಾಂಗ್ರೆಸ್' ಸ್ಥಾಪಿಸಿದರು. ಆದರೆ 1980ರ ಚುನಾವಣೆಯಲ್ಲಿ ಅವರು ಸೋಲನುಭವಿಸಬೇಕಾಯಿತು. ಇದು ಕರ್ನಾಟಕದಲ್ಲಿ ಪ್ರಾದೇಶಿಕ ಪಕ್ಷಗಳ ಸ್ಥಾಪನೆ ಮತ್ತು ವಿಫಲತೆಯ ಮೊದಲ ಪಾಠವಾಯಿತು.



3. **ಜನತಾ ಪರಿವಾರದ ಏಳುಬೀಳು: ಹೆಗಡೆ, ದೇವೇಗೌಡ ಮತ್ತು ಬೊಮ್ಮಾಯಿ**

1983ರಲ್ಲಿ ರಾಮಕೃಷ್ಣ ಹೆಗಡೆ ನೇತೃತ್ವದಲ್ಲಿ ಮೊದಲ ಕಾಂಗ್ರೆಸ್ಸೇತರ ಸರ್ಕಾರ ರಚನೆಯಾಯಿತು. ಇದು ರಾಜ್ಯಕ್ಕೆ ಹೊಸ ದಿಕ್ಕು ನೀಡಿದರೂ, ಆಂತರಿಕ ಕಲಹಕ್ಕೆ ಬಲಿಯಾಯಿತು.

- ಹೆಗಡೆ vs ದೇವೇಗೌಡ: ಹೆಗಡೆಯವರ ನಗರ ಕೇಂದ್ರಿತ ನಾಯಕತ್ವ ಮತ್ತು ದೇವೇಗೌಡರ ಗ್ರಾಮೀಣ ಒಕ್ಕಲಿಗ ಅಸ್ಮಿತೆಯ ನಡುವೆ ಸಂಘರ್ಷ ಉಂಟಾಯಿತು. ಫೋನ್ ಕದ್ದಾಲಿಕೆ ಹಗರಣದ ನಂತರ ಹೆಗಡೆ ರಾಜೀನಾಮೆ ನೀಡಿದರು. ನಂತರ ಎಸ್‌ಆರ್ ಬೊಮ್ಮಾಯಿ ಮುಖ್ಯಮಂತ್ರಿಯಾದರೂ, ಪಕ್ಷದೊಳಗಿನ ಅತೃಪ್ತಿ ಮುಂದುವರಿಯಿತು.
- **1989ರ ಫಲಿತಾಂಶ:** ಈ ಆಂತರಿಕ ಕಚ್ಚಾಟದಿಂದಾಗಿ 1989ರಲ್ಲಿ ಜನತಾದಳ ಧೂಳೀಪಟವಾಯಿತು. ಕಾಂಗ್ರೆಸ್ 178 ಸ್ಥಾನಗಳನ್ನು ಗೆದ್ದರೆ, ಜನತಾದಳವು ಕೇವಲ 24 ಸ್ಥಾನಗಳಿಗೆ ಕುಸಿಯಿತು.
- **ಜೆಡಿಎಸ್ ಉದಯ:** 1994ರಲ್ಲಿ ಅಧಿಕಾರಕ್ಕೆ ಮರಳಿದ ಜನತಾದಳವು 1999ರ ವೇಳೆಗೆ ಜೆ.ಹೆಚ್. ಪಟೇಲ್ ಅವರ ಅವಧಿಯಲ್ಲಿ ಜೆಡಿಎಸ್ (ದೇವೇಗೌಡರ ನೇತೃತ್ವ) ಮತ್ತು ಜೆಡಿಯು (ಶರದ್ ಯಾದವ್ ಬೆಂಬಲಿತ ಜೆ.ಹೆಚ್. ಪಟೇಲ್ ಬಣ) ಎಂದು ವಿಭಜನೆಯಾಯಿತು. ಈ ವಿಭಜನೆಯಿಂದಾಗಿ 1999ರಲ್ಲಿ ಕಾಂಗ್ರೆಸ್ ಮತ್ತೆ ಸುಲಭವಾಗಿ ಅಧಿಕಾರ ಹಿಡಿಯಿತು.



4. **ಕಾಂಗ್ರೆಸ್‌ನ ಆಂತರಿಕ ಯುದ್ಧ: ಬಂಗಾರಪ್ಪ, ಮೊಯ್ಲಿ ಮತ್ತು ಕೃಷ್ಣ** 1990ರ ದಶಕವು ಕಾಂಗ್ರೆಸ್ ಪಾಲಿಗೆ ಅತ್ಯಂತ ಅಸ್ಥಿರವಾಗಿತ್ತು. ವೀರೇಂದ್ರ ಪಾಟೀಲರ ಅನಿರೀಕ್ಷಿತ ಪದಚ್ಯುತಿಯ ನಂತರ ಬಂದ ಎಸ್. ಬಂಗಾರಪ್ಪ ಅವರ ವಿರುದ್ಧ ವೀರಪ್ಪ ಮೊಯ್ಲಿ ಬಂಡಾಯವೆದ್ದರು. ಈ ನಾಯಕತ್ವದ ಫೈಟ್‌ನಿಂದಾಗಿ 1994ರ ಚುನಾವಣೆಯಲ್ಲಿ ಕಾಂಗ್ರೆಸ್ ಇತಿಹಾಸದಲ್ಲೇ ಅತ್ಯಂತ ಕಡಿಮೆ ಸ್ಥಾನಗಳನ್ನು (34 ಸ್ಥಾನ) ಪಡೆಯುವಂತಾಯಿತು. ಮುಂದೆ ಎಸ್.ಎಂ. ಕೃಷ್ಣ ಅವರು 1999 ರಿಂದ 2004 ರವರೆಗೆ ಸ್ಥಿರ ಆಡಳಿತ ನೀಡಿದರೂ, ರಾಜಕುಮಾರ್ ಅಪಹರಣ , ಬರಗಾಲ , ನಗರ ಕೇಂದ್ರೀಕೃತ ಆಡಳಿತ ಮುಂತಾದ ಕಾರಣಗಳಿಂದ 2004ರಲ್ಲಿ ಅತಂತ್ರ ವಿಧಾನಸಭೆ ಸೃಷ್ಟಿಯಾಯಿತು.



5. ಯಡಿಯೂರಪ್ಪ ಮತ್ತು ಕೆಜೆಪಿ (KJP)ಪ್ರಹಸನ ದಕ್ಷಿಣ ಭಾರತದಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತಂದ ಬಿ.ಎಸ್. ಯಡಿಯೂರಪ್ಪ ಅವರೂ ಕೂಡ 'ಪವರ್ ಪಾಲಿಟಿಕ್ಸ್'ಗೆ ಬಲಿಯಾದರು. 2012ರಲ್ಲಿ ಬಿಜೆಪಿಯ ಹಿರಿಯ ನಾಯಕರೊಂದಿಗೆ ಮುನಿಸಿಕೊಂಡು ಅವರು 'ಕರ್ನಾಟಕ ಜನತಾ ಪಕ್ಷ' (KJP) ಕಟ್ಟಿದರು.



- 2013ರ ಅಂಕಿಅಂಶಗಳು: ಈ ಚುನಾವಣೆಯಲ್ಲಿ ಬಿಜೆಪಿ ಮತ್ತು ಕೆಜೆಪಿ ಪ್ರತ್ಯೇಕವಾಗಿ ಸ್ಪರ್ಧಿಸಿದವು. ಬಿಜೆಪಿ ಕೇವಲ 40 ಸ್ಥಾನಗಳನ್ನು ಗೆದ್ದರೆ, ಕೆಜೆಪಿ 6 ಸ್ಥಾನಗಳನ್ನು ಮಾತ್ರ ಗೆದ್ದಿತು.



- **ಪರಿಣಾಮ:** ಮತಗಳ ವಿಭಜನೆಯಿಂದಾಗಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ 122 ಸ್ಥಾನಗಳೊಂದಿಗೆ ಪೂರ್ಣ ಬಹುಮತ ಪಡೆಯಿತು. ಯಡಿಯೂರಪ್ಪ ಅವರು ತಾವು ಗೆಲ್ಲದಿದ್ದರೂ ಬಿಜೆಪಿಯನ್ನು ಸೋಲಿಸಬಹುದು ಎಂದು ತೋರಿಸಿಕೊಟ್ಟರು. ಈ ಸೋಲು ಬಿಜೆಪಿಗೆ ದೊಡ್ಡ ಪಾಠವಾಯಿತು ಮತ್ತು 2014ರಲ್ಲಿ ಯಡಿಯೂರಪ್ಪ ಮತ್ತೆ ಬಿಜೆಪಿಗೆ ಮರಳಿದರು.

6. **ಮೌಲ್ಯಮಾಪನ: ರಾಜಕೀಯ ಇತಿಹಾಸ ನೀಡುವ ಸಂದೇಶ**: ಕರ್ನಾಟಕದ 75 ವರ್ಷಗಳ ರಾಜಕೀಯ ಚರಿತ್ರೆಯಲ್ಲಿ ಎರಡು ಅಂಶಗಳು ಸ್ಪಷ್ಟವಾಗಿವೆ:

1. ಆಂತರಿಕ ಕಲಹವೇ ಸೋಲಿಗೆ ಮೂಲ: ಯಾವಾಗ ಆಡಳಿತ ಪಕ್ಷದ ನಾಯಕರು ಸಾರ್ವಜನಿಕವಾಗಿ ಕಿತ್ತಾಡಿದ್ದಾರೋ (1989ರಲ್ಲಿ ಜನತಾದಳ, 1994ರಲ್ಲಿ ಕಾಂಗ್ರೆಸ್, 2013ರಲ್ಲಿ ಬಿಜೆಪಿ), ಆಗೆಲ್ಲ ಮತದಾರರು ವಿರೋಧ ಪಕ್ಷಕ್ಕೆ ಪೂರ್ಣ ಬಹುಮತ ನೀಡಿದ್ದಾರೆ.









2. ಪ್ರಾದೇಶಿಕ ಪಕ್ಷಗಳ ಅಳಿವು-ಉಳಿವು: ದೇವರಾಜ ಅರಸು ಅವರಿಂದ ಹಿಡಿದು ಯಡಿಯೂರಪ್ಪನವರವರೆಗೆ ಯಾರೇ ರಾಷ್ಟ್ರೀಯ ಪಕ್ಷ ಬಿಟ್ಟು ಪ್ರಾದೇಶಿಕ ಪಕ್ಷ ಕಟ್ಟಿದರೂ, ಅದು ಅಧಿಕಾರ ಹಿಡಿಯುವಲ್ಲಿ ವಿಫಲವಾಗಿದೆ.



ಇಂದು ಸಿದ್ಧರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವೆ ನಡೆಯುತ್ತಿರುವ ಅಧಿಕಾರ ಹಂಚಿಕೆಯ ಚರ್ಚೆಗಳು ಇತಿಹಾಸದ ಈ ಪುಟಗಳನ್ನು ಮತ್ತೆ ನೆನಪಿಸುತ್ತಿವೆ. ರಾಜ್ಯದ ಅಭಿವೃದ್ಧಿಗಿಂತ ವೈಯಕ್ತಿಕ ಪ್ರತಿಷ್ಠೆಯೇ ಮೇಲಾದರೆ, ಇತಿಹಾಸವು ಮತ್ತೆ ಪುನರಾವರ್ತನೆಯಾಗುವ ಸಾಧ್ಯತೆಗಳಿರುತ್ತವೆ. ಪ್ರಬುದ್ಧ ಕರ್ನಾಟಕದ ಮತದಾರರು ಸ್ಥಿರ ಸರ್ಕಾರ ಮತ್ತು ಸಮರ್ಥ ಆಡಳಿತವನ್ನು ನಿರೀಕ್ಷಿಸುತ್ತಿದ್ದಾರೆಯೇ ಹೊರತು, ಕೇವಲ ಗದ್ದುಗೆಯ ಸಮರವನ್ನಲ್ಲ.



| ರಚನೆ : ಸ್ವಾಮಿನಾಥನ್
ಮೊಬೈಲ್ : 9880041516
Email : Swamynathann@gmail.com



ಸಿನಿಮಾ ವರದಿ: ಬಿ.ಜಿ.ರವಿಕುಮಾರ್





## ಚಿಣ್ಣರು ಚಿಕ್ಕವರು ಅಲ್ಲ, ಕೋಣರು ಅಲ್ಲ

ಪ್ರಸ್ತುತ ಚಂದನವನದಲ್ಲಿ ಬೆರಳಣಿಕೆಯಷ್ಟು ಮಕ್ಕಳ ಚಿತ್ರಗಳು ಬರುತ್ತಿವೆ. ಆ ಸಾಲಿಗೆ ಚಿಕ್ಕವರು ಕೋಣರಲ್ಲ ಸೇರ್ಪಡೆಯಾಗಿದೆ. ಹೆಚ್‌ಯುಇ ಆರ್ಟ್ಸ್ ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ಪ್ರಕಾಶ್ ಚಿನ್ನಪ್ಪ ಸಿನಿಮಾಕ್ಕೆ ಕಥೆ, ಚಿತ್ರಕಥೆ, ನಿರ್ದೇಶನ ಜತೆಗೆ ಬಂಡವಾಳ ಹೂಡಿದ್ದಾರೆ. ಇವರೊಂದಿಗೆ ನೇತ್ರಬಾಬು–ಶ್ವೇತ–ಜಮೀಲ–ನಾಜಿಯ ಖಾಜಿ–ಸತೀಶ್ ನಿರ್ಮಾಣದಲ್ಲಿ ಕೈ ಜೋಡಿಸಿದ್ದಾರೆ. ಮೊನ್ನೆಯಷ್ಟೇ ಮಾಧ್ಯಮದವರಿಗೆ ವಿಶೇಷ ಪ್ರದರ್ಶನ ಹಾಗೂ ಟ್ರೇಲರ್ ಬಿಡುಗಡೆ ಸಮಾರಂಭವು ಶ್ರೀ ರೇಣುಕಾಂಬ ಸ್ಟುಡಿಯೋದಲ್ಲಿ ಅದ್ದೂರಿಯಾಗಿ ನಡೆಯಿತು.

ಮುಖ್ಯ ಪಾತ್ರದಲ್ಲಿ ಚಿಣ್ಣರುಗಳಾದ ಸೆಹರಿ, ತಿಷ್ಯ, ಹನ್ಸಿಕಾ, ಶ್ರೀವಾಸ್, ವಿಯಾನ್, ಶ್ರೀಗೌರಿ ಮತ್ತು ಶ್ರೀವಾಸ್ ಅಭಿನಯಸಿದ್ದಾರೆ. ಉಳಿದಂತೆ ಹಿರಿಯ ಕಲಾವಿದರುಗಳಾದ ರಮೇಶ್‌ಭಟ್, ಸುಂದರರಾಜ್ ಹಾಗೂ ಅನಿತಾಭಟ್ ಅಭಿನಯ ಸಿನಿಮಾಕ್ಕೆ ಕಳಸ ಇಟ್ಟಂತೆ ಆಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು, ಐದರಿಂದ ಹನ್ನೊಂದು ವರ್ಷದವರೆಗಿನ ಮಕ್ಕಳಲ್ಲಿ ಸಾಕಷ್ಟು ಬದಲಾವಣೆಗಳು ಆಗುತ್ತದೆ. ಆ ವಯಸ್ಸಿನ ಮಕ್ಕಳು ತುಂಬ ಬುದ್ದಿಶಾಲಿಗಳು ಆಗಿದ್ದು, ಅವರ ಚಿಂತನೆ, ರೀತಿ, ನೀತಿ ಮತ್ತು ಆಲೋಚನೆಗಳೇ ವಿನೂತನವಾಗಿರುತ್ತದೆ. ಇಪ್ಪತ್ತು ವರ್ಷಗಳ ನಂತರ ಜಗತ್ತು ಯಾವ ತರಹ ಬದಲಾವಣೆ ಆಗುತ್ತದೆ. ಗ್ಲೋಬಲ್ ವಾರ್ಮಿಂಗ್ ಆದಾಗ, ಮಕ್ಕಳು ತಮ್ಮ ಜಾಗವನ್ನು ಉಳಿಸಿಕೊಳ್ಳಲು ಹೇಗೆಲ್ಲ ಸಾಹಸ ಮಾಡುತಾರೆ. ಇದರ ಮಧ್ಯೆ ಹಿರಿಯ ನಾಗರಿಕರ ಅಣ್ಣ–ತಮ್ಮ ನಡುವೆ ಪ್ರೀತಿ ಹಾಗೂ ಪರಸ್ಪರ ತಿಳುವಳಿಕೆಯಿಂದ ಹಳೆಯ ಭಿನ್ನಾಭಿಪ್ರಾಯಗಳನ್ನು ಹೇಗೆ ಬಗೆಹರಿಸುತ್ತಾರೆ. ಕೊನೆಗೆ ಆರು ಮಕ್ಕಳು ಹಿರಿಯರಿಗೆ ಗೌರವ ನೀಡುತ್ತಾ, ಬದಲಾವಣೆ ತರುವ ಮೂಲಕ ಜ್ಞಾನ ಮತ್ತು ಸಂಸ್ಕಾರದ ಸಮತೋಲನವನ್ನು ಹೇಗೆ ಎತ್ತಿ ಹಿಡಿಯುತ್ತಾರೆ ಎಂಬುದನ್ನು ಸಿನಿಮಾದಲ್ಲಿ ಅರ್ಥಪೂರ್ಣ ಸನ್ನಿವೇಶಗಳೊಂದಿಗೆ ತೋರಿಸಲಾಗಿದೆ ಎಂಬುದಾಗಿ ಪ್ರಕಾಶ್ ಚಿನ್ನಪ್ಪ ಮಾಹಿತಿ ತೆರೆದಿಟ್ಟರು.

ರಮೇಶ್‌ಭಟ್, ಸುಂದರರಾಜ್ ಹಾಗೂ ಅನಿತಾಭಟ್ ಚಿತ್ರೀಕರಣದ ಅನುಭವಗಳನ್ನು ಹಂಚಿಕೊಂಡು, ಮಕ್ಕಳೊಂದಿಗೆ ತಾವು ಮಕ್ಕಳಾಗಿದ್ದಕ್ಕೆ ಸಂತಸ ವ್ಯಕ್ತಪಡಿಸಿದರು. ಪ್ರಸನ್ನ–ಚಂದ್ರಶೇಖರ ಭಟ್ ಸಾಹಿತ್ಯದ ಎರಡು ಹಾಡುಗಳಿಗೆ ಉತ್ತಮ್‌ಕುಮಾರ್ ಸಂಗೀತ ಸಂಯೋಜಿಸಿದ್ದಾರೆ. ಛಾಯಾಗ್ರಹಣ–ಸಂಕಲನ ರಿಷಿಕೇಶ್, ಹಿನ್ನಲೆ ಶಬ್ದ ವಿವಾನ್ ಸೂರ್ಯ, ನೃತ್ಯ ರಕ್ಷ ಅವರದಾಗಿದೆ. ಸಾಗರ, ಹೊಸಬಾಳೆ ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದೆ. ಸೆನ್ಸಾರ್‌ನಿಂ ಪ್ರಶಂಸೆಗೆ ಒಳಗಾದ ಚಿತ್ರವನ್ನು ತೆರೆಗೆ ತರಲು ತಂಡವು ಯೋಜನೆ ರೂಪಿಸಿಕೊಂಡಿದೆ.

## 666 ಆಪರೇಷನ್ ಡ್ರೀಮ್ಗೆ ಅದ್ದೂರಿ ಸೆಟ್

ಶಿವರಾಜ್ ಕುಮಾರ್ ಹಾಗೂ ಡಾಲಿ ಧನಂಜಯ್ ಅಭಿನಯಿಸುತ್ತಿರುವ ಪ್ರಿಯಾಂಕಾ ಮೋಹನ್ , ಅದಿತಿ ಬಾಲನ್ ತಾರಾಬಳಗದಲ್ಲಿರುವ 666 ಆಪರೇಷನ್ ಟೀಮ್ ಚಿತ್ರೀಕರಣ ಸಾಗಿದೆ.

ಹೇಮಂತ್ ರಾವ್ ನಿರ್ದೇಶನದ 666 ಆಪರೇಷನ್ ಡ್ರೀಮ್ ಥಿಯೇಟರ್ ಚಿತ್ರದ ಹಾಡಿನ ಚಿತ್ರೀಕರಣಕ್ಕಾಗಿ ಕಂಠೀರವ ಸ್ಟುಡಿಯೋದಲ್ಲಿ ಅದ್ದೂರಿ ಸೆಟ್ ಹಾಕಲಾಗಿದೆ.

ರೆಟ್ರೋ ಹಾರ್ಟ್–ಡಿಸ್ಕೋ ಸೋಲ್ ಎಂಬ ಕ್ಯಾಪ್ಷನ್ ಕೊಟ್ಟು ಹೇಮಂತ್ ರಾವ್ ತೆರೆಹಿಂದಿನ ಒಂದಷ್ಟು ಫೋಟೋ ಹಂಚಿಕೊಂಡಿದ್ದಾರೆ.

ಕಲಾ ನಿರ್ದೇಶಕ ವಿಶ್ವಾಸ್ ಕಶ್ಯಪ್ ಅದಕ್ಕಾಗಿ ಭರ್ಜರಿಯಾದ ಸೆಟ್ ಹಾಕಿದ್ದಾರೆ.

ಹಾಡನ್ನು ಹೇಗೆ ಪ್ರಸ್ತುತಪಡಿಸಬೇಕು ಎಂಬ ಬಗ್ಗೆ ವಿಸ್ತಾರವಾದ ಚರ್ಚೆ ನಡೆಸಿದ್ದೇವೆ. ಇದು ಕೇವಲ ಹಾಡಲ್ಲ. ಆದರೆ ಚಿತ್ರದ ನಿರೂಪಣೆಯಲ್ಲಿ ಒಂದು ಅವಿಭಾಜ್ಯ ತುಣುಕು. ಚರಣ್ ರಾಜ್ ಮತ್ತು ಹೇಮಂತ್ ಅದ್ಭುತ ಜೋಡಿ ಎಂದರು ಸಂಗೀತ ನಿರ್ದೇಶಕ.



## ಅಯೋಗ್ಯ 2 ಹಾಡಿನ ಹಕ್ಕು 2 ಕೋಟಿಗೆ

ಸತೀಶ್ ನೀನಾಸಂ, ರಚಿತಾ ರಾಮ್ ಜೋಡಿಯ ಅಯೋಗ್ಯ 2 ಚಿತ್ರದ ಶೂಟಿಂಗ್ ಇತ್ತೀಚೆಗಷ್ಟೇ ಮುಕ್ತಾಯಗೊಂಡಿದೆ. ಮಹೇಶ್ ಕುಮಾರ್ ನಿರ್ದೇಶನದ ಈ ಚಿತ್ರ ಆರಂಭದಿಂದಲೂ ಸಖತ್ ಸದ್ದು ಮಾಡುತ್ತಲೇ ಬಂದಿದೆ. ಈಗಾಗಲೇ ಅಯೋಗ್ಯ ಭಾಗ 1 ಯಶಸ್ಸು ದಾಖಲಿಸಿದ್ದು, ಅದರ ಖುಷಿಯಲ್ಲೇ ಎರಡನೇ ಭಾಗವನ್ನು ಶುರು ಮಾಡಿತ್ತು ಚಿತ್ರತಂಡ. ಸದ್ಯ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿರುವ ಟೀಂ ಅಯೋಗ್ಯ , ಹೊಸದೊಂದು ಸುದ್ದಿ ಹರಿಬಿಟ್ಟಿದೆ.

ಅಯೋಗ್ಯ ಚಿತ್ರದ ಏನಮ್ಮಿ ಏನಮ್ಮಿ ಹಾಡು ಕನ್ನಡದ ಮೊದಲ 100 ಮಿಲಿಯನ್ ಗಡಿ ದಾಟಿದ ದಾಖಲೆ ಹೊಂದಿತ್ತು. ಇದೀಗ ಅದೇ ತಂಡದಿಂದ ಮತ್ತೊಂದು ಮ್ಯೂಸಿಕಲ್ ಮ್ಯಾಜಿಕ್ ಹೊಡಬರಲು ತಯಾರಿ ನಡೆಸಿದೆ ಚಿತ್ರತಂಡ. ಅದಕ್ಕೂ ಮುನ್ನ ಅಯೋಗ್ಯ–2 ಆಡಿಯೋ ರೈಟ್ಸ್ ವಿಷಯವಾಗಿ ಸೌಂಡು ಮಾಡುತ್ತಿದೆ. ಅಯೋಗ್ಯ ಚಿತ್ರದ ಆಡಿಯೋ ಹಕ್ಕು 9 ಲಕ್ಷಕ್ಕೆ ಬಿಕರಿಯಾಗಿತ್ತು. ಇದೀಗ ಅಯೋಗ್ಯ–2 ಅದಕ್ಕಿಂತಲೂ 20 ಪಟ್ಟು ಹೆಚ್ಚಿಗೆ ಮೊತ್ತಕ್ಕೆ ಬಿಕರಿಯಾಗಿದೆ. ಅರ್ಥಾತ್ ಅಯೋಗ್ಯ 2 ಆಡಿಯೋ ರೈಟ್ಸ್ ಬರೋಬ್ಬರಿ 2 ಕೋಟಿ ಕೊಟ್ಟು ಕೊಂಡುಕೊಂಡಿದೆ ಆನಂದ್ ಆಡಿಯೋ ಸಂಸ್ಥೆ.

ಈ ಬಗ್ಗೆ ಖುಷಿ ಹಂಚಿಕೊಂಡಿರುವ ನಿರ್ದೇಶಕ ಮಹೇಶ್, ಅಯೋಗ್ಯ ಚಿತ್ರದ ಎಲ್ಲಾ ಹಾಡುಗಳೂ ದೊಡ್ಡ ಮಟ್ಟದಲ್ಲಿ ಹಿಟ್ ಆಗಿದ್ದವು. ಅದರಲ್ಲೂ ಏನಮ್ಮಿ ಏನಮ್ಮಿ ಹಾಡು 100 ಮಿಲಿಯನ್ ಆಗಿತ್ತು. ಅದು ಕನ್ನಡದಲ್ಲಿ ಮೊದಲ ಬಾರಿ 100 ಮಿಲಿಯನ್ ಕ್ರಾಸ್ ಮಾಡಿದ ದಾಖಲೆ ಹೊಂದಿದೆ ಎಂಬುದು ಖುಷಿಯ ವಿಷಯ. ಇದೀಗ ಅದೇ ತಂಡದಿಂದ ಅಯೋಗ್ಯ 2 ಸಿದ್ಧವಾಗಿದೆ. ಇದರಲ್ಲೂ ಹಾಡುಗಳು ಒಂದಕ್ಕಿಂತ ಒಂದು ಅದ್ಭುತವಾಗಿವೆ. ಅರ್ಜುನ್ ಜನ್ಯ ಅವರು ಎಷ್ಟೇ ಬ್ಯುಸಿಯಾಗಿದ್ದರೂ ಹಾಡುಗಳನ್ನು ನೀಟಾಗಿ ಮಾಡಿಕೊಟ್ಟಿದ್ದಾರೆ. ಚೇತನ್ ಕುಮಾರ್ ಸಾಹಿತ್ಯವಿದೆ. ಎಲ್ಲಾ ವಿಷಯಗಳಲ್ಲೂ ಅಯೋಗ್ಯ 2 ದೊಡ್ಡ ಮಟ್ಟದಲ್ಲಿ ಸದ್ದು ಮಾಡಲಿದೆ ಎಂಬುದು ಅವರ ಭರವಸೆ.

ಅಯೋಗ್ಯ ಮೊದಲ ಭಾಗ ಎಲ್ಲಿಗೆ ಮುಗಿದಿತ್ತೋ, ಅದರ ಮರು ದಿನದಿಂದ ಚಿತ್ರ ಶುರುವಾಗುತ್ತದೆ. ಎರಡ್ಮೂರು ಹೊಸ ಪಾತ್ರಗಳು ಬರುತ್ತವೆ ಎನ್ನುವುದು ಬಿಟ್ಟರೆ, ಮಿಕ್ಕಂತೆ ಎಲ್ಲಾ ಪಾತ್ರಗಳು ಮುಂದುವರಿಯುತ್ತವೆ. ಅಯೋಗ್ಯ ಕೊನೆಯಲ್ಲಿ ಗ್ರಾಮ ಪಂಚಾಯ್ತಿ ಸದಸ್ಯನಾಗುವ ಸಿದ್ದೇಗೌಡ ಮುಂದೆ ಏನೆಲ್ಲಾ ಸವಾಲುಗಳನ್ನು ಎದುರಿಸುತ್ತಾನೆ ಎನ್ನುವುದು ಚಿತ್ರದ ಕಥೆ ಅಂತಾರೆ ನಿರ್ದೇಶಕ ಮಹೇಶ್ ಕುಮಾರ್.

ಬಿಡುಗಡೆಗೆ ಅಣಿಯಾಗುತ್ತಿರುವ ಈ ಚಿತ್ರಕ್ಕೆ ಎಂ.ಮುನೇಗೌಡ ಬಂಡವಾಳ ಹೂಡಿದ್ದಾರೆ.

ಸುಂದರ್ ರಾಜ್, ಶಿವರಾಜ್ ಕೆ.ಆರ್.ಪೇಟೆ, ಅರುಣಾ ಬಾಲರಾಜ್, ಮಂಜು ಪಾವಗಡ ತಾರಾಗಣದಲ್ಲಿದ್ದಾರೆ. ಅರ್ಜುನ್ ಜನ್ಯ ಸಂಗೀತ, ಮಾಸ್ತಿ ಉಪ್ಪಾರಳ್ಳಿ ಸಂಭಾಷಣೆ, ಶಾಖಾಹಾರಿ ಚಿತ್ರಕ್ಕೆ ಛಾಯಾಗ್ರಹಣ ಮಾಡಿದ್ದ ವಿಶ್ವಜಿತ್ ರಾವ್ ಈ ಚಿತ್ರದ ಕ್ಯಾಮೆರಾಮನ್.



## `ಶಿಖಂಡಿ` ಮೇ 15 ಕ್ಕೆ ತೆರೆಗೆ

ಪೋಲಾ ಪ್ರವೀಣ್ ಕುಮಾರ್ ನಿರ್ಮಾಣದ ಹಾಗೂ ಗುರುಮೂರ್ತಿ ವಿ ನಿರ್ದೇಶನದ "ಶಿಖಂಡಿ" ಚಿತ್ರ ಇದೇ ಮೇ 15 ರಂದು ಬಿಡುಗಡೆಯಾಗುತ್ತಿದೆ. ಅದಕ್ಕೆ ಪೂರ್ವಭಾವಿಯಾಗಿ ಚಿತ್ರದ ಹಾಡು ಹಾಗೂ ಟ್ರೇಲರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. ಶ್ರವಣಬೆಳಗೊಳದ ಶಾಸಕರಾದ ಸಿ.ಎನ್ ಬಾಲಕೃಷ್ಣ ಹಾಗೂ ಸಾಯಿ ಸತೀಶ್ ದೊಡ್ಡಯ್ಯ ಮುಖ್ಯ ಅತಿಥಿಗಳಾಗಿ ಆಗಮಿಸಿ ಚಿತ್ರತಂಡಕ್ಕೆ ಶುಭ ಕೋರಿದರು. ಹಾಡು ಹಾಗೂ ಟ್ರೇಲರ್ ಅನಾವರಣದ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಮಹಾಭಾರತದಲ್ಲಿ ಬರುವ "ಶಿಖಂಡಿ" ಪಾತ್ರವನ್ನು ಆಧರಿಸಿರುವ ಕಥಾಹಂದರ ಹೊಂದಿರುವ ಹಾಗೂ ಶೀರ್ಷಿಕೆಯಲ್ಲೇ ಕುತೂಹಲ ಮೂಡಿಸಿರುವ ಈ ಚಿತ್ರ ಬಹಳ ಚೆನ್ನಾಗಿ ಮೂಡಿಬಂದಿದೆ. ಚಿತ್ರ ಉತ್ತಮವಾಗಿ ಮೂಡಿಬರಲು ಕಲಾವಿದರು ಹಾಗೂ ತಂತ್ರಜ್ಞರ ಸಹಕಾರವೇ ಕಾರಣ. ನಿರ್ಮಾಪಕ ಪೋಲಾ ಪ್ರವೀಣ್ ಕುಮಾರ್ ಅವರು ಯಾವುದೇ ಕೊರತೆ ಬಾರದ ಹಾಗೆ ಚಿತ್ರ ನಿರ್ಮಾಣ ಮಾಡಿದ್ದಾರೆ. ಅವರಿಗೆ ವಿಶೇಷ ಧನ್ಯವಾದ. ಯುವರಾಜ್ ಎಂಬ ಯುವಪ್ರತಿಭೆ ನಾಯಕನಾಗಿ, ಖ್ಯಾತಿ ನಾಯಕಿಯಾಗಿ ನಟಿಸಿದ್ದಾರೆ. ಈಗಾಗಲೇ ಹಾಡುಗಳು ಹಾಗೂ ಟ್ರೇಲರ್ ಮೂಲಕ ಮೆಚ್ಚುಗೆ ಪಡೆದುಕೊಂಡಿರುವ ನಮ್ಮ ಚಿತ್ರ ಮೇ 15 ರಂದು ಕನ್ನಡದಲ್ಲಿ ಮೊದಲು ಬಿಡುಗಡೆಯಾಗುತ್ತಿದೆ. ಆನಂತರ ಉಳಿದ ಭಾಷೆಗಳಲ್ಲಿ ಪ್ಯಾನ್ ಇಂಡಿಯಾ ಚಿತ್ರವಾಗಿ ತೆರೆಗೆ ಬರಲಿದೆ. "ಮಾಲಾಶ್ರೀ" ಅಭಿನಯದ "ಮಾರಕಾಸ್ತ್ರ" ನಂತರ ನಾನು ನಿರ್ದೇಶಿಸಿರುವ ಎರಡನೇ ಚಿತ್ರವಿದು. ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ದೇಶಕ ಗುರುಮೂರ್ತಿ.

ಹೋಟೆಲ್ ಉದ್ಯಮಿಯಾಗಿರುವ ನಾನು ಈ ಚಿತ್ರದ ಮೂಲಕ ನಿರ್ಮಾಪಕನಾಗಿದ್ದೇನೆ. ಇದಕ್ಕೆ ಕಾರಣ ಇಂದು ಬಿಡುಗಡೆಯಾಗಿರುವ ಯಲ್ಲಮ್ಮ ತಾಯಿಯ ಹಾಡು. ಈ ಚಿತ್ರ ನಿರ್ಮಾಣ ಮಾಡಲು ನನ್ನನ್ನು ಗುರುಮೂರ್ತಿ ಅವರು ಎರಡು ತಿಂಗಳಿನಿಂದ ಸಂಪರ್ಕಿಸುತ್ತಿದ್ದರು. ಆದರೆ ಅವರು ಎರಡು ತಿಂಗಳ ನಂತರ ಬಂದಾಗ ಯಲ್ಲಮ್ಮ ತಾಯಿಯ ಹಾಡನ್ನು ಕೇಳಿಸಿದರು. ಹಾಡು ಕೇಳಿದ ತಕ್ಷಣ ಒಪ್ಪಿಕೊಂಡೆ. ನನ್ನ ಕುಟುಂಬ ಹಾಗೂ ಚಿತ್ರತಂಡದ ಸಹಕಾರದಿಂದ ಚಿತ್ರ ಚೆನ್ನಾಗಿ ಮೂಡಿಬಂದಿದೆ. ನಾನು ಕೂಡ ಈ ಚಿತ್ರದಲ್ಲಿ ನಟಿಸಿದ್ದೇನೆ. ಇದೇ ಮೇ 15 ರಂದು ಚಿತ್ರ ತೆರೆಗೆ ಬರುತ್ತಿದೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದು ನಿರ್ಮಾಪಕ ಪೋಲಾ ಪ್ರವೀಣ್ ಕುಮಾರ್ ತಿಳಿಸಿದರು.

ಮೂಲತಃ ಮೈಸೂರಿನವನಾದ ನನಗೆ ನಾಯಕನಾಗಬೇಕೆಂಬ ಹಂಬಲವಿತ್ತು. ಆ ಆಸೆ ಈ ಚಿತ್ರದ ಮೂಲಕ ಈಡೇರಿದೆ. ಸೂರ್ಯ ನನ್ನ ಪಾತ್ರದ ಹೆಸರು. ಅವಕಾಶ ನೀಡಿದ ನಿರ್ಮಾಪಕರಿಗೆ ಹಾಗೂ ನಿರ್ದೇಶಕರಿಗೆ ಧನ್ಯವಾದ ಎಂದರು ನಾಯಕ ಯುವರಾಜ್ ಗೌಡ.

"ಶಿಖಂಡಿ" ನನಗೂ ಸಹ ಮೊದಲ ಚಿತ್ರ ಎಂದು ನಾಯಕಿ ಖ್ಯಾತಿ ತಿಳಿಸಿದರು. ಉತ್ತಮ ಪಾತ್ರದಲ್ಲಿ ನಟಿಸಿರುವುದಕ್ಕೆ ಖುಷಿಯಾಗಿದೆ ಎಂದು ನಟ ನಿಖಿತಾಸ್ವಾಮಿ ಹೇಳಿದರು. ತಮ್ಮ ಪಾತ್ರದ ಬಗ್ಗೆ "ಬಿಗ್ ಬಾಸ್" ಖ್ಯಾತಿಯ ನೀತು, ವೇದ ಹಾಗೂ ಬಳ್ಳಾರಿಯ ಚಾಂದಿನಿ ವಿವರಣೆ ನೀಡಿದರು. ಮೊದಲ ಬಾರಿಗೆ ಮಂಗಳಮುಖಿ ಪಾತ್ರದಲ್ಲಿ ಅಭಿನಯಿಸಿರುವುದಾಗಿ ನಟ ರಾಘವೇಂದ್ರ (ರಾಘು) ಹೇಳಿದರು. ಯಲ್ಲಮ್ಮ ಹಾಡಿನ ಗೀತರಚನೆಕಾರ ಹಾಗೂ ಸಂಗೀತ ನಿರ್ದೇಶಕ ಮಂಜು ಕವಿ ಹಾಡಿನ ಕುರಿತು ಮಾಹಿತಿ ನೀಡಿದರು. ಸಹ ನಿರ್ಮಾಪಕಿ ಪೋಲಾ ಲಕ್ಷ್ಮೀ, ನಿರ್ಮಾಪಕ ಪೋಲಾ ಪ್ರವೀಣ್ ಕುಮಾರ್ ಅವರ ಪುತ್ರ ಕರಣ್, ಸೊಸೆ ಹಾಗೂ ಮಗಳು ನಮ್ರತಾ ಸಮಾರಂಭದಲ್ಲಿ ಉಪಸ್ಥಿತರಿದ್ದರು.







## ಹೊರಬಂತು ಮದನಿಕ ಟೀಸರ್ ಮತ್ತು ಹಾಡು

ಇಲ್ಲಿಯವರೆಗೆ ಗ್ಲಾಮರಸ್ ಮತ್ತು ಆ ಯಕ್ಷನ್ ಪಾತ್ರಗಳ ಮೂಲಕ ಕನ್ನಡ ಸಿನಿಪ್ರಿಯರ ಗಮನ ಸೆಳೆದಿರುವ ನಟಿ ರಾಗಿಣಿ ದ್ವಿವೇದಿ ಈ ಬಾರಿ ಮದನಿಕ ಎಂಬ ಪಿರಿಯಾಡಿಕ್ ಪಾತ್ರದ ಮೂಲಕ ಪ್ರೇಕ್ಷಕರ ಮುಂದೆ ಬರುವ ತಯಾರಿಯಲ್ಲಿದ್ದಾರೆ. ಮದನಿಕ ಎಂಬುದು ದೇವಾಲಯಗಳಲ್ಲಿ ಕಾಣುವಂಥ ಶಿಲ್ಪಕಲೆಯ ಒಂದು ಪ್ರಾಕಾರವಾಗಿದ್ದು, ಚಿತ್ರದ ಕಥೆಗೆ ಸೂಕ್ತವೆಂಬ ಕಾರಣಕ್ಕೆ ಚಿತ್ರತಂಡ ಈ ಹೆಸರನ್ನು ತಮ್ಮ ಚಿತ್ರಕ್ಕೆ ಇಟ್ಟುಕೊಂಡಿದೆ. ಈಗಾಗಲೇ ಸದ್ದಿಲ್ಲದೆ ಮದನಿಕ ಸಿನಿಮಾದ ಬಹುತೇಕ ಕೆಲಸಗಳು ಪೂರ್ಣಗೊಂಡಿದ್ದು, ಇದೀಗ ಚಿತ್ರತಂಡ ಮದನಿಕ ಚಿತ್ರದ ಟೀಸರ್ ಮತ್ತು ಆಡಿಯೋವನ್ನು ಬಿಡುಗಡೆಗೊಳಿಸಿದೆ.

ಎಸ್.ಪಿ.ಆರ್ ಪ್ರೊಡಕ್ಷನ್ಸ್ ಮತ್ತು ಸಖರ್ಥ್ ಡಿಜಿಟಲ್ ಹೌಸ್ ಬ್ಯಾನರಿನಲ್ಲಿ ಸುಜಾತ ಲಕ್ಷ್ಮೀ, ಕುಮಾರಸ್ವಾಮಿ ನಿರ್ಮಿಸಿರುವ ಮದನಿಕ ಚಿತ್ರಕ್ಕೆ ಬಿ. ಎಸ್. ಸಂಜಯ್ ನಿರ್ದೇಶನವಿದೆ. ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಚಿತ್ರತಂಡದ ಸದಸ್ಯರು ಹಾಜರಿದ್ದು, ಮದನಿಕ ಚಿತ್ರದ ಟೀಸರ್ ಮತ್ತು ಹಾಡನ್ನು ಬಿಡುಗಡೆಗೊಳಿಸಿ ಚಿತ್ರದ ಬಗ್ಗೆ ಮಾತನಾಡಿದರು.

ಮೊದಲಿಗೆ ಮದನಿಕ ಬಗ್ಗೆ ಮಾತನಾಡಿದ ಚಿತ್ರದ ನಿರ್ದೇಶಕ ಬಿ. ಎಸ್. ಸಂಜಯ್, ಇದೊಂದು ಕಾಲ್ಪನಿಕ ಕಥೆ. ಸುಮಾರು ನಾಲ್ಕು ನೂರು ವರ್ಷಗಳ ಹಿಂದಿನಲ್ಲಿ ನಡೆಯುವಂಥ ಕಥೆಯಿದು. ಸಿನಿಮಾದಲ್ಲಿ ಎರಡು ಕಾಲಘಟ್ಟದ ಹಿನ್ನೆಲೆಯಲ್ಲಿ ಈ ಕಥೆ ತೆರೆದುಕೊಳ್ಳುತ್ತದೆ. ಹಳೇ ಗನ್ನಡ ಮತ್ತು ಹೊಸ ಕನ್ನಡ ಎರಡೂ ಶೈಲಿಯನ್ನೂ ಸಂದರ್ಭಕ್ಕೆ ತಕ್ಕಂತೆ ಈ ಸಿನಿಮಾದ ಸಂಭಾಷಣೆಯಲ್ಲಿ ಬಳಸಿಕೊಂಡಿದ್ದೇವೆ. ಸುಮಾರು ಎರಡು ವರ್ಷಗಳ ಕಾಲ ಸಿನಿಮಾದ ಪೋಸ್ಟ್ ಪ್ರೊಡಕ್ಷನ್ಸ್ ಕೆಲಸಗಳಿಗೆ ಸಮಯ ತೆಗೆದುಕೊಂಡಿದ್ದೇವೆ ಎಂದರು. ಸಿನಿಮಾದ ಕಥೆಗೆ ತಕ್ಕಂತೆ ಸುಮಾರು ಹತ್ತು ಹಾಡುಗಳು ಈ ಸಿನಿಮಾದಲಿದೆ. ಎಲಾ ಹಾಡುಗಳು ಕೂಡ ಶಾಸ್ತ್ರೀಯವಾಗಿ ಮೂಡಿಬಂದಿದೆ. ಹಳೆಗನ್ನಡದ ಮತ್ತು ಹೊಸಕನ್ನಡ ಶೈಲಿಯಲ್ಲಿ ಸಾಹಿತ್ಯವಿದೆ ಎಂದು ಚಿತ್ರದ ಹಾಡುಗಳು ಮತ್ತು ಸಾಹಿತ್ಯದ ಬಗ್ಗೆ ಮಾಹಿತಿ ನೀಡಿದರು ಸಂಗೀತ ನಿರ್ದೇಶಕ ಸಲಾಂ ವೇರೋಲಿ.

ಮದನಿಕ ಚಿತ್ರದ ಬಗ್ಗೆ ಮಾತನಾಡಿ ನಟಿ ರಾಗಿಣಿ ದ್ವಿವೇದಿ, ಇದೊಂದು ಟೈಂ ಟ್ರಾವೆಲ್ ಸಿನಿಮಾ. ಎರಡು ಕಾಲಘಟ್ಟದಲ್ಲಿ ಈ ಸಿನಿಮಾದ ಕಥೆ ಸಾಗುತ್ತದೆ. ನನಗೂ ಕೂಡ ಈ ಸಿನಿಮಾದಲ್ಲಿ ಎರಡು ಥರದ ಶೇಡ್ ಇರುವಂಥ ಪಾತ್ರವಿದೆ. ಲವ್, ಆ ಯಕ್ಷನ್, ಥ್ರಿಲ್ಲರ್, ಕ್ಲಾಸಿಕಲ್ ಮ್ಯೂಸಿಕ್ ಎಲ್ಲವೂ ಈ ಸಿನಿಮಾದಲ್ಲಿದೆ. ಇದು ನಮ್ಮ ನೇಟಿವಿಟಿಯನ್ನು ಇಟ್ಟುಕೊಂಡು ಮಾಡಿರುವ ಸಿನಿಮಾ. ಕಲಾವಿದರಿಗೆ ತಮ್ಮ ವೃತ್ತಿ ಜೀವನದಲ್ಲಿ ಬಹಳ ಅಪರೂಪಕ್ಕೆ ಇಂಥ ಪಾತ್ರಗಳು ಸಿಗುತ್ತದೆ. ಅಂಥ ಅಪರೂಪದ ಪಾತ್ರ ಈ ಸಿನಿಮಾದಲ್ಲಿ ನನಗೆ ಸಿಕ್ಕಿದೆ. ಮದನಿಕ ಸಿನಿಮಾದಲ್ಲಿ ಅಭಿನಯಿಸಿದ್ದು, ತುಂಬ ಒಳ್ಳೆಯ ಅನುಭವ. ಆದಷ್ಟು ಬೇಗ ಸಿನಿಮಾ ತೆರೆಗೆ ಬರಲಿದ್ದು, ಸಿನಿಮಾದ ಮೇಲೆ ಸಾಕಷ್ಟು ನಿರೀಕ್ಷೆಯಿದೆ ಎಂದು ತಮ್ಮ ಪಾತ್ರ ಪರಿಚಯ ಮಾಡಿಕೊಟ್ಟರು.


ಮದನಿಕ ಚಿತ್ರದಲ್ಲಿ ರಾಗಿಣಿ ದ್ವಿವೇದಿ ಅವರೊಂದಿಗೆ ಧರ್ಮ ಕೀರ್ತಿರಾಜ್, ದೇವ್ ಗಿಲ್, ಹರೀಶ್ ರಾಜ್, ರಾಜ್ವಿ, ಶಶಿಕುಮಾರ್ ಮೊದಲಾದ ಕಲಾವಿದರು ಇತರ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಮದನಿಕ ಚಿತ್ರಕ್ಕೆ ಆರ್. ಗಿರಿ ಛಾಯಾಗ್ರಹಣ, ಚಿತ್ರದಲ್ಲಿ ಒಟ್ಟು ಹತ್ತು ಹಾಡುಗಳಿದ್ದು ಶಾಸ್ತ್ರೀಯ ಶೈಲಿಯಲ್ಲಿರುವ ಈ ಹಾಡುಗಳಿಗೆ ಸಲಾಂ ವೇರೋಲಿ ಸಂಗೀತ ಸಂಯೋಜಿಸಿದ್ದು, ಕೆ. ಕಲ್ಯಾಣ್, ಡಾ. ದೇವಾನಂದ್ ಮೊದಲಾದವರು ಸಾಹಿತ್ಯ ಒದಗಿಸಿದ್ದಾರೆ. ಮದನ್ ಹರಿಣಿ, ತ್ರಿಭುವನ್ ಹಾಡುಗಳಿಗೆ ನೃತ್ಯ ಸಂಯೋಜಿಸಿ ದ್ದಾರೆ. ಅಂದಹಾಗೆ ಇದೇ ಜುಲೈ

## ಲವ್ ಸೀಸನ್: ಮಳೆಯಾಗೋಹೊತ್ತಿಗೇ ಸಾಂಗ್ ಬಿಡುಗಡೆ!

ಒಂದು ವಿಭಿನ್ನ ಪ್ರೇಮ ಕಥನವೆಂಬ ಸುಳಿವಿನ ಮೂಲಕ ಪ್ರೇಕ್ಷಕರನ್ನು ಸೆಳೆದಿದ್ದ ಚಿತ್ರ ಲವ್ ಸೀಸನ್ಸ್. ಕೃತ್ವಿಕ್ ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಸಿನಿಮಾದ ಮೊದಲ ಲಿರಿಕಲ್ ವೀಡಿಯೋ ಸಾಂಗ್ ಇದೀಗ ಬಿಡುಗಡೆಗೊಂಡಿದೆ. ಈ ಮೂಲಕ ಮಧುರವಾದ ಸಾಹಿತ್ಯ, ಸಂಗೀತದ ಗೀತೆಯ ಮೂಲಕ ಲವ್ ಸೀಸನ್ಸ್ ಮ್ಯೂಸಿಕ್ ಹಂಗಾಮಕ್ಕೆ ಚಾಲನೆ ಸಿಕ್ಕಂತಾಗಿದೆ.

ಎನ್.ಆರ್ ಸ್ಟುಡಿಯೋ ಯೂಟ್ಯೂಬ್ ಚಾನೆಲ್‌ನಲ್ಲಿ ಮಳೆಯಾಗೋ ಮೊದಲೇ ಕೊಡೆ ಹಿಡಿದು ಬರುವೆ, ನಗು ಮುಗಿವಾ ಮೊದಲೇ ಹೊಸ ಖುಷಿಯ ಕೊಡುವೆ ಎಂಬ ಮೋಹಕ ಸಾಲುಗಳನ್ನು ಕಾಂತಾರಾ ಖ್ಯಾತಿಯ ಪ್ರಮೋದ್ ಮರವಂತೆ ಬರೆದಿದ್ದಾರೆ. ವೀರ್ ಸಮರ್ಥ್ ಸಂಗೀತ ಸಂಯೋಜಿಸಿರುವ ಗೀತೆಗೆ ಸರೆಗಮಪ ಸೀಸನ್ 10 ಸ್ಪರ್ಧಿಯಾಗಿ ಪ್ರಸಿದ್ಧಿ ಪಡೆದಿದ್ದ ಪ್ರಜ್ಞಾ ಮರಾಠೆ ಮತ್ತು ಅರ್ಮಾನ್ ಮಲಿಕ್ ಧ್ವನಿಯಾಗಿದ್ದಾರೆ. ಈ ಹಿಂದೆ ಟೀಸರ್ ಬಿಡುಗಡೆಯ ಸಂದರ್ಭದಲ್ಲಿಯೇ ವೀರ್ ಸಮರ್ಥ್ ಈ ಸಿನಿಮಾದ ಹಾಡುಗಳ ಬಗ್ಗೆ ಒಂದಷ್ಟು ವಿಚಾರಗಳನ್ನು ಹಂಚಿಕೊಂಡಿದ್ದರು. ಇದೀಗ ಬಿಡುಗಡೆಗೊಂಡಿರೋ ಹಾಡು ಆ ಮಾತುಗಳನ್ನು ನಿಜವಾಗಿಸಿದಂತಿದೆ.

ಎನ್.ಆರ್ ಸ್ಟುಡಿಯೋಸ್ ಬ್ಯಾನರ್‌ನಡಿಯಲ್ಲಿ ಎನ್.ಆರ್ ಮಂಜುನಾಥ (ನೀಲೇರಿ) ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಕೃತ್ವಿಕ್ ನಿರ್ದೇಶನ, ವೀರ್ ಸಮರ್ಥ್ ಸಂಗೀತ ಸಂಗೀತ



ನಿದೇಶನ ಈ ಚಿತ್ರಕ್ಕಿದೆ. ಕೆ.ಕಲ್ಯಾಣ್, ಪ್ರಮೋದ್ ಮರವಂತೆ ಮುಂತಾದವರು ಸಾಹಿತ್ಯ ಬರೆದಿದ್ದಾರೆ. ಅವಿನಾಶ ಶಾಸ್ತ್ರಿ ಛಾಯಾಗ್ರಹಣ, ಮಧು ತುಂಬಕೆರೆ ಸಂಕಲನ, ಭಜರಂಗಿ ಮೋಹನ್ ನೃತ್ಯ ಸಂಯೋಜನೆಯಿರುವ ಈ ಚಿತ್ರದಲ್ಲಿ ಮುಕುಂದ ರಾಮಸ್ವಾಮಿ ನಾಯಕನಾಗಿ ನಟಿಸಿದ್ದಾರೆ. ದಿಯಾ ಕೀರ್ತಿ, ಚಂದನಾ ಗೌಡ ಮತ್ತು ಶ್ವೇತಾ ಕೊಗ್ಲೂರು ನಾಯಕಿಯರಾಗಿ ಜೊತೆಯಾಗಿದ್ದಾರೆ.

## 'ಧೃತಿ' ಈ ವಾರ ತೆರೆಗೆ



ಮೂಲತಃ ಉದ್ಯಮಿಯಾಗಿರುವ ಜಗದೀಶ್ ಎಂ ಮೊದಲ ಬಾರಿಗೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ಛಾಯಾಗ್ರಹಣ ಮಾಡಿ ನಿರ್ದೇಶಿಸಿರುವ ಹಾಗೂ ನಿರ್ಮಾಣವನ್ನು ಮಾಡಿರುವ "ಧೃತಿ" ಚಿತ್ರ ಈ ವಾರ (ಮೇ 8) ರಂದು ತೆರೆಗೆ ಬರುತ್ತಿದೆ. ಗೀತಾ ದಾಮೋದರನ್ ಈ ಚಿತ್ರದ ಸಹ ನಿರ್ಮಾಪಕರು. ಶೋಷಣೆಗೆ ಒಳಗಾದ ಹೆಣ್ಣುಮಗಳೊಬ್ಬಳ ಸುತ್ತ "ಧೃತಿ" ಚಿತ್ರದ ಕಥೆ ಸಾಗುತ್ತದೆ. ಆದರೆ ನಾವು ಈ ಚಿತ್ರದಲ್ಲಿ ಶೋಷಣೆಯನ್ನು ವಿಜೃಂಭಿಸಿಲ್ಲ. ಸಮಸ್ಯೆಗೆ ಪರಿಹಾರವನ್ನು ಹೇಳಿದ್ದೇವೆ. ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಚಿತ್ರ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,